RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 71 ಪುಟ: 06 ಶನಿವಾರ 08-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ತಂಡೇಲ್: ಮೀನುಗಾರನ ಎಮೋಷನಲ್ ಪ್ರೇಮಕಥೆ

ಪ್ರಶಾಂತ್ ನೀಲ್‌ಗೆ ಇದೆ ಒಂದು ಒಸಿಡಿ

'ನಾನು ಸಾಯೋವರೆಗೂ ಇಲ್ಲೇ ಇರ್ತೀನಿ' ಪುಟ 6

## ಆಮ್ ಆದ್ಮಿ ಪಕ್ಷಕ್ಕೆ ಭಾರೀ ಹಿನ್ನಡೆ, ಕಾಂಗ್ರೆಸ್‌ಗೆ ಮುಖಭಂಗ

# ಗೆದ್ದು ಬೀಗಿದ ಬಿಜೆಪಿ

**ನವದೆಹಲಿ:** ದೇಶದ ರಾಜಧಾನಿ ದೆಹಲಿಯಲ್ಲಿ 27 ವರ್ಷಗಳ ನಂತರ ಭಾರತೀಯ ಜನತಾ ಪಕ್ಷ ತನ್ನ ಕನಸನ್ನು ನನಸು ಮಾಡಿಕೊಂಡಿದೆ. ಸುದೀರ್ಘ ಕಾಲದ ನಂತರ ಇದೇ ಮೊದಲ ಬಾರಿಗೆ ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಗಿದೆ.


ದೆಹಲಿ ವಿಧಾನಸಭೆಯ 70 ಕ್ಷೇತ್ರಗಳಿಗೆ ನಡೆದ ಮತದಾನದ ಫಲಿತಾಂಶ ಇಂದು ಪ್ರಕಟಗೊಂಡಿದ್ದು, ಬಿಜೆಪಿ ಪ್ರಚಂಡ ಬಹುಮತ ಪಡೆದಿದೆ.

ಆಡಳಿತಾರೂಢ ಆಮ್‌ಆದ್ಮಿ ಪಕ್ಷಕ್ಕೆ ಈ ಚುನಾವಣೆಯಲ್ಲಿ ಭಾರೀ ಹಿನ್ನಡೆಯಾಗಿದ್ದು, ಪಕ್ಷದ ಘಟಾನುಘಟಿಗಳಿಗೆ ಇಲ್ಲಿ ನೆಲಕಚ್ಚಿದ್ದಾರೆ. ಪ್ರತಿಪಕ್ಷದ ಸ್ಥಾನದಲ್ಲಿ ಕುಳಿತಿರುವ ಕಾಂಗ್ರೆಸ್ ಕೂಡ ಹೀನಾಯ ಸೋಲು ಕಂಡಿದೆ.

ದೆಹಲಿಯಲ್ಲಿ ಮೋದಿ ಕಮಾಲ್ ಮುಂದೆ ಕಾಂಗ್ರೆಸ್ ಮತ್ತು ಆಪ್ ಪಕ್ಷದ ಚಮತ್ಕಾರ ನಡೆದಿಲ್ಲ. ಈ ಬಾರಿ ಅಲ್ಲಿಯ ಜನ ಭಾರತೀಯ ಜನತಾ ಪಕ್ಷದ ಕೈ ಹಿಡಿದಿದ್ದು, ಯಾವುದೇ ಪಕ್ಷದ ಬೆಂಬಲವಿಲ್ಲದೇ ಅಧಿಕಾರ ನಡೆಸುವಷ್ಟು ಬಹುಮತವನ್ನು ಬಿಜೆಪಿ ಪಡೆದುಕೊಂಡಿದೆ.

ಮಧ್ಯಾಹ್ನದ ವೇಳೆಗೆ ಸುಮಾರು 47 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ್ದ ಭಾರತೀಯ ಜನತಾ ಪಕ್ಷ 24 ಕ್ಷೇತ್ರಗಳಲ್ಲಿ ತನ್ನ ಅಧಿಕೃತ ಗೆಲುವನ್ನು ದಾಖಲಿಸಿತ್ತು. 23 ಕ್ಷೇತ್ರಗಳಲ್ಲಿ ಮುನ್ನಡೆಯಲ್ಲಿದ್ದ ಎಎಪಿ 14 ಕ್ಷೇತ್ರಗಳಲ್ಲಿ ತನ್ನ ಗೆಲುವು ದಾಖಲಿಸಿತ್ತು. ಆದರೆ ಕಾಂಗ್ರೆಸ್ ಪಕ್ಷ ಮಾತ್ರ ಶೂನ್ಯ ಸಾಧನೆಯಲ್ಲೇ ಇತ್ತು.

ಸುಮಾರು 47 ಕ್ಷೇತ್ರಗಳಲ್ಲಿ ಮುನ್ನಡೆಯಲ್ಲಿದ್ದ ಭಾರತೀಯ ಜನತಾ ಪಕ್ಷ ಗೆಲುವು ಸಾಧಿಸಿತ್ತಲ್ಲದೇ ಸುಮಾರು 23 ಕ್ಷೇತ್ರಗಳಲ್ಲಿ ಮುನ್ನಡೆ ಕಾದುಕೊಂಡಿತ್ತು.14 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿಕೊಂಡಿದ್ದ ಆಪ್ ಸುಮಾರು 9 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿತ್ತು. ಭಾರತೀಯ ಜನತಾ ಪಕ್ಷಕ್ಕೂ ಹಾಗೂ ಆಪ್ ಪಕ್ಷಗಳ ನಡುವೆ ಗೆಲುವಿನಲ್ಲಿ ಭಾರೀ ಅಂತರವಿದ್ದ ಕಾರಣ ಬಿಜೆಪಿಗೆ ಗೆಲುವು ಖಚಿತ ಎಂಬ ಮಾಹಿತಿ ಲಭ್ಯವಾಗಿದೆ.



ಎರಡೂ ಪಕ್ಷಗಳು ತೀವ್ರ ಪೈಪೋಟಿ ನಡುವೆಯೂ ತಮ್ಮ ಅಸ್ತಿತ್ವವನ್ನು ಉಳಿಸಿಕೊಳ್ಳುವಲ್ಲಿ ಯಶಸ್ವಿಯಾದ ವಾದರೂ, ಕಾಂಗ್ರೆಸ್ ಮಾತ್ರ ಹೀನಾಯ ಸೋಲಿನತ್ತ ಜಾರಿತು. ಉಳಿದಂತೆ ಇತರರು ಕೂಡ ಶೂನ್ಯ ಸಾಧನೆ ಪ್ರದರ್ಶಿಸಿದರು.

ದೇಶದಲ್ಲಿ ಕಳೆದ ಹತ್ತು ವರ್ಷಗಳಿಂದ ಆಡಳಿತ ನಡೆಸುತ್ತಿರುವ ಭಾರತೀಯ ಜನತಾ ಪಕ್ಷ 27 ವರ್ಷಗಳಿಂದ ದೆಹಲಿ ಜನರ ಮನಸ್ಸನ್ನು ಗೆದ್ದಿರಲಿಲ್ಲ. ಆದರೆ ಈ ಬಾರಿ ಗೆಲುವು ಸಾಧಿಸಿ ಅಧಿಕಾರ ಚುಕ್ಕಾಣಿ ಹಿಡಿಯುವಲ್ಲಿ ಯಶಸ್ವಿಯಾಗಿದೆ.

ಅಣ್ಣಾ ಹಜಾರೆ ಅವರ ಹೋರಾಟದ ಫಲವಾಗಿ ಅಧಿಕಾರದ ಚುಕ್ಕಾಣಿ ಹಿಡಿದಿದ್ದ ಆಮ್‌ಆದ್ಮಿ ಪಕ್ಷ ನಿರಂತರವಾಗಿ ಭ್ರಷ್ಟಾಚಾರದ ಸುಳಿಯಲ್ಲಿ ಸಿಲುಕಿದ್ದಲ್ಲದೇ, ಒಂದಲ್ಲ ಒಂದು ಅವ್ಯವಹಾರದ ಆರೋಪಕ್ಕೆ ಗುರಿಯಾಗುತ್ತಲೇ ಬಂದ ಹಿನ್ನೆಲೆಯಲ್ಲಿ ಆ ಪಕ್ಷವನ್ನು ದೆಹಲಿಯ ಜನ ಬಹುತೇಕ ತಿರಸ್ಕರಿಸಿದ್ದಾರೆ.

ಪಕ್ಷದ ನಾಯಕ ಅರವಿಂದ್ ಕೇಜ್ರಿವಾಲ್ ಹಾಗೂ ಡಿಸಿಎಂ ಮನೀಶ್ ಸಿಸೋಡಿಯಾ ಕೂಡ ಇಲ್ಲಿ ಸೋಲು ಕಂಡಿದ್ದಾರೆ. ಮುಖ್ಯಮಂತ್ರಿ ಅತಿಶಿ ಅವರಿಗೂ ಗೆಲುವಿನ ಹಾದಿ ಸುಲಭವೇನೂ ಆಗಲಿಲ್ಲ. ಅವರು ಕೂಡ ಕೊನೆ ಕ್ಷಣದಲ್ಲಿ ಅತ್ಯಲ್ಪ ಮತಗಳ ಅಂತರದಿಂದ ಗೆಲುವನ್ನು ತಮ್ಮದಾಗಿಸಿಕೊಂಡಿದ್ದಾರೆ.

ಇನ್ನೂ ಕಾಂಗ್ರೆಸ್ ಪಕ್ಷದ ಬಗ್ಗೆ ಹೇಳುವುದಾದರೆ ಕರ್ನಾಟಕದಲ್ಲಿ ರೂಪಿಸಿದ ಗ್ಯಾರಂಟಿ ಯೋಜನೆಗಳ ತಂತ್ರಗಾರಿಕೆಯನ್ನೇ ಅಲ್ಲಿಯೂ ಕೂಡ ಬಳಸಿ ಮುಗ್ಗರಿಸಿದೆ.

ಈ ಬಾರಿ ಮೋದಿ ನೇತೃತ್ವದ ಬಿಜೆಪಿ(ಭಾರತೀಯ ಜನತಾ ಪಾರ್ಟಿ) ದೆಹಲಿಯಲ್ಲಿ ಅಧಿಕಾರದ ಚುಕ್ಕಾಣಿ ಹಿಡಿಯುತ್ತಿದೆ.

### ದೆಹಲಿ ವಿಧಾನಸಭೆ ಚುನಾವಣೆ ಪಕ್ಷಗಳ ಬಲಾಬಲ

| ಒಟ್ಟು ಸ್ಥಾನಗಳು: | ಕಾಂಗ್ರೆಸ್ | ಬಿಜೆಪಿ | ಎಎಪಿ | ಇತರೆ |
|---|---|---|---|---|
| 70 | 00 | 47 | 23 | 0 |


## ಹಗರಣಗಳೇ ಎಎಪಿ ಕೊಚ್ಚಿ ಹೋಗುವಂತೆ ಮಾಡಿದೆ ಕೇಜ್ರಿವಾಲ್ ವಿರುದ್ಧ ಅಣ್ಣಾ ಹಜಾರೆ ವಾಗ್ದಾಳಿ



**ನವದೆಹಲಿ:** ದೆಹಲಿ ವಿಧಾನಸಭೆ ಚುನಾವಣೆ ಫಲಿತಾಂಶ ಹೊರಬಂದ ಬೆನ್ನಲ್ಲೇ ಇದೀಗ ಆಪ್ ಮುಖ್ಯಸ್ಥ ಮಾಜಿ ಸಿಎಂ ಅರವಿಂದ ಕೇಜ್ರಿವಾಲ್ ವಿರುದ್ಧ ಸಾಮಾಜಿಕ ಹೋರಾಟಗಾರ ಅಣ್ಣ ಹಜಾರೆ ವಾಗ್ದಾಳಿ ನಡೆಸಿದ್ದಾರೆ. ಈ ಕುರಿತು ಮಾತನಾಡಿರುವ ಅಣ್ಣಾ ಹಜಾರೆ, ಹಣದ ಆಸೆಗೆ ಅಬಕಾರಿ ಹಗರಣ ಮಾಡಿದರು. ಹಗರಣಗಳೇ ಈಗ ಆಪ್ ಕೊಚ್ಚಿ ಹೋಗುವಂತೆ ಮಾಡಿದೆ ಎಂದು ಕಿಡಿಕಾರಿದ್ದಾರೆ. ಅಭ್ಯರ್ಥಿಯ ನಡವಳಿಕೆ ಅಲೋಚನೆ ಶುದ್ದವಾಗಿರಬೇಕು. ಜೀವನವು ದೋಷರಹಿತವಾಗಿರಬೇಕು ತ್ಯಾಗ ಇರಬೇಕು. ಇದನ್ನ ನಾನು ಯವಾಗಲೂ ಹೇಳಿದ್ದೇನೆ. ಈ ಗುಣಗಳು ಜನರು ನಂಬಿಕೆ ಇಡಲು ಅನುವು ಮಾಡಿಕೊಡುತ್ತವೆ. ಈ ವಿಚಾರವನ್ನ ಹಿಂದಯೇ ಕೇಜ್ರಿವಾಲ್ ಗೆ ಹೇಳಿದ್ದೆ ಅದರೆ ಅವರು ಗಮನ ಹರಿಸಲಿಲ್ಲ ಎಂದರು. ಕೇಜ್ರಿವಾಲ್ ಮದ್ಯದ ಹಗರಣದಲ್ಲಿ ಮುಳುಗಿದ್ದರು. ಹಗರಣಗಳೇ ಅಪ್ ಕೊಚ್ಚಿ ಹೋಗುವಂತೆ ಮಾಡಿದೆ ಎಂದು ಅಣ್ಣ ಹಜಾರೆ ಹೇಳಿದರು.

## ಕೇಜ್ರಿವಾಲ್‌ಗೆ ಭಾರಿ ಆಘಾತ: ಮಾಜಿ ಡಿಸಿಎಂ ಮನೀಶ್ ಸಿಸೋಡಿಯಾಗೂ ಸೋಲು





**ನವದೆಹಲಿ:** ದೆಹಲಿ ವಿಧಾನಸಭಾ ಚುನಾವಣೆಯ ಫಲಿತಾಂಶ ಭಾಗಶಃ ಹೊರಬಿದ್ದಿದ್ದು, ಆಡಳಿತಾರೂಢ ಆಮ್ ಆದ್ಮಿ ಪಕ್ಷದ ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್ ಹಾಗೂ ಮಾಜಿ ಡಿಸಿಎಂ ಮನೀಶ್ ಸಿಸೋಡಿಯಾ ಸೋಲು ಅನುಭವಿಸಿದ್ದಾರೆ. 70 ಸ್ಥಾನಗಳಲ್ಲಿ ಬಹುಮತಕ್ಕೆ ಅಗತ್ಯವಿರುವ 40 ಸ್ಥಾನಗಳಿಗಿಂತ ಹೆಚ್ಚಿನ ಸ್ಥಾನಗಳಲ್ಲಿ ಬಿಜೆಪಿ ಮುನ್ನಡೆ ಸಾಧಿಸಿದೆ.

ಜಿದ್ದಾ ಜಿದ್ದಿನ ಕದನದಲ್ಲಿ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಬಿಜೆಪಿಯ ಪರ್ವೇಶ್ ವರ್ಮಾ ವಿರುದ್ಧ 3 ಸಾವಿರ ಮತಗಳಿಂದ ಪರಾಜಯಗೊಂಡರೆ, ಜಂಗ್‌ಪುರ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧೆ ಪುಟ 2

## ಎಐಸಿಸಿ ಮತ್ತು ಕೆಪಿಸಿಸಿ ಸೋಲನ್ನು ವಿಶ್ಲೇಷಿಸಿದೆ

ಬೆಂಗಳೂರು: ದೆಹಲಿ ವಿಧಾನಸಭಾ ಚುನಾವಣೆಯಲ್ಲಿನ ಸೋಲನ್ನು ಎಐಸಿಸಿ ಹಾಗೂ ಕೆಪಿಸಿಸಿ ಎರಡೂ ವಿಶ್ಲೇಷಿಸಲಿವೆ. ಫಲಿತಾಂಶದ ಬಳಿಕವೇ ವಿಶ್ಲೇಷಣೆ ಸಾಧ್ಯ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. 70 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಒಬ್ಬೇ ಒಬ್ಬ ಅಭ್ಯರ್ಥಿಯೂ ಮುನ್ನಡೆ ಸಾಧಿಸಿಲ್ಲ. ಕಾಂಗ್ರೆಸ್ ಮತ್ತು ಅಪ್ ಪಕ್ಷಗಳ ನಡುವೆ ಮೈತ್ರಿ ಏರ್ಪಟ್ಟು ಹೋರಾಟ ನಡೆಸಿದ್ದರೆ ಬಿಜೆಪಿ ಗೆಲ್ಲುವುದು ಸಾಧ್ಯವಾಗುತ್ತಿರಲಿಲ್ಲ ಎಂದು ಅವರು ತಿಳಿಸಿದರು. ಅನ್ಯ ರಾಜ್ಯ ಚುನಾವಣೆ ನಮ್ಮ ಮೇಲೆ ಪ್ರಭಾವ ಬೀರಲ್ಲ, ಲೋಕಸಭಾ ಚುನಾವಣೆಯಲ್ಲಿ ಬೇರೆ ವಿಷಯಗಳು ಚರ್ಚೆಗೆ ಬಂದು ಮೈತ್ರಿ ಏರ್ಪಡುತ್ತದೆ, ವಿಧಾನಸಭಾ ಚುನಾವಣೆ ಸ್ಥಳೀಯ ಇಶ್ಯೂಗಳ ಮೇಲೆ ನಡೆಯುತ್ತದೆ, ಮೈತ್ರಿ ವರ್ಕೌಟ್ ಅಗಲ್ಲ.

## ಆಪ್ ಭ್ರಷ್ಟಾಚಾರದಿಂದ ಜನ ರೋಸಿದ್ದಾರೆ

**ಬೆಂಗಳೂರು:** ದೆಹಲಿಯಲ್ಲಿ ಆಮ್ ಆದ್ಮಿ ಪಕ್ಷದ ಆಡಳಿತ ವೈಖರಿ, ಭ್ರಷ್ಟಾಚಾರ ನೋಡಿ ಜನ ರೋಸಿ ಹೋಗಿ, ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿ ಆಡಳಿತ ನೋಡಿ ಜನರು ಬಿಜೆಪಿಗೆ ದೊಡ್ಡ ಪ್ರಮಾಣದ ಬೆಂಬಲ ನೀಡಿದ್ದಾರೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ದೆಹಲಿ ಚುನಾವಣೆ ಫಲಿತಾಂಶದ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದೆಹಲಿಯಲ್ಲಿ ಮೂವತ್ತು ವರ್ಷದ ನಂತರ ಬಿಜೆಪಿ ಅಧಿಕಾರಕ್ಕೆ ಬಂದಿದೆ. ಅಣ್ಣಾ ಹಜಾರೆ ನೇತೃತ್ವದ ಭ್ರಷ್ಟಾಚಾರ ವಿರೋಧಿ ಆಂದೋಲನಕ್ಕೆ ಬೆಂಬಲಿಸಿ ದೆಹಲಿ ಜನರು ಆಪ್ ಗೆ ಬೆಂಬಲಿಸಿದ್ದರು. ಆದರೆ, ಅವರ ಆಡಳಿತ ವೈಖರಿ ಭ್ರಷ್ಟಾಚಾರ ನೋಡಿ ಜನ ರೋಸಿ ಹೋಗಿದ್ದಾರೆ. ಪುಟ 2

## ಮೈಕ್ರೋ ಫೈನಾನ್ಸ್ ಸುಗ್ರೀವಾಜ್ಞೆ

# ರಾಜ್ಯಪಾಲರ ಪ್ರಶ್ನೆಗಳಿಗೆ ಸ್ಪಷ್ಟೀಕರಣ



**ಬೆಂಗಳೂರು:** ಮೈಕ್ರೋ ಫೈನಾನ್ಸ್ ಸುಗ್ರೀವಾಜ್ಞೆ ಸಂಬಂಧ ರಾಜ್ಯಪಾಲರು ಕೇಳಿದ ಪ್ರಶ್ನೆಗಳಿಗೆ ಕಾನೂನು ಸಚಿವ ಹೆಚ್.ಕೆ.ಪಾಟೀಲ್ ವಿವರವಾಗಿ ಸ್ಪಷ್ಟೀಕರಣ ನೀಡಿದ್ದಾರೆ.

ಆ ಸ್ಪಷ್ಟೀಕರಣದ ಕಡತವನ್ನು ನಾಳೆಯೊಳಗೆ ಸಿಎಂ ಕಚೇರಿ ಮೂಲಕ ರಾಜಭವನಕ್ಕೆ ಮರುಸಲ್ಲಿಸಲು ಮುಂದಾಗಿದೆ.

ನೋಂದಾಯಿತವಲ್ಲದ ಮತ್ತು ಸಾಲ ನೀಡಲು ಲೈಸನ್ಸ್ ಹೊಂದಿರದ ಯಾವುದೇ ವ್ಯಕ್ತಿಯು ಯಾರಿಗೇ ಸಾಲ ಕೊಡಲು ಮತ್ತು ಹೆಚ್ಚಿನ ಬಡ್ಡಿ ಮತ್ತು ಚಕ್ರಬಡ್ಡಿ ಅಥವಾ ದಂಡದ ಬಡ್ಡಿ ವಿಧಿಸಲು ಕಾನೂನಾತ್ಮಕವಾಗಿ ಅಧಿಕಾರ ಹೊಂದಿರುವುದಿಲ್ಲ. ಸಾಲವನ್ನು ಖಾಸಗಿಯಾಗಿ, ಲೈಸೆನ್ಸ್ ಇಲ್ಲದೇ ನೀಡಿ ಹೆಚ್ಚಿನ ಬಡ್ಡಿ ವಸೂಲಿ ಮಾಡಿದರೆ ಅದು ಕಾನೂನು ವಿರೋಧಿ ಕ್ರಮವಾಗಿದೆ. ಅಂತಹ ಸಾಲವು ವಸೂಲಿಗೆ ಅರ್ಹವೂ ಅಲ್ಲ, ಯೋಗ್ಯವೂ ಅಲ್ಲ ಎಂದು ಹೆಚ್.ಕೆ.ಪಾಟೀಲ್ ಸ್ಪಷ್ಟಪಡಿಸಿದ್ದಾರೆ.


ಕಾನೂನಿನ ಪ್ರಕಾರ ವಿಧಿಸಿದ ಬಡ್ಡಿ ಮೇರೆಗೆ ನೀಡಿದ ಸಾಲ ಮಾತ್ರ ವಸೂಲಿಗೆ ಅರ್ಹ. ಬೇರೆ ಯಾವುದೇ ಅಕ್ರಮ ಸಾಲ ಮತ್ತು ಬಡ್ಡಿ ವಸೂಲಾತಿ ಅರ್ಜಿಗಳನ್ನು ಕಾನೂನಾತ್ಮಕವಾಗಿ ನ್ಯಾಯಾಲಯಗಳು ಕೂಡಾ ವಿಚಾರಣೆಗೆ ಒಳಪಡಿಸಲು ಸಾಧ್ಯವೇ ಇಲ್ಲ. ಇಂತಹ ಸಾಲವನ್ನು ವಸೂಲಿ ಮಾಡಲು ಮತ್ತು ವಿಧಿಸಿದ ಬಡ್ಡಿಯನ್ನು ಕಾನೂನಾತ್ಮಕವಾಗಿ ಕೂಡ ವಸೂಲಾತಿಗೆ ಅವಕಾಶ ನೀಡಿದರೆ ಸಂವಿಧಾನದ ಬಹುದೊಡ್ಡ ರಕ್ಷಣೆಯು ಸಮಾಜದಲ್ಲಿ ಅಕ್ರಮ ಬಡ್ಡಿ ವಿಧಿಸಿ ಅಕ್ರಮವಾಗಿ ಕಾನೂನುಬಾಹಿರವಾಗಿ ಸಾಲ ವಸೂಲಿ ಮಾಡುವ ವ್ಯಕ್ತಿಗಳಿಗೆ ಲಭ್ಯವಾಗುತ್ತದೆ. ಇದು ಸಂವಿಧಾನ ಮತ್ತು ಕಾನೂನು ವಿರೋಧಿ. ಜೊತೆಗೆ ಸಮಾಜಕ್ಕೆ ಕಂಟಕ ತರುವಂತಹ ಕ್ರಮವೇ ಹೊರತು ಸಂವಿಧಾನಾತ್ಮಕವಾಗುವುದಿಲ್ಲ ಎಂದು ತಿಳಿಸಿದ್ದಾರೆ.

ನೈಸರ್ಗಿಕ ನ್ಯಾಯಕ್ಕೆ ಧಕ್ಕೆ ತರುವ ಅಂಶವಿಲ್ಲ: ಕಾನೂನಾತ್ಮಕವಾಗಿ ನೋಂದಾಯಿತ ಸಂಸ್ಥೆ ಅಥವಾ ವ್ಯಕ್ತಿಗಳು ನಿಯಮಾನುಸಾರ ನೈಜ ಸಾಲ ನೀಡಿದವರು ವಸೂಲಿ ಮಾಡಬಾರದೆಂದು ಅಥವಾ ಅಂತಹ ಸಾಲಗಳು ವಸೂಲಿಗೆ ಅರ್ಹವಲ್ಲವೆಂದು ರಾಜ್ಯಪಾಲರಿಗೆ ಸಲ್ಲಿಸಿರುವ ಸುಗ್ರೀವಾಜ್ಞೆಯಲ್ಲಿ ಸರ್ಕಾರ ಎಲ್ಲಿಯೂ ಹೇಳಿಲ್ಲ. ಕೇವಲ ಸಾಲ ವಸೂಲಾತಿಗೆ ಕಾನೂನು ಬಾಹಿರ ಕ್ರಮಗಳನ್ನು ಕೈಗೊಳ್ಳುವುದು, ಹಿಂಸೆ ಮಾಡುವುದು ಮತ್ತು ಒತ್ತಡ ತಂತ್ರ ಹೇರುವುದು ಹಾಗೂ ಕಿರುಕುಳಕ್ಕೆ ಕಾರಣವಾಗುವುದನ್ನು ತಡೆಯಲು/ನಿಷೇಧಿಸಲು ಸುಗ್ರೀವಾಜ್ಞೆ ಪ್ರಸ್ತಾಪಿಸುತ್ತದೆ. ನೈಸರ್ಗಿಕ ನ್ಯಾಯ ಮತ್ತು ಯಾವುದೇ ವ್ಯಕ್ತಿಯ ಹಕ್ಕುಗಳಿಗೆ ಮತ್ತು ಕಾನೂನಾತ್ಮಕ ಹೋರಾಟಕ್ಕೆ ಮೂಲಭೂತ ಹಕ್ಕುಗಳಿಗೆ ಧಕ್ಕೆತರುವಂತಹ ಯಾವುದೇ ಕ್ರಮ ಸುಗ್ರೀವಾಜ್ಞೆಯಲ್ಲಿ ಪ್ರಸ್ತಾಪಿಸಿಯೇ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಸಾಲ ಕೊಟ್ಟಿರುವ ಮೊತ್ತದ ಅನುಸಾರ ದಂಡನೆ ವಿಧಿಸಿಲ್ಲ: ಸಾಲ ಕೊಟ್ಟಿರುವ ಮೊತ್ತ ಪರಿಗಣಿಸಿ ದಂಡ ಅಥವಾ ದಂಡನೆ ವಿಧಿಸಿಲ್ಲ. ಸಾಲ ವಸೂಲಾತಿ ಪ್ರಕ್ರಿಯೆ ಸಂದರ್ಭದಲ್ಲಿ ಕಿರುಕುಳ/ಒತ್ತಡ ತಂತ್ರ, ಹಿಂಸೆ, ಕಿರುಕುಳ ನೀಡುವ ಮೂಲಕ ವಸೂಲಾತಿಯ ಕ್ರಮಗಳಿಗೆ ದಂಡ ಮತ್ತು ದಂಡನೆಯನ್ನು ಪ್ರಸ್ತಾಪಿಸಲಾಗಿದೆ. ಸಾಲ ವಸೂಲಾತಿಯ ಸಂದರ್ಭದಲ್ಲಿ ಕೈಗೊಳ್ಳಬಹುದಾದ ನಿರ್ದಿಷ್ಟ ಅಪರಾಧಗಳನ್ನು ಮಾತ್ರ ಈ ಕಾನೂನಿನ ವ್ಯಾಪ್ತಿಗೆ ತರಲಾಗಿದೆ. ಬೇರೆ ಬೇರೆ ಕಾನೂನುಗಳಲ್ಲಿ ಏನೇ ಅವಕಾಶಗಳಿದ್ದರೂ ಅಕ್ರಮ ಸಾಲ ವಸೂಲಾತಿಯ ಸಂದರ್ಭದಲ್ಲಿ ಮಾಡಲಾದ ಅಪರಾಧಗಳನ್ನು ಪುಟ 2

## ಉಪಚುನಾವಣಾ ಫಲಿತಾಂಶ: ಡಿಎಂಕೆಗೆ ಭಾರಿ ಮುನ್ನಡೆ; ಮಿಲ್ಕಿಪುರದಲ್ಲಿ ಬಿಜೆಪಿ ಲೀಡಿಂಗ್

**ಚೆನ್ನೈ/ ಲಕ್ನೋ:** ದೆಹಲಿ ವಿಧಾನಸಭಾ ಮತ ಎಣಿಕೆ ನಡುವೆ ತಮಿಳುನಾಡಿನ ಪೂರ್ವ ಈರೋಡ್ ಮತ್ತು ಉತ್ತರ ಪ್ರದೇಶದ ಮಿಲ್ಕಿಪುರ ಕ್ಷೇತ್ರದ ಉಪ ಚುನಾವಣೆ ಮತ ಎಣಿಕೆ ಕಾರ್ಯ ಭರದಿಂದ ಸಾಗಿದೆ.



ಬಿಗಿ ಭದ್ರತೆಯಲ್ಲಿ ಸಾಗಿದ ಈರೋಡ್ ಪೂರ್ವ ಕ್ಷೇತ್ರದ ಮತ ಎಣಿಕೆ ಕಾರ್ಯ ಈರೋಡ್‌ನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್‌ನಲ್ಲಿ ಸಾಗಿದೆ. ಬೆಳಗ್ಗೆ 8 ರಿಂದ ಅಂಚೆ ಮತಗಳ ಎಣಿಕೆ ಸಾಗಿದ್ದು, 8.30ರ ಬಳಿಕ ಎವಿಎಂ ಮತ ಎಣಿಕೆ ನಡೆದಿದೆ ಎಂದು ಚುನಾವಣಾ ಆಯೋಗದ ಅಧಿಕಾರಿಗಳು ತಿಳಿಸಿದ್ದಾರೆ.

ಈರೋಡ್‌ನಲ್ಲಿ ಡಿಎಂಕೆ ಮತ್ತು ಎನ್‌ಟಿಕೆ ನಡುವೆ ನೇರ ಹಣಾಹಣಿ ಇದ್ದು, ಡಿಎಂಕೆ ಅಭ್ಯರ್ಥಿ 7,961 ಮತಗಳನ್ನು ಪಡೆಯುವ ಮೂಲಕ ಮುನ್ನಡೆ ಸಾಧಿಸಿದ್ದಾರೆ. ಎನ್‌ಟಿಕೆ ಅಭ್ಯರ್ಥಿ ಎಂಕೆ ಸೀತಾಲಕ್ಷ್ಮೀ 1,081 ಮತಗಳನ್ನು ಪಡೆದಿದ್ದಾರೆ.

ಭದ್ರತಾ ದೃಷ್ಟಿಯಿಂದ ಮತ ಎಣಿಕೆ ಕೇಂದ್ರದ ಬಳಿ ಸಿಐಎಸ್‌ಎಫ್ ಜೊತೆಗೆ 600 ಪುಟ 2



ದೆಹಲಿ ವಿಧಾನಸಭಾ ಚುನಾವಣೆಯಲ್ಲಿ 27 ವರ್ಷದ ನಂತರ ಬಿಜೆಪಿ ಜಯಭೇರಿ ಭಾರಿಸಿದ ಸಂದರ್ಭದಲ್ಲಿ ಬೆಂಗಳೂರಿನ ಮಲ್ಲೇಶ್ವರಂ ನಲ್ಲಿರುವ ಬಿಜೆಪಿ ಕೇಂದ್ರ ಕಚೇರಿಯಲ್ಲಿ ಇಂದು ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ರವರ ನೇತೃತ್ವದಲ್ಲಿ ಪಟಾಕಿ ಸಿಡಿಸಿ ಡೋಲು ಬಡಿದು ಸಿಹಿ ಹಂಚುವ ಮೂಲಕ ಸಂಭ್ರಮಿಸಲಾಯಿತು.
ಈ ಸಂದರ್ಭದಲ್ಲಿ ವಿಧಾನಸಭಾ ವಿಪಕ್ಷ ನಾಯಕ ಆರ್ ಅಶೋಕ್ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸಂಸದ ಪಿ ಸಿ ಮೋಹನ್ ಮಾಜಿ ಸಚಿವರು ಹಾಗೂ ಶಾಸಕರಾದ ಕೆ ಗೋಪಾಲಯ್ಯ, ಮುನಿರತ್ನ, ಸಿಟಿ ರವಿ, ಶಾಸಕ ಕೆ ಸಿ ರಾಮಮೂರ್ತಿ ನೂರಾರು ಮುಖಂಡರು ಕಾರ್ಯಕರ್ತರು ಪಾಲ್ಗೊಂಡಿದ್ದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾವೇರಿ ನಿವಾಸದಲ್ಲಿ ಸತತ ಮೂರನೇ ದಿನದ ಬಜೆಟ್ ಪೂರ್ವ ಸಭೆ ನಡೆಸುತ್ತಿದ್ದು ಮೊದಲಿಗೆ ಉನ್ನತ ಶಿಕ್ಷಣ ಇಲಾಖೆಯ ಸಭೆ

ಮೊದಲ ಪುಟದಿಂದ

## ಪ್ರಶ್ನೆಗಳಿಗೆ ಸ್ಪಷ್ಟೀಕರಣ

ನಿರ್ದಿಷ್ಟಪಡಿಸುವುದು ಮತ್ತು ಅವುಗಳಿಗೆ ದಂಡನೆ ವಿಧಿಸುವುದು ಸರ್ಕಾರದ ಉದ್ದೇಶವಾಗಿದೆ. ಸಾಲ ನೀಡುವ ಸಂಸ್ಥೆಗಳು ತಾವು ನೀಡಿದ ಸಾಲಕ್ಕೆ ಯಾವುದೇ ಭದ್ರತೆ ಪಡೆಯದಂತೆ ಮತ್ತು ಈಗಾಗಲೇ ಪಡೆದಿರುವ ಭದ್ರತೆಗಳನ್ನು ಹಿಂದಿರುಗಿಸುವಂತೆ ಕಾನೂನಿನಲ್ಲಿ ಅವಕಾಶ ಒದಗಿಸಲಾಗಿದೆ ಎಂದು ತಿಳಿಸಿದ್ದಾರೆ. ಕಿರುಸಾಲ ನೀಡಿಕೆ ಮೇಲೆ ಪರಿಣಾಮ ಬೀರುವುದಿಲ್ಲ: ಕಿರು ಸಾಲ ನೀಡುವ ಸಂಸ್ಥೆಗಳು ಯಾವುದೇ ಭದ್ರತೆಯನ್ನು ಪಡೆಯದೇ ಸಾಲ ನೀಡಬೇಕೆಂಬುದು ರಿಸರ್ವ್ ಬ್ಯಾಂಕಿನ ನಿಯಮಗಳಲ್ಲಿ ಸ್ಪಷ್ಟವಾಗಿ ವಿಧಿಸಲಾಗಿದೆ. ಆದ್ದರಿಂದ ಭದ್ರತೆ ಪಡೆಯದೇ ಕಿರು ಸಾಲ ನೀಡಬೇಕು ಹಾಗೂ ಒಂದು ವೇಳೆ ಅಕ್ರಮವಾಗಿ ಭದ್ರತೆ ಪಡೆದಿದ್ದರೆ ಅಂತಹ ಭದ್ರತೆಗಳನ್ನು ವಾಪಸ್ ನೀಡುವುದು ಕಿರು ಸಾಲ ನೀಡುವ ಸಂಸ್ಥೆಯ ಕರ್ತವ್ಯವಾಗಿದೆ. ಕಿರು ಸಾಲ ನೀಡುವ ವ್ಯವಸ್ಥೆಯು ಬ್ಯಾಂಕಿಂಗ್ ತಲುಪದ ದೂರದ ಪ್ರದೇಶಗಳಿಗಾಗಿ ರೂಪಿಸಲಾಗಿದೆ. ಕಿರು ಸಾಲ ನೀಡುವ ಮತ್ತು ಸಾಲ ನೀಡುವುದರ ಮೇಲೆ ಪರಿಣಾಮ ಬೀರುವ ಯಾವುದೇ ಅಡೆತಡೆಯನ್ನು ಈ ಸುಗ್ರೀವಾಜ್ಞೆ ಉಂಟು ಮಾಡುವುದಿಲ್ಲ ಎಂದಿದ್ದಾರೆ. ಸ್ವ ಸಹಾಯ ಸಂಘದ ಮೇಲೆ ಪರಿಣಾಮ ಬೀರಲ್ಲ: ಸ್ವಸಹಾಯ ಸಂಘಗಳ ವ್ಯಾಪಾರದ ಭವಿಷ್ಯದ ಮೇಲೆ ಸುಗ್ರೀವಾಜ್ಞೆಯ ಪರಿಣಾಮ ಇರುವುದಿಲ್ಲ ಅಥವಾ ಅದು ಶೂನ್ಯವಾಗುತ್ತದೆ. ಕೇವಲ ಸಾಲ ನೀಡಿದ ಸಂಸ್ಥೆಯ ವಸೂಲಾತಿಯ ಕಾನೂನು ಬಾಹಿರ ಕ್ರಮಗಳನ್ನು ಮಾತ್ರ ದಂಡನಿಯ ಅಪರಾಧವೆಂದು ಪರಿಗಣಿಸಲಾಗಿದೆ. ನೋಂದಾಯಿತ ಸಂಸ್ಥೆಗಳ, ಬ್ಯಾಂಕುಗಳ ಮತ್ತು ಬ್ಯಾಂಕೇತರ ಹಣಕಾಸು ಸಂಸ್ಥೆಗಳ ಸಾಲ ನೀಡುವಿಕೆ ಮತ್ತು ವಸೂಲಾತಿ ಪ್ರಕ್ರಿಯೆಯನ್ನು ಬಗ್ಗೆ ಸುಗ್ರೀವಾಜ್ಞೆಯಲ್ಲಿ ಉಲ್ಲೇಖಿಸಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಹಾಲಿ ಕಾಯ್ದೆಗಳಲ್ಲಿ ಸಬಲ ಅಸ್ತ್ರ ಇಲ್ಲ: ಹಾಲಿ ಎಲ್ಲಾ ಕಾಯ್ದೆಗಳಲ್ಲಿ ಯಾವುದೇ ಗಂಭೀರ ಮತ್ತು ನಿಯಂತ್ರಣ ಮಾಡುವ ಪರಿಣಾಮಕಾರಿಯಾದ ಅಸ್ತ್ರ ಇಲ್ಲದೇ ಇದ್ದಿದರಿಂದ ಸಮಾಜದ ಕೆಳಸ್ತರದ ವ್ಯಕ್ತಿಗಳಿಗೆ ಮತ್ತು ಅಬಲರಿಗೆ ಸಬಲವಾದ ಅಸ್ತ್ರವನ್ನು ಕಾನೂನಾತ್ಮಕವಾಗಿ ಒದಗಿಸುವ ಉದ್ದೇಶ ಸರ್ಕಾರದ್ದಾಗಿದೆ. ಈಗಿರುವ ಪರಿಹಾರಗಳು ಕಠಿಣಾತಿ ಕಠಿಣ ಕ್ರಮಗಳ ಬಗ್ಗೆ ಮತ್ತು ಬಾಧಿತ ಜನರ ಹಿತಾಸಕ್ತಿ ಕಾಪಾಡಲು ಪ್ರಸ್ತುತ ಕಾಯ್ದೆಗಳಲ್ಲಿ ವಿಪುಲವಾದ ಅವಕಾಶವಿಲ್ಲ. ರಿಸರ್ವ್ ಬ್ಯಾಂಕ್ ಮಾರ್ಗಸೂಚಿಗಳು ನೋಂದಾವಣೆ ನಿಬಂಧನೆಗಳು ಕೇವಲ ನೋಂದಾಯಿತ ಸಂಸ್ಥೆಗಳಿಗೆ ಮಾತ್ರ ಅನ್ವಯವಾಗುತ್ತವೆ. ಬೇರೆ ಬೇರೆ ಕಾನೂನುಗಳು ನಿರ್ದಿಷ್ಟವಾದ ಅಪರಾಧಗಳನ್ನು ನಿರ್ದಿಷ್ಟವಾಗಿ ದಂಡಿಸುವ ಅವಕಾಶವಿರುವುದಿಲ್ಲ ಎಂದು ಸ್ಪಷ್ಟೀಕರಣ ನೀಡಿದ್ದಾರೆ.

ಸಾಲ ನೀಡುವವರ ಹಿತವನ್ನೂ ರಕ್ಷಿಸಲಾಗಿದೆ: ತುರ್ತು ಸಂದರ್ಭದಲ್ಲಿ ಸರ್ಕಾರ ಲಭ್ಯವಿರುವ ಎಲ್ಲಾ ಸ್ಥರದಲ್ಲಿ ಸಮಾಲೋಚನೆಗಳನ್ನು ಹಲವಾರು ಸುತ್ತಿನಲ್ಲಿ ಕೈಗೊಂಡು ಈ ಸುಗ್ರೀವಾಜ್ಞೆ ಕರಡು ಸಿದ್ಧಪಡಿಸಿದೆ. ಮುಖ್ಯಮಂತ್ರಿಯವರೆಗಿನ ಎಲ್ಲಾ ಹಂತಗಳಲ್ಲೂ ಸಮಾಲೋಚನೆಗಳನ್ನು ವಿಸ್ತೃತವಾಗಿ ಕೈಗೊಳ್ಳಲಾಗಿದೆ. ಸಾಲ ನೀಡುವವರ ಹಿತಗಳನ್ನು ನಿಯಮಗಳ ಅಡಿಯಲ್ಲಿ ರಕ್ಷಿಸಲಾಗಿದೆ. ಸಾಲ ವಸೂಲಾತಿಯನ್ನು ನಿಷೇಧಿಸಿಲ್ಲ. ನಿಷೇಧಿತ ಚಟುವಟಿಕೆಗಳ ಮೂಲಕ ಸಾಲ ವಸೂಲಾತಿಯನ್ನು ತಡೆಯಲು ತುರ್ತಾಗಿ ಸುಗ್ರೀವಾಜ್ಞೆ ಅಂತಿಮಗೊಳಿಸಿದೆ. ಈ ಸುಗ್ರೀವಾಜ್ಞೆಯು ಮಸೂದೆಯಾಗಿ ವಿಧಾನಮಂಡಲದಲ್ಲಿ ಚರ್ಚೆಗೆ ಸಹಜವಾಗಿ ಮಂಡಿಸಲಾಗುತ್ತದೆ. ಆ ಸಂದರ್ಭದಲ್ಲಿ ವಿಧಾನಮಂಡಲದ ಅಭಿಪ್ರಾಯಗಳನ್ನು ಕ್ರೋಢಿಕರಿಸಿ ವ್ಯಾಪಕ ಪರಿಣಾಮ ಬೀರುವ ಕಾಯ್ದೆಯನ್ನು ಅಂತಿಮಗೊಳಿಸಲಾಗುತ್ತದೆ. ಸರ್ಕಾರ ತುರ್ತು ಸಂದರ್ಭಗಳಲ್ಲಿ ಸುಗ್ರೀವಾಜ್ಞೆಯ ಮೂಲಕ ಜನರ ನೆರವಿಗೆ ಬರಬೇಕಾದ ಸಂವಿಧಾನದತ್ತ ಅವಕಾಶ ಲಭ್ಯವಿರುವುದರಿಂದ ಅಂತಹ ಅವಕಾಶವನ್ನು ಬಳಕೆ ಮಾಡಿಕೊಂಡು ಈ ಸುಗ್ರೀವಾಜ್ಞೆ ಜಾರಿಗೆ ಶಿಫಾರಸ್ಸು ಮಾಡಲಾಗಿದೆ. ಪ್ರಸ್ತುತ ಸುಗ್ರೀವಾಜ್ಞೆ/ಕಾನೂನು ರಚಿಸಲು ರಾಜ್ಯ ಸರ್ಕಾರ ತನ್ನ ಅಧಿಕಾರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಿದೆ ಎಂದು ಕಾನೂನು ಸಚಿವರು ಸ್ಪಷ್ಟಪಡಿಸಿದ್ದಾರೆ.

## ಮಿಲ್ಕಿಪುರದಲ್ಲಿ ಬಿಜೆಪಿ ಲೀಡಿಂಗ್

ಪೊಲೀಸರನ್ನು ನಿಯೋಜಿಸಲಾಗಿದೆ. ಹಾಗೇ ಕೇಂದ್ರದ ಸುತ್ತ ಸಿಸಿಟಿವಿ ಕಣ್ಗಾವಲು ಇಡಲಾಗಿದ್ದು, ಮತ ಎಣಿಕೆ ಟೇಬಲ್‌ಗಳಲ್ಲಿ ತಲಾ ಒಂದರಂತೆ ಒಟ್ಟಾರೆ 76 ಕ್ಯಾಮೆರಾಗಳನ್ನು ಅಳವಡಿಸಲಾಗಿದೆ ಎಂದು ಈರೋಡ್ ಜಿಲ್ಲಾಧಿಕಾರಿ ರಾಜ ಗೋಪಾಲ್ ಸುನ್ಕರಾ ತಿಳಿಸಿದರು.

ಮತ ಎಣಿಕೆ ನಡೆದು, ಫಲಿತಾಂಶ ಪ್ರಕಟವಾದ ಬಳಿಕ ಇವಿಎಂಗಳನ್ನು ಆರ್‌ಡಿಒ ಕಚೇರಿಯ ಸ್ಟ್ರಾಂಗ್ ರೂಮ್‌ಗೆ ವರ್ಗಾವಣೆ ಮಾಡಲಾಗುವುದು ಎಂದು ಮಾಹಿತಿ ನೀಡಿದರು.

**ಉತ್ತರ ಪ್ರದೇಶದ ಮಿಲ್ಕಿಪುರದಲ್ಲಿ ಎಸ್‌ಪಿ– ಬಿಎಸ್‌ಪಿ ಹಣಾಹಣಿ:** ಉತ್ತರ ಪ್ರದೇಶದ ಅಯೋಧ್ಯೆ ಜಿಲ್ಲೆಯ ಮಿಲ್ಕಿಪುರ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಮತಎಣಿಕೆ ಕೂಡ ಬೆಳಗ್ಗೆ 8ರಿಂದ ಸಾಗಿದೆ. ಆರಂಭಿಕ ಟ್ರೆಂಡ್‌ನಲ್ಲಿ ಬಿಜೆಪಿ ಮುನ್ನಡೆ ಸಾಧಿಸಿದೆ. ಎಂಟನೆ ಸುತ್ತಿನಲ್ಲೂ ಬಿಜೆಪಿ ಮುಂದಿದೆ. ಮಿಲ್ಕಿಪುರದ ಸರ್ಕಾರಿ ಇಂಟರ್ ಕಾಲೇಜ್‌ನಲ್ಲಿ ಎಣಿಕೆ ನಡೆಯುತ್ತಿದ್ದು, ಹಲವು ಸುತ್ತಿನ ಮತ ಎಣಿಕೆ ಬಳಿಕ ಮಧ್ಯಾಹ್ನದ ಹೊತ್ತಿಗೆ ಫಲಿತಾಂಶ ಹೊರ ಬೀಳಲಿದೆ. ಮಿಲ್ಕಿಪುರ ಕ್ಷೇತ್ರದ ಕಣದಲ್ಲಿ 10 ಅಭ್ಯರ್ಥಿಗಳಿದ್ದು, ಬಿಜೆಪಿ ಅಭ್ಯರ್ಥಿ ಚಂದ್ರಬಾನು ಪಾಸ್ವಾನ್ ಮತ್ತು ಸಮಾಜವಾದಿ ಪಕ್ಷದ ಅಭ್ಯರ್ಥಿ ಅಜಿತ್ ಪ್ರಸಾದ್ ಪ್ರಮುಖ ಎದುರಾಳಿಗಳಾಗಿದ್ದಾರೆ. ಪಾಸಿ ಸಮುದಾಯ ಹೆಚ್ಚಿರುವ ಕ್ಷೇತ್ರದಲ್ಲಿ ಅದೇ ಸಮುದಾಯದ ಅಭ್ಯರ್ಥಿಗಳನ್ನು ಕಣಕ್ಕೆ ಇಳಿಸಿರುವ ಎಸ್‌ಪಿ ಮತ್ತು ಬಿಜೆಪಿಗೆ ಇದು ಪ್ರತಿಷ್ಠಿತ ಕಣವೂ ಆಗಿದೆ. ಲೋಕಸಭಾ ಚುನಾಣೆಯಲ್ಲಿ ಮಿಲ್ಕಿಪುರ ಕ್ಷೇತ್ರದ ಶಾಸಕರಾಗಿದ್ದ ಎಸ್‌ಪಿ ಅಭ್ಯರ್ಥಿ ಅವದೇಶ್ ಪ್ರಸಾದ್ ಫೈಜಾಬಾದ್ ಕ್ಷೇತ್ರದಿಂದ ಗೆಲುವು ಕಂಡು, ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದರು. ಇದರಿಂದ ಕ್ಷೇತ್ರ ಉಪ ಚುನಾವಣೆ ಎದುರಿಸುತ್ತಿದೆ. ಎಸ್‌ಪಿಯಿಂದ ಅವದೇಶ್ ಪ್ರಸಾದ್ ಮಗ ಅಜಿತ್ ಪ್ರಸಾದ್ ಕಣದಲ್ಲಿದ್ದಾರೆ. 3.60 ಲಕ್ಷ ಮತದಾರರನ್ನು ಹೊಂದಿರುವ ಮಿಲ್ಕಿಪುರ್ ಕ್ಷೇತ್ರದಲ್ಲಿ ದಲಿತರ ಮತಗಳು (1.25 ಲಕ್ಷ) ನಿರ್ಣಾಯಕವಾಗಿದೆ. ಪಸಿ ಸಮುದಾಯದ 65.000 ಮತಗಳಿದ್ದಾರೆ. ಇತರ ಪ್ರಮುಖ ಮತದಾರರು ಎಂದರೆ, 30,000 ಒಬಿಸಿ, ಮುಸ್ಲಿಂರ ಮತಗಳು 30,000, ಬ್ರಾಹ್ಮಣರ ಮತ 65,000 ಹಾಗೂ ಯಾದವರ ಮತ 55,000 ಇದೆ.

## ಜನ ರೋಸಿದ್ದಾರೆ

ಇನ್ನೊಂದೆಡೆ ದೇಶದೆಲ್ಲೆಡೆ ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿ ಆಡಳಿತ ನೋಡಿ ಜನರು ಬಿಜೆಪಿಗೆ ದೊಡ್ಡ ಪ್ರಮಾಣದ ಬೆಂಬಲ ನೀಡಿದ್ದಾರೆ. ಆಪ್ ಪ್ರತಿಯೊಂದರಲ್ಲೂ ಸುಳ್ಳು ಹೇಳುವುದು, ಹಲವಾರು ಸಚಿವರು ಭ್ರಷ್ಟಾಚಾರದಲ್ಲಿ ತೊಡಗಿದ್ದು, ತಾವು ಮಾಡದಿರುವ ಕೆಲಸಕ್ಕೆ ಬೇರೆಯವರನ್ನು ದೂಷಿಸುತ್ತಿದ್ದರು. ರಸ್ತೆ, ಕುಡಿಯುವ ನೀರು ಕೊಡಲು ಆಗಿಲ್ಲ. ಆಯುಷ್ಮಾನ್ ಯೋಜನೆ ಜಾರಿಗೊಳಿಸದಿರುವುದು ಬಡವರಿಗೆ ಬೇಸರ ತರಿಸಿದೆ ಎಂದು ಹೇಳಿದರು.

ಕಾಂಗ್ರೆಸ್ ಬರೇ ಘೋಷಣೆ ಮೂಲಕ ಅಧಿಕಾರ ನಡೆಸಲು ಸಾಧ್ಯವಿಲ್ಲ. ಈಗ 21ಶತಮಾನದಲ್ಲಿ ಯುವಕರು ಎಲ್ಲವನ್ನೂ ಗಮನಿಸುತ್ತಾರೆ. ಕಾಂಗ್ರೆಸ್ ಕೇವಲ ಘೋಷಣೆ ಮಾಡುವುದರಿಂದ ಜನರ ಮನಸ್ಸು ಗೆಲ್ಲಲು ಸಾಧ್ಯವಿಲ್ಲ. ಕಾಂಗ್ರೆಸ್ ಸಾಮಾನ್ಯರ ಭಾವನೆ ಅರ್ಥ ಮಾಡಿಕೊಳ್ಳಬೇಕು.

ದೆಹಲಿ ಒಂದು ನಗರದ ರಾಜ್ಯ, ಹೊರ ವಲಯದಲ್ಲಿರುವ ರೈತರು, ಹರಿಯಾಣದ ಜಾಟರು, ಪಂಜಾಬಿನ ಜನರು, ಉತ್ತರ ಪ್ರದೇಶ, ಬಿಹಾರದಿಂದ ಬಂದಿರುವ ದುಡಿಯುವ ವರ್ಗ, ಹಲವಾರು ಅಲ್ಪ ಸಂಖ್ಯಾತ ಕ್ಷೇತ್ರದಲ್ಲಿ ಬಿಜೆಪಿ ಗೆದ್ದಿದೆ. ರಾಷ್ಟ್ರೀಯ ತೆ ನಂಬಿರುವ ಅಲ್ಪ ಸಂಖ್ಯಾತರು ಬಿಜೆಪಿಗೆ ಬೆಂಬಲ ಸೂಚಿಸಿದ್ದಾರೆ ಎಂದು ಹೇಳಿದರು.

ಈ ಚುನಾವಣೆಯ ಒಟ್ಟು ಪರಿಣಾಮ ಹರಿಯಾಣ ಮಹಾರಾಷ್ಟ್ರ, ದೆಹಲಿ ಚುನಾವಣೆ ಫಲಿತಾಂಶದ ನಂತರ ಬಿಜೆಪಿಯನ್ನು ಶಕ್ತಿಯುತವಾಗಿ ಮಾಡಿರುವುದು, ಇಂಡಿ ಒಕ್ಕೂಟದಲ್ಲಿ ಇನ್ನಷ್ಟು ಗೊಂದಲ ಸೃಷ್ಟಿಯಾಗಲಿದೆ. ಆಪ್ ನವರು ತಮ್ಮನ್ನು ಸೋಲಿಸಲು ಕಾಂಗ್ರೆಸ್ ಪ್ರಯತ್ನ ಪಟ್ಟಿತ್ತು ಅಂತ ಮಾತನಾಡುತ್ತಿದ್ದಾರೆ. ಇದನ್ನು ನೋಡಿದರೆ ಇಂಡಿ ಒಕ್ಕೂಟದಲ್ಲಿ ಇನ್ನಷ್ಟು ಗೊಂದಲ ಸೃಷ್ಟಿಯಾಗುತ್ತದೆ ಎಂದು ಹೇಳಿದರು.

# ಪ್ರಧಾನಿ ಮೋದಿ ನಾಯಕತ್ವಕ್ಕೆ ಮನ್ನಣೆ

**ಬೆಂಗಳೂರು:** ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಗೆಲುವಿನ ನಗೆ ಬೀರಿದ್ದು ಅಧಿಕಾರದ ಗದ್ದುಗೆಗೇರುವುದು ಖಚಿತವಾಗಿದೆ. ಈ ಬಿಜೆಪಿ ಗೆಲುವಿಗೆ ವಿಪಕ್ಷ ನಾಯಕ ಆರ್.ಅಶೋಕ್ ಸಂತಸ ವ್ಯಕ್ತಪಡಿಸಿದ್ದಾರೆ.ಈ ಕುರಿತು ಮಾತನಾಡಿರುವ ಆರ್.ಅಶೋಕ್, ದೆಹಲಿಯ ಜನತೆ ಭ್ರಷ್ಟಾಚಾರಕ್ಕೆ ತಕ್ಕ ಉತ್ತರ ಕೊಟ್ಟಿದ್ದಾರೆ. ದೇಶದ ಜನರ ಪ್ರೀತಿ ಪ್ರಧಾನಿ ಮೋದಿ ಮೇಲೆ ಇದೆ. ದೇಹಲಿ ನಾಯಕರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಜೆಪಿ ನಡ್ಡಾ, ಅಮಿತ್ ಶಾ ಅವರಿಗೆ ಅಭಿನಂದನೆ ಎಂದು ಶುಭಕೋರಿದರು. ಮೋದಿ ನಾಯಕತ್ವ ಜನಪರ ನಂಬಿಕೆಗಳಿಗೆ ಮನ್ನಣೆ ಸಿಕ್ಕಿದೆ. ಭ್ರಷ್ಟಾಚಾರಕ್ಕೆ ಜನರು ಉತ್ತರ ಕೊಟ್ಟಿದ್ದಾರೆ ಕೇಜ್ರಿವಾಲ್ ಅಧಿಕಾರಕ್ಕೆ ಅಂಟಿ ಕೊಂಡಿದ್ದರು. ಕಾರು, ಮಫ್ಲರ್, ನಿಮಿಷಕ್ಕೊಮ್ಮೆ ಕೆಮ್ಮೋದು, ಎರಡು ಬೆಡ್ ರೂ ಫ್ಲ್ಯಾಟ್, ಈಗ ಶಿಷ್ ಮಹಲ್ ಅದಲ್ಲಿ 25 ರೂಮುಗಳ ಮನೆ, ಕಾರು ಎಸ್ಕಾರ್ಟ್ ಹೀಗೆ ರಾಜನ ರೀತಿ ಆಡಳಿತ ನಡೆಸುತ್ತಿರುವ ಕೇಜ್ರಿವಾಲ್ ಅವರನ್ನು ನೋಡಿ ಜನ ಬೇಸತ್ತಿದ್ದರು. ಕೇಜ್ರಿವಾಲ್ ಕ್ರೇಜ್ ಕಳೆದುಕೊಂಡಿದ್ದಾರೆ. ಹಾಗಾಗಿ ಇಂದು ದೆಹಲಿಯಲ್ಲಿ ಬಿಜೆಪಿಗೆ ಐತಿಹಾಸಿಕ ಗೆಲುವಾಗಿದೆ ಎಂದರು.

## ಜನ ಮೋದಿ ನಾಯಕತ್ವ ನಂಬಿದ್ದಾರೆ: ಜಗದೀಶ್ ಶೆಟ್ಟರ್

**ಹುಬ್ಬಳ್ಳಿ:** ಇಡೀ ದೇಶದ ಜನತೆಯೇ ಪ್ರಧಾನಿ ಮೋದಿ ನಾಯಕತ್ವ ನಂಬಿದ್ದಾರೆ ಎಂದು ಸಂಸದ ಜಗದೀಶ್ ಶೆಟ್ಟರ್ ಹೇಳಿದ್ದಾರೆ. ಬಿಜೆಪಿ ಗೆಲುವಿನ ಬಗ್ಗೆ ಪ್ರತಿಕ್ರಿಯಿಸಿರುವ ಸಂಸದರು, ಇಡೀ ರಾಷ್ಟದಲ್ಲಿ ಕಾಂಗ್ರೆಸ್ ಕುಸಿಯುತ್ತಿದೆ. ತೆಲಂಗಾಣ, ಕರ್ನಾಟಕದಲ್ಲಿ ಮಾತ್ರ ಕಾಂಗ್ರೆಸ್ ಇದೆ. ತೆಲಂಗಾಣ ಕರ್ನಾಟಕ ಸರ್ಕಾರ ಪತನ ಆಗಬಹುದು ರಾಹುಲ್ ಗಾಂಧಿ ಇರುವರೆಗೂ ಕಾಂಗ್ರೆಸ್ ಉದ್ಧಾರ ಆಗಲ್ಲ ಎಂದು ನುಡಿದರು.

ಈ ಚುನಾವಣೆಯಿಂದ ಕಾಂಗ್ರೆಸ್ ಬಣ್ಣ ಬಯಲಾಗಿದೆ. ಕಾಂಗ್ರೆಸ್ ಕೇಲವ ಒಂದು ಕುಟುಂಬದ ಪಕ್ಷ ದೆಹಲಿಯ ಜನರು ಪ್ರಧಾನಿ ಮೋದಿ ನಾಯಕತ್ವ ನಂಬಿದ್ದಾರೆ ಎಂದು ಶೆಟ್ಟರ್ ತಿಳಿಸಿದರು.

## ನಟ ಗಿರಿ ದಿನೇಶ್ ನಿಧನ

**ಬೆಂಗಳೂರು:** ಚಾಲೆಂಜಿಂಗ್ ಸ್ಟಾರ್ ದರ್ಶನ್ ಅಭಿನಯದ ನವಗ್ರಹ ಸಿನಿಮಾ ಸೇರಿದಂತೆ ಕೆಲವು ಸಿನಿಮಾಗಳಲ್ಲಿ ನಟಿಸಿದ್ದ ಗಿರಿ ದಿನೇಶ್ (45) ಹೃದಯಾಘಾತದಿಂದ ನಿಧನರಾಗಿದ್ದಾರೆ.



ಮನೆಯಲ್ಲಿ ಪೂಜೆ ಮಾಡುವ ವೇಳೆ ಗಿರಿ ದಿನೇಶ್ ಅವರು ಹೃದಯಾಘಾತದಿಂದ ಕುಸಿದು ಬಿದ್ದಿದ್ದು, ತಕ್ಷಣ ಅವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಲಾಯಿತಾದರೂ ಮಾರ್ಗ ಮಧ್ಯೆಯೇ ನಿಧನರಾಗಿದ್ದಾರೆ.

ಗಿರಿ ದಿನೇಶ್ ಅವರು ಚಮಕಾಯ್ಸಿ ಚಿಂದಿ ಉಡಾಯ್ಸಿ, ವಜ್ರ ಸೇರಿ ಕೆಲ ಚಿತ್ರಗಳಲ್ಲಿ ನಟಿಸಿದ್ದರು. ಆದರೆ, ನವಗ್ರಹ ಚಿತ್ರದ ಶೆಟ್ಟಿ ಪಾತ್ರ ಹೆಚ್ಚಿನ ಹೆಸರು ತಂದುಕೊಟ್ಟಿತ್ತು. ದಿನಕರ್ ನಿರ್ದೇಶನದ ನವಗ್ರಹ ಚಿತ್ರವನ್ನು ಮೀನಾ ತೂಗುದೀಪ ನಿರ್ಮಾಣ ಮಾಡಿದ್ದರು.

ಈ ಚಿತ್ರ 2008ರಲ್ಲಿ ಬಿಡುಗಡೆಯಾಗಿತ್ತು. ಕಳೆದ ವರ್ಷ ನವೆಂಬರ್ 8ರಂದು ಮರುಬಿಡುಗಡೆಯಾಗಿತ್ತು.

# ನೀಟ್ ನೋಂದಣಿ ಆರಂಭ,ವೇಳಾಪಟ್ಟಿ ಬಿಡುಗಡೆ

ನವದೆಹಲಿ: ಬಹುನಿರೀಕ್ಷಿತ ನೀಟ್ ಯುಜಿ 2025 ವೇಳಾಪಟ್ಟಿ ಬಿಡುಗಡೆಯಾಗಿದೆ. ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆಯ ನೀಟ್ ವೇಳಾಪಟ್ಟಿಯನ್ನು ಎನ್‌ಟಿಎ ಸ್ವಲ್ಪ ಸಮಯದ ಹಿಂದೆ ಬಿಡುಗಡೆ ಮಾಡಿದೆ. ವೇಳಾಪಟ್ಟಿಯನ್ನು ಅಧಿಕೃತ ವೆಬ್‌ಸೈಟ್‌ನಲ್ಲಿ ಲಭ್ಯವಾಗಿದೆ .ಅಭ್ಯರ್ಥಿಗಳು ನೀಟ್ ಯುಜಿ 2025 ವೇಳಾಪಟ್ಟಿಯನ್ನು ಪರಿಶೀಲಿಸಲು ಃಣಣಠಿ://ಟಿಜಜಣ. ಟಿಣಚಿ.ಟಿಛಿ.ಟಿ ಇದು ಲಿಂಕ್ ಆಗಿದೆ. ನೋಂದಣಿ ಕೂಡ ಆರಂಭವಾಗಿದೆ. ನೋಂದಾಯಿಸಲು ಇದು ನೇರ ಲಿಂಕ್ ಆಗಿದೆ .

ನೀಟ್ ಯುಜಿ ಪರೀಕ್ಷೆಯ ಅವಧಿ 180 ನಿಮಿಷಗಳು. ಪರೀಕ್ಷೆ ಮಧ್ಯಾಹ್ನ 2 ರಿಂದ 5 ರವರೆಗೆ ನಡೆಯಲಿದೆ. ಪರೀಕ್ಷೆಗೆ ಸಂಬಂಧಿಸಿದಂತೆ ಎನ್‌ಟಿಎ ಸಹಾಯವಾಣಿ ಸಂಖ್ಯೆಯನ್ನು ಸಹ ಬಿಡುಗಡೆ ಮಾಡಿದ್ದು, ಅಭ್ಯರ್ಥಿಗಳು ವಿವರಗಳನ್ನು ಪಡೆಯಬಹುದು. ಅಲ್ಲದೆ, ಶಿಕ್ಷಣ ಅರ್ಹತೆ ಮತ್ತು ವಯಸ್ಸಿನ ಮಿತಿ ಸೇರಿದಂತೆ ಇತರ ವಿವರಗಳನ್ನು ಪರಿಶೀಲಿಸಲು ನೀವು ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಬಹುದು. ಎಂಬಿಬಿಎಸ್, ಬಿಡಿಎಸ್ ಮತ್ತು ಇತರ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ದೇಶಾದ್ಯಂತ ನಡೆಸಲಾಗುವ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ ( ನೀಟ್ ಯುಜಿ) 2025 ಶುಕ್ರವಾರದಿಂದ (ಫೆಬ್ರವರಿ 7) ಅರ್ಜಿಗಳನ್ನು ಸ್ವೀಕರಿಸಲು ಪ್ರಾರಂಭಿಸಿದೆ. ಅರ್ಜಿ ಮತ್ತು ಶುಲ್ಕವನ್ನು ಮಾರ್ಚ್ 7 ರಂದು ರಾತ್ರಿ 11.50 ರವರೆಗೆ ಆನ್‌ಲೈನ್‌ನಲ್ಲಿ ಪಾವತಿಸಬಹುದು. ಅರ್ಜಿಗಳಲ್ಲಿನ ದೋಷಗಳನ್ನು ಮಾರ್ಚ್ 9 ರಿಂದ 11 ರವರೆಗೆ ಸರಿಪಡಿಸಬಹುದು.

ಪರೀಕ್ಷಾ ಶುಲ್ಕವನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 1700 ರೂ., ಇಡಬ್ಲ್ಯೂಎಸ್ ಮತ್ತು ಒಬಿಸಿ ಅಭ್ಯರ್ಥಿಗಳಿಗೆ 1600 ರೂ. ಮತ್ತು ಎಸ್‌ಸಿ, ಎಸ್‌ಟಿ ಮತ್ತು ದಿವ್ಯಾಂಗ ಅಭ್ಯರ್ಥಿಗಳಿಗೆ 1000 ರೂ. ಎಂದು ನಿಗದಿಪಡಿಸಲಾಗಿದೆ. ನಗರದ ಮಾಹಿತಿ ಚೀಟಿಗಳನ್ನು ಏಪ್ರಿಲ್ 26 ರಂದು ಬಿಡುಗಡೆ ಮಾಡಲಾಗುತ್ತದೆ. ಮೇ 1 ರಿಂದ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು. ಪರೀಕ್ಷೆಯು ಮೇ 4 ರಂದು ಮಧ್ಯಾಹ್ನ 2 ರಿಂದ ಸಂಜೆ 5 ರವರೆಗೆ ಆಫ್‌ಲೈನ್‌ನಲ್ಲಿ ನಡೆಯಲಿದೆ. ಜೂನ್ 14 ರೊಳಗೆ ಫಲಿತಾಂಶಗಳನ್ನು ಬಿಡುಗಡೆ ಮಾಡಲಾಗುವುದು ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

ಎನ್‌ಟಿಎ ಪ್ರತಿ ವರ್ಷ 1,08,000 ಎಂಬಿಬಿಎಸ್ ಸೀಟುಗಳಿಗೆ ಈ ಪರೀಕ್ಷೆಯನ್ನು ನಡೆಸುತ್ತದೆ. ಸರ್ಕಾರಿ ಕಾಲೇಜುಗಳಲ್ಲಿ ಸರಿಸುಮಾರು 56 ಸಾವಿರ ಸೀಟುಗಳು ಮತ್ತು ಖಾಸಗಿ ಕಾಲೇಜುಗಳಲ್ಲಿ 52 ಸಾವಿರ ಸೀಟುಗಳಿವೆ.

ನೀಟ್ ಯುಜಿ 2025 ಪರೀಕ್ಷೆಯನ್ನು ಒಂದೇ ದಿನದಲ್ಲಿ ಒಂದೇ ಶಿಫ್ಟ್‌ನಲ್ಲಿ, ಪೆನ್–ಪೇಪರ್ ಮೋಡ್‌ನಲ್ಲಿ (ಓಎಂಆರ್ ಆಧಾರಿತ) ನಡೆಸಲಾಗುವುದು ಎಂದು ಘೋಷಿಸಲಾಗಿದೆ. ರಾಷ್ಟ್ರೀಯ ವೈದ್ಯಕೀಯ ಆಯೋಗ (ಎನ್‌ಎಂಸಿ) ಅಂತಿಮಗೊಳಿಸಿದ ಮಾರ್ಗಸೂಚಿಗಳ ಪ್ರಕಾರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

## ತೆರೆದುಕೊಳ್ಳದ ಪ್ಯಾರಾಚ್ಯೂಟ್: ಯೋಧ ಸಾವು

**ಆಗ್ರಾ(ಉತ್ತರ ಪ್ರದೇಶ):** ತರಬೇತಿಯ ಸಮಯದಲ್ಲಿ ಪ್ಯಾರಾಚ್ಯೂಟ್ ತೆರೆದುಕೊಳ್ಳದ ಕಾರಣ ಮೇಲಿಂದ ಬಿದ್ದು ಕರ್ನಾಟಕದ ಶಿವಮೊಗ್ಗ ಜಿಲ್ಲೆಯ ವಾಯುಸೇನಾ ಯೋಧರೊಬ್ಬರು ಮೃತಪಟ್ಟಿರುವ ಘಟನೆ ಉತ್ತರ ಪ್ರದೇಶದ ಆಗ್ರಾದಲ್ಲಿರುವ ಪ್ಯಾರ್ಯಾಟ್ರೂಪರ್ ತರಬೇತಿ ಶಾಲೆಯಲ್ಲಿ ಇಂದು ನಡೆದಿದೆ.

ಘಟನೆಯಲ್ಲಿ ಮೃತಪಟ್ಟವರನ್ನು ಮಂಜುನಾಥ್ ಎಂದು ಗುರುತಿಸಲಾಗಿದೆ. ಇವರು ವಾಯುಸೇನೆಯಲ್ಲಿ ಜ್ಯೂನಿಯರ್ ವಾರೆಂಟ್ ಆಫೀಸರ್ ಆಗಿ ಸೇವೆ ಸಲ್ಲಿಸುತ್ತಿದ್ದರು. ಘಟನೆಯ ಬಗ್ಗೆ ಮಾಹಿತಿ ತಿಳಿದ ತಕ್ಷಣ ಪೊಲೀಸರು ಮತ್ತು ಭದ್ರತಾ ಸಿಬ್ಬಂದಿ ಸ್ಥಳಕ್ಕೆ ಧಾವಿಸಿತು. ಅವಘಡದ ಬಗ್ಗೆ ಪೊಲೀಸರು ಖಚಿತಪಡಿಸಿದ್ದು, ಮೃತರ ಕುಟುಂಬಸ್ಥರಿಗೆ ಮಾಹಿತಿ ರವಾನಿಸಿದ್ದಾರೆ. ಆಗ್ರಾದ ಮಾಲ್ಪುರಾ ಪ್ರದೇಶದಲ್ಲಿರುವ ಪ್ಯಾರಾ ಜಂಪಿಂಗ್ ವಲಯದಲ್ಲಿ 12 ಜನ ಸಿಬ್ಬಂದಿ ವಿಮಾನದಿಂದ ಪ್ಯಾರಾಚ್ಯೂಟ್ ಜೊತೆ ಜಿಗಿದಿದ್ದರು.

ನಂತರ 11 ಜನ ಸೈನಿಕರು ಹಿಂತಿರುಗಿದ್ದರು. ಆದರೆ ಒಬ್ಬ ಮಂಜುನಾಥ್ ವಾಪಸ್ ಬಂದಿರಲಿಲ್ಲ. ಬಳಿಕ ಶೋಧ ಕಾರ್ಯ ನಡೆಸಿದಾಗ, ಸುತೇಂಡಿ ಗ್ರಾಮದ ಬಳಿಯ ಹೊಲದಲ್ಲಿ ಕೆಳಗೆ ಬಿದ್ದ ಸ್ಥಿತಿಯಲ್ಲಿ ಪತ್ತೆಯಾಗಿದ್ದರು. ತೀವ್ರವಾಗಿ ಗಾಯಗೊಂಡಿದ್ದ ಅವರನ್ನು ತಕ್ಷಣ ಆಂಬ್ಯುಲೆನ್ಸ್ ಮೂಲಕ ವಾಯುಪಡೆಯ ಆಸ್ಪತ್ರೆಗೆ ರವಾನಿಸಲಾಗಿತ್ತು. ಆದರೆ ವೈದ್ಯರು ಪರಿಶೀಲನೆ ನಡೆಸಿ, ಮೃತಪಟ್ಟಿರುವುದಾಗಿ ಘೋಷಿಸಿದ್ದಾರೆ.

ವಿಮಾನದಿಂದ ಹಾರಿದ ಬಳಿಕ ಪ್ಯಾರಾಚೂಟ್ ತೆರೆಯಲು ವಿಫಲವಾಗಿದ್ದರಿಂದ ಘಟನೆ ಸಂಭವಿಸಿದೆ ಎಂದು ತಿಳಿದುಬಂದಿದೆ. ಈ ಕುರಿತು ಠಾಣೆಯ ಉಸ್ತುವಾರಿ ಇನ್ಸ್‌ಪೆಕ್ಟರ್ ಪ್ರಮೋದ್ ಶರ್ಮಾ ದೃಢಪಡಿಸಿದ್ದಾರೆ. ಘಟನೆಯ ಬಗ್ಗೆ ಮೃತರ ಕುಟುಂಬ ಸದಸ್ಯರಿಗೆ ಮಾಹಿತಿ ನೀಡಲಾಗಿದೆ. ಈ ವಿಷಯದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತಿದೆ.

## ನರೇಂದ್ರ ಮೋದಿಯವರ ಕೈ ಬಲಪಡಿಸಲು, ಅಭಿವೃದ್ಧಿಗಾಗಿ ಮತದಾನ

**ಬೆಂಗಳೂರು:** ಪ್ರಬುದ್ಧ ಮತದಾರರು ದೆಹಲಿ ರಾಜ್ಯದ ಅಭಿವೃದ್ಧಿಯ ದೃಷ್ಟಿಯಿಂದ ಬಿಜೆಪಿಯನ್ನು ಗೆಲ್ಲಿಸಿದ್ದಾರೆ. ನರೇಂದ್ರ ಮೋದಿಯವರ ಕೈಯನ್ನು ಬಲಪಡಿಸಲು ಮತದಾರರು ಮತ್ತೊಮ್ಮೆ ನಮಗೆ ಆಶೀರ್ವಾದ ಮಾಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ವಿಶ್ಲೇಷಿಸಿದ್ದಾರೆ. ಇಂದು ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಬಿಜೆಪಿ ಪರ ದೆಹಲಿ ವಿಧಾನಸಭಾ ಚುನಾವಣಾ ಫಲಿತಾಂಶದ ಹಿನ್ನೆಲೆಯಲ್ಲಿ ವಿಜಯೋತ್ಸವ ಆಚರಣೆಯ ಬಳಿಕ ಅವರು ಮಾಧ್ಯಮಗಳ ಜೊತೆ ಮಾತನಾಡಿದರು. ದೆಹಲಿ ರಾಜ್ಯದಲ್ಲಿ 27 ವರ್ಷಗಳ ನಂತರ ಬಿಜೆಪಿಗೆ ಅಭೂತಪೂರ್ವ ಗೆಲುವು ಲಭಿಸಿದೆ ಎಂದು ಸಂತಸ ವ್ಯಕ್ತಪಡಿಸಿದರು. ದೆಹಲಿಯ ಪಕ್ಷದ ಮುಖಂಡರು, ಕಾರ್ಯಕರ್ತರು, ಮತದಾರರಿಗೆ ಅಭಿನಂದನೆ ಸಲ್ಲಿಸಿದ ಅವರು, ಭ್ರಷ್ಟಾಚಾರದ ವಿರುದ್ಧ ಆಂದೋಲನ ಮಾಡಿ ದೆಹಲಿಯಲ್ಲಿ ಅಧಿಕಾರಕ್ಕೆ ಬಂದಿದ್ದ ಆಮ್ ಆದ್ಮಿ ಪಕ್ಷದ ಅರವಿಂದ ಕೇಜ್ರಿವಾಲ್ ಅವರ ಮುಖವಾಡ ಕಳಚಿಬಿದ್ದಿದೆ ಎಂದು ನುಡಿದರು. ಕೇಜ್ರಿವಾಲ್ ಅವರೂ ಹಿನ್ನಡೆ ಅನುಭವಿಸುತ್ತಿದ್ದಾರೆ ಎಂದು ತಿಳಿಸಿದರು. ಆತಿಶಿ, ಮನೀಷ್ ಸಿಸೋಡಿಯ ಅವರೂ ಸೋಲುತ್ತಿದ್ದಾರೆ. ಲಿಕ್ಕರ್ ಗೇಟ್, ಶೀಷ್ ಮಹಲ್ ಹಗರಣದ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ಆಪ್ ಬಣ್ಣ ಬಯಲಾಗಿದೆ. ದೆಹಲಿ ಮತದಾರರು, ಕಾರ್ಯಕರ್ತರಿಗೆ ಅಭಿನಂದನೆಗಳು ಎಂದು ತಿಳಿಸಿದರು. ದೆಹಲಿಯಲ್ಲಿ ಕಾಂಗ್ರೆಸ್ ಪಕ್ಷ ಸತತ 3ನೇ ಬಾರಿಗೆ ಶೂನ್ಯ ಸಂಪಾದನೆ ಮಾಡಿದೆ. ಲೋಕಸಭಾ ಚುನಾವಣೆಯಲ್ಲೂ ಅದು ಶೂನ್ಯ ಸಂಪಾದನೆ ಮಾಡಿತ್ತು ಎಂದ ಅವರು, ಹರಿಯಾಣ, ಮಹಾರಾಷ್ಟ್ರದಲ್ಲೂ ಕಾಂಗ್ರೆಸ್ಸಿಗೆ ಮುಖಭಂಗ ಆಗಿತ್ತು ಎಂದು ವಿವರಿಸಿದರು.

ಪ್ರಶ್ನೆಗೆ ಉತ್ತರಿಸಿದ ಅವರು, ಗ್ಯಾರೆಂಟಿಗಳೆಲ್ಲ ತಾತ್ಕಾಲಿಕ ಎಂದರು. ತಾತ್ಕಾಲಿಕ ಗ್ಯಾರೆಂಟಿಗಿಂತ ದೃಢ ನಾಯಕತ್ವ ಕೊಡುವ ನರೇಂದ್ರ ಮೋದಿಜೀ ನೇತೃತ್ವದ ಬಿಜೆಪಿಯಿಂದ ಮಾತ್ರ ಅಭಿವೃದ್ಧಿ ಸಾಧ್ಯ ಎಂಬುದನ್ನು ದೆಹಲಿ ಮತದಾರರು ಮತ್ತೊಮ್ಮೆ ರುಜುವಾತು ಮಾಡಿದ್ದಾರೆ ಎಂದು ತಿಳಿಸಿದರು.

**ಮುಂದಿನ ಚುನಾವಣೆಗೆ ದಿಕ್ಸೂಚಿ– ಅಶೋಕ್**

ವಿಪಕ್ಷ ನಾಯಕ ಆರ್.ಅಶೋಕ್ ಅವರು ಮಾತನಾಡಿ, ದೆಹಲಿ ಚುನಾವಣಾ ಫಲಿತಾಂಶವು ಮುಂದಿನ ಕರ್ನಾಟಕ, ತೆಲಂಗಾಣದ ಚುನಾವಣೆಗೆ ದಾರಿದೀಪ ಎಂದರು. ಇದು ದೇಶಕ್ಕೆ ಸಿಕ್ಕಿದ ಗೆಲುವು ಎಂದು ತಿಳಿಸಿದರು. ಡಿಕೆಶಿ ಗ್ಯಾರೆಂಟಿ ದೆಹಲಿಯಲ್ಲಿ ಠುಸ್ ಪಟಾಕಿ ಆಗಿದೆ ಎಂದು ವ್ಯಂಗ್ಯವಾಡಿದರು.

ಕರ್ನಾಟಕದಲ್ಲಿ 5 ಗ್ಯಾರಂಟಿ ಕೊಟ್ಟು ಅಭಿವೃದ್ಧಿ ಇಲ್ಲವಾಗಿದೆ. ಕಾನೂನು– ಸುವ್ಯವಸ್ಥೆ ಹದಗೆಟ್ಟಿದೆ. ಇದೇ ಕೇಜ್ರಿವಾಲ್ 25 ಉಚಿತಗಳನ್ನು ನೀಡಿದ್ದರು. ಅವರ ಸ್ಥಿತಿ ಏನಾಗಿದೆ? ಎಂದು ಪ್ರಶ್ನಿಸಿದರು. ಇದು ದೇಶಕ್ಕೆ ದಿಕ್ಸೂಚಿ ಎಂದು ತಿಳಿಸಿದರು.

**ಕೇಜ್ರಿವಾಲ್ ಸರಕಾರ ಭ್ರಷ್ಟಾಚಾರಕ್ಕೆ ಬಲಿಯಾಗಿದೆ– ಛಲವಾದಿ ನಾರಾಯಣಸ್ವಾಮಿ**

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡಿ, ಅರವಿಂದ ಕೇಜ್ರಿವಾಲ್ ಅವರ ದೆಹಲಿ ಸರಕಾರ ಭ್ರಷ್ಟಾಚಾರಕ್ಕೆ ಬಲಿಯಾಗಿದೆ ಎಂದು ಅಭಿಪ್ರಾಯಪಟ್ಟರು. ಬಿಜೆಪಿ ಇಡೀ ದೇಶದಲ್ಲಿ ಭ್ರಷ್ಟಾಚಾರದ ವಿಚಾರದಲ್ಲಿ ಒಂದೇ ಒಂದು ಆಪಾದನೆಯನ್ನೂ ಹೊತ್ತಿಲ್ಲ ಎಂದು ವಿವರಿಸಿದರು. ಕರ್ನಾಟಕದಲ್ಲಿ ನಮ್ಮ ವಿರುದ್ಧ ಶೇ 40 ಕಮಿಷನ್, ಪೇ ಸಿಎಂ ಮತ್ತಿತರ ಆರೋಪ ಮಾಡಿ ಚುನಾವಣಾ ತಂತ್ರ ಹೆಣೆದಿದ್ದ ಕಾಂಗ್ರೆಸ್ಸಿನದು ದೆಹಲಿಯಲ್ಲಿ ಶೂನ್ಯ ಸಂಪಾದನೆ ಎಂದು ಟೀಕಿಸಿದರು. ಈಗ ಅವರು ಖಾತೆ ತೆರೆದಿಲ್ಲ; ಆದರೆ ಕ್ಯಾತೆ ತೆಗೆಯುವುದನ್ನು ಅವರು ಬಿಡುವುದಿಲ್ಲ ಎಂದು ತಿಳಿಸಿದರು.

**ಸುಳ್ಳಿನ ಮುಖವಾಡ ಕಳಚಿಬಿದ್ದಿದೆ: ಸಿ.ಟಿ.ರವಿ**

ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರು ಮಾತನಾಡಿ, ಕೇಜ್ರಿವಾಲ್ ಪ್ರಾಮಾಣಿಕ ಅಲ್ಲ; ಭ್ರಷ್ಟ ಎಂಬುದು ಜನರಿಗೆ ಮನವರಿಕೆ ಆಗಿದೆ. ಸುಳ್ಳಿನ ಮುಖವಾಡ ಕಳಚಿಬಿದ್ದಿದೆ ಎಂದು ತಿಳಿಸಿದರು. ಕಾಂಗ್ರೆಸ್ ಅವಲೋಕನ ಮಾಡಿಕೊಳ್ಳಬೇಕಿದೆ. ಕೇವಲ ನಕಾರಾತ್ಮಕ ಪ್ರಚಾರದಿಂದ ಚುನಾವಣೆ ಗೆಲ್ಲಲು ಅಸಾಧ್ಯ ಎಂದು ತಿಳಿಸಿದರು. ಅಂಬೇಡ್ಕರರ ಸಂವಿಧಾನ, ಜನತೆಯ ಸಂವಿಧಾನ

## ಮದ್ಯ ಸಾಗಾಟ; ಹೆಡ್ ಕಾನ್ಸ್‌ಟೇಬಲ್ ಅಮಾನತು

**ಕಾರವಾರ (ಉತ್ತರಕನ್ನಡ):** ಜಿಲ್ಲೆಯ ಅಂಕೋಲಾ ತಾಲೂಕಿನ ರಾಷ್ಟ್ರೀಯ ಹೆದ್ದಾರಿ 66ರ ಹಟ್ಟಿಕೇರಿ ಬಳಿ ಕಾರಿನಲ್ಲಿ ಅಕ್ರಮವಾಗಿ ಮದ್ಯ ಸಾಗಿಸುತ್ತಿದ್ದ ಇಬ್ಬರು ಆರೋಪಿಗಳನ್ನು ಅಂಕೋಲಾ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಪ್ರಕರಣ ಸಂಬಂಧ ಹಳಿಯಾಳ ಪೊಲೀಸ್ ಠಾಣೆಯ ಹೆಡ್ ಕಾನ್ಸ್‌ಟೇಬಲ್ ಸಂತೋಷ ಲಮಾಣಿ ಅವರನ್ನು ಅಮಾನತು ಮಾಡಲಾಗಿದೆ.

ಈ ಬಗ್ಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ನಾರಾಯಣ ಆದೇಶ ಹೊರಡಿಸಿದ್ದಾರೆ. ಖಚಿತ ಮಾಹಿತಿ ಮೇರೆಗೆ ಕಾರವಾರದ ಕಡೆಯಿಂದ ಬರುತ್ತಿದ್ದ ಕಾರನ್ನು ಪೊಲೀಸರು ಅಡ್ಡಗಟ್ಟಿ ತಪಾಸಣೆ ನಡೆಸಿದಾಗ 80,905 ರೂಪಾಯಿ ಮೌಲ್ಯದ ಗೋವಾ ಮದ್ಯ ದೊರೆತಿತ್ತು. ಪ್ರಕರಣ ಸಂಬಂಧ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದ ಪಾಂಡವಪುರ ಮೂಲದ ದಿವಾಕರ ಆರ್.ಈರಯ್ಯ (33) ಮತ್ತು ಮಾದೇವ ಕೆ.ಕೃಷ್ಣಪ್ಪ (40) ಎಂಬವರನ್ನು ಬಂಧಿಸಲಾಗಿದೆ.

ಎಸ್‌ಪಿ ಆದೇಶದ ವಿವರ: ಆರೋಪಿಗಳು ಈ ಹಿಂದೆ ಮದ್ಯ ಸಾಗಾಟ ಪ್ರಕರಣವೊಂದರಲ್ಲಿ ಸಿಕ್ಕಿ ಬಿದ್ದಿದ್ದ ಹಳಿಯಾಳ ಪೊಲೀಸ್ ಠಾಣೆಯ ಸಂತೋಷ ಲಮಾಣಿ ಹೆಸರನ್ನು ಹೇಳಿದ್ದಾರೆ. ಕಳೆದ ಕೆಲ ತಿಂಗಳುಗಳ ಹಿಂದಷ್ಟೇ ಗೋವಾ ಅಕ್ರಮ ಸಾರಾಯಿ ಸಾಗಾಟ ಪ್ರಕರಣದಲ್ಲಿ ಗೋಕರ್ಣ ಪೊಲೀಸರಿಗೆ ಸಿಕ್ಕಿಬಿದ್ದಿದ್ದರು. ಇದೀಗ ಮತ್ತೆ ಹೆಡ್ ಕಾನ್ಸ್‌ಟೇಬಲ್ ಅಣತಿ ಮೇರೆಗೆ ಅಕ್ರಮ ಗೋವಾ ಮದ್ಯ ಸಾಗಾಟ ಮಾಡುತ್ತಿರುವ ಬಗ್ಗೆ ಬಂಧಿತ ಆರೋಪಿಗಳು ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಹೆಡ್ ಕಾನ್ಸ್‌ಟೇಬಲ್ ಸಂತೋಷರನ್ನು ಅಮಾನತುಗೊಳಿಸಲಾಗಿದೆ ಎಂದು ಎಸ್‌ಪಿ ಆದೇಶದಲ್ಲಿ ತಿಳಿಸಿದ್ದಾರೆ.

ವಿಚಾರಣೆ ವೇಳೆ ಆರೋಪಿಗಳು, ಆಕಾಶ ಹಾಗೂ ಸಂತೋಷ್ ಎನ್ನುವವರು ತಮ್ಮಕಾರಿಗೆ ಮದ್ಯ ಲೋಡ್ ಮಾಡಿ ಗೋವಾ ಗಡಿ ದಾಟಿಸಿಕ್ಕೊಟ್ಟಿರುವ ಬಗ್ಗೆ ತಿಳಿಸಿ, ಅವರು ಕರೆ ಮಾಡಿರುವ ಬಗ್ಗೆ ಇಬ್ಬರ ಫೋನ್ ನಂಬರ್ ಕೂಡ ನೀಡಿದ್ದರು. ಅದರಂತೆ ತನಿಖೆ ಕೈಗೊಂಡಾಗ ಆರೋಪಿಗಳಾದ ಆಕಾಶ ಹಾಗೂ ಸಂತೋಷ್ ಎಂಬವರ ಸಹಾಯದಿಂದ 80,905 ರೂ. ಮೌಲ್ಯದ ಸಾರಾಯಿ ಬಾಟಲಿಗಳನ್ನು ಯಾವುದೇ ಪರವಾನಗಿ ಇಲ್ಲದೇ ಸಾಗಾಟ ಮಾಡುತ್ತಿರುವುದು ಗೊತ್ತಾಯಿತು. ಇಬ್ಬರು ಆರೋಪಿಗಳು ಹಾಗೂ ಸಾರಾಯಿ ಬಾಟಲಿಗಳ ಸಹಿತ ಕಾರನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿತರ ಮೇಲೆ ಅಂಕೋಲಾ ಪೊಲೀಸ್ ಠಾಣೆಯಲ್ಲಿ ಕಲಂ: 32,34,38(ಎ) ಕರ್ನಾಟಕ ಅಬಕಾರಿ ಕಾಯಿದೆ ಪ್ರಕಾರ ಪ್ರಕರಣ ದಾಖಲಿಸಿ, ತನಿಖೆ ಕೈಗೊಳ್ಳಲಾಗಿದೆ ಎಂದು ಎಸ್‌ಪಿ ಆದೇಶದಲ್ಲಿ ಮಾಹಿತಿ ನೀಡಿದ್ದಾರೆ.

ಪ್ರಕರಣ ಸಂಬಂಧ ತನಿಖೆ ನಡೆಸಿದಾಗ ಪುನಃ ಅಕ್ರಮ ಮದ್ಯ ಸಾಗಾಟ ದಂಧೆಯಲ್ಲಿ ತೊಡಗಿಕೊಂಡಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಹೆಡ್ ಕಾನ್ಸ್‌ಟೇಬಲ್ ಸಂತೋಷ ಲಮಾಣಿಯನ್ನು ಅಂಕೋಲಾ ಪೊಲೀಸರು ಬಂಧಿಸಿದ್ದಾರೆ. ಅಲ್ಲದೆ, ನ್ಯಾಯಾಂಗ ಬಂಧನದಲ್ಲಿರುವುದರಿಂದ ಸದ್ರಿಯವರ ಮೇಲಿನ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ ತಕ್ಷಣ ಜಾರಿಗೆ ಬರುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮಾನತುಗೊಳಿಸಿ ಆದೇಶ ನೀಡಿದ್ದಾರೆ.

## ಮುಡಾ ಹಗರಣ: ಅಂತಿಮ ಹಂತಕ್ಕೆ ಲೋಕಾಯುಕ್ತ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಪತ್ನಿ ಪಾರ್ವತಿ ವಿರುದ್ಧ ಕೇಳಿ ಬಂದಿರುವ ಮುಡಾ ಹಗರಣ ಆರೋಪದ ತನಿಖೆ ಅಂತಿಮ ಹಂತಕ್ಕೆ ಬಂದಿದೆ.

ಮೈಸೂರು ಲೋಕಾಯುಕ್ತ ಪೊಲೀಸರು ಈವರೆಗೆ ಮಾಡಲಾದ ಆರೋಪ ಸಂಬಂಧ ಪರಿಶೀಲನೆ ನಡೆಸಿ ಹಲವರ ವಿಚಾರಣೆ ನಡೆಸಿದ್ದು, ಅಂತಿಮ ವರದಿ ಸಲ್ಲಿಸಲು ಸಿದ್ಧತೆ ನಡೆಸುತ್ತಿದ್ದಾರೆ.

ಮುಡಾ ನಿವೇಶನ ಹಂಚಿಕೆ ಪ್ರಕರಣದ ಎ1 ಸಿಎಂ ಸಿದ್ದರಾಮಯ್ಯ, ಎ2 ಆಗಿರುವ ಸಿದ್ಧರಾಮಯ್ಯ ಪತ್ನಿ ಪಾರ್ವತಿ, ಎ3 ಮಲ್ಲಿಕಾರ್ಜುನ, ಎ4 ದೇವರಾಜು ಸೇರಿದಂತೆ ಹಲವರ ವಿಚಾರಣೆಯನ್ನು ಮೈಸೂರು ಲೋಕಾಯುಕ್ತ ನಡೆಸಿತ್ತು. ಈ ವೇಳೆ ಆರೋಪ ಸಂಬಂಧ ಸಿಕ್ಕ ಸಾಕ್ಷಿಗಳ ಪರಿಶೀಲನೆ ಮತ್ತು ವಿಚಾರಣೆ ಸಹ ನಡೆಸಲಾಗಿತ್ತು. ಸದ್ಯ ಈ ವೇಳೆ ಸಂಗ್ರಹಿಸಲಾದ ವರದಿಗಳ ಆಧರಿಸಿ ಅಂತಿಮ ವರದಿ ಸಿದ್ಧಪಡಿಸಲಾಗುತ್ತಿದೆ.

ಬಾಗಶಃ ವರದಿ ಬಹುತೇಕ ಮುಕ್ತಾಯದ ಹಂತ ತಲುಪಿದ್ದು, ಇನ್ನು ಎರಡು ಮೂರು ದಿನಗಳಲ್ಲಿ ಅಂತಿಮ ವರದಿ ಸಿದ್ಧಪಡಿಸಲಾಗುತ್ತಿದೆ.

ಬಾಗಶಃ ವರದಿ ಬಹುತೇಕ ಮುಕ್ತಾಯದ ಹಂತ ತಲುಪಿದ್ದು, ಇನ್ನು ಎರಡು ಮೂರು ದಿನಗಳಲ್ಲಿ ಅಂತಿಮ ವರದಿ ಸಿದ್ಧಗೊಳ್ಳಲಿದೆ. ಆ ಬಳಿಕ ವರದಿ ಸ್ಕ್ರೂಟಿನಿ ಪ್ರಕ್ರಿಯೆ ಮುಗಿಸಿ ಮೈಸೂರು ಲೋಕಾಯುಕ್ತ ಎಸ್ಪಿ, ವರದಿಯನ್ನು ಐಜಿಪಿ ಸುಬ್ರಮಣೇಶ್ವರ ರಾವ್‌ಗೆ ಸಲ್ಲಿಸಲಿದ್ದಾರೆ. ನಂತರ ವರದಿಯ ಸಾರಾಂಶ ಲೋಕಾಯುಕ್ತ ಎಡಿಜಿಪಿಗೆ ಸಲ್ಲಿಕೆಯಾ ಗಲಿದ್ದು, ಕಾನೂನು ಸಲಹೆಗಾಗಿ ತಜ್ಞರ ಮೊರೆ ಹೋಗಲಿದ್ದಾರೆ. ಆ ಬಳಿಕ ವರದಿ ಕೋರ್ಟ್‌ಗೆ ಸಲ್ಲಿಕೆಯಾಗಲಿದೆ. ಮತ್ತೊಂದೆಡೆ ಸಿದ್ದರಾಮಯ್ಯ ಪತ್ನಿ ಪಾರ್ವತಿ ಹಾಗೂ ಸಚಿವ ಬೈರತಿ ಸುರೇಶ್‌ಗೆ ವಿಚಾರಣೆಗೆ ಹಾಜರಾಗುವಂತೆ ಇಡಿ ನೋಟಿಸ್ ನೀಡಿದ್ದು, ನೋಟಿಸ್ ಪ್ರಶ್ನಿಸಿ ಹೈಕೋರ್ಟ್ ಮೊರೆ ಹೋದ ಹಿನ್ನಲೆ ತಾತ್ಕಲಿಕ ತಡೆ ನೀಡಿದ್ದ ಕೋರ್ಟ್, ಮುಂದಿನ ವಿಚಾರಣೆಯನ್ನು ಇದೇ 10 ಕ್ಕೆ ನಿಗದಿ ಮಾಡಿದೆ. ಮುಂದಿನ ಬೆಳವಣಿಗೆ ಕಾದು ನೋಡಬೇಕಿದೆ.

ಮೊದಲ ಪುಟದಿಂದ

## ಸಿಸೋಡಿಯಾಗೂ ಸೋಲು

ಮಾಡಿದ್ದ ಆಡಳಿತಾರೂಢ ಆಮ್ ಆದ್ಮಿ ಪಕ್ಷದ ಅಭ್ಯರ್ಥಿ ಮನೀಶ್ ಸಿಸೋಡಿಯಾ ಬಿಜೆಪಿ ಅಭ್ಯರ್ಥಿ ತರವಿಂದರ್ ಸಿಂಗ್ ಮಾರ್ವಾ ವಿರುದ್ಧ 675 ಮತಗಳಿಂದ ಸೋಲು ಅನುಭವಿಸಿದ್ದಾರೆ. ಅರವಿಂದ್ ಕೇಜ್ರಿವಾಲ್ ಹಾಗೂ ಮನೀಶ್ ಸಿಸೋಡಿಯಾ ಅವರ ಸೋಲು ಎಎಪಿಗೆ ಭಾರೀ ಮುಖಭಂಗವಾಗಿದೆ.

ಕೇಜ್ರಿವಾಲ್ 4ನೇ ಭಾರಿಗೆ ಚುನಾವಣೆಗೆ ಸ್ಫರ್ಧಿಸಿದ್ದರು. 3 ಸಲ ಭಾರಿ ಅಂತರದಿಂದ ಗೆಲುವು ಸಾಧಿಸಿದ್ದ ಇವರು ಈ ಸಲ ಪರಾಭವಗೊಂಡಿದ್ದಾರೆ. ಬಿಜೆಪಿಗೆ ಬಹುಮತ ಬಂದರೆ ಇಡೀ ಚುನಾವಣಾ ಪ್ರಚಾರದಲ್ಲಿ ಮುಂಚೂಣಿಯಲ್ಲಿದ್ದ ದಿಲ್ಲಿಯ ಬಿಜೆಪಿ ಅಭ್ಯರ್ಥಿ ಪ್ರವೇಶ್ ವರ್ಮಾ ಸಿಎಂ ಅಭ್ಯರ್ಥಿ ಆಗುವಲ್ಲಿ ಮುಂದಿದ್ದಾರೆಂದು ವಿಶ್ಲೇಷಕರು ಅಂದಾಜಿಸಿದ್ದಾರೆ.

ಪತ್ಪರ್ಗಂಜ್ ಕ್ಷೇತ್ರದಿಂದ ಸ್ಪರ್ಧೆ ಮಾಡಿದ್ದ ಎಎಪಿಯ ಅವಧ್ ಓಜಾ ಕೂಡ ಸೋಲು ಕಂಡಿದ್ದಾರೆ. ಪತ್ಪರ್‌ಗಂಜ್ ಕ್ಷೇತ್ರದಿಂದ ಬಿಜೆಪಿಯ ರವೀಂದರ್ ಸಿಂಗ್ ನೇಗಿ ಅವರು ಎಎಪಿಯ ಅವಧ್ ಓಜಾ ಅವರನ್ನು ಸೋಲಿಸಿ ಗೆಲುವು ಸಾಧಿಸಿದ್ದಾರೆ. "ಇದು ನನ್ನ ವೈಯಕ್ತಿಕ ಸೋಲು. ನನಗೆ ಜನರೊಂದಿಗೆ ಸಂಪರ್ಕ ಸಾಧಿಸಲು ಸಾಧ್ಯವಾಗಲಿಲ್ಲ. ಮುಂದಿನ ಚುನಾವಣೆಯಲ್ಲಿ ಇಲ್ಲಿಂದಲೇ ಸ್ಪರ್ಧಿಸುತ್ತೇನೆ" ಎಂದು ಅವಧ್ ಓಜಾ ಹೇಳಿದ್ದಾರೆ.

ಜಂಗ್‌ಪುರ ವಿಧಾನಸಭಾ ಕ್ಷೇತ್ರದಲ್ಲಿ ಸೋಲನ್ನು ಒಪ್ಪಿಕೊಂಡಿರುವ ದೆಹಲಿಯ ಮಾಜಿ ಉಪಮುಖ್ಯಮಂತ್ರಿ ಮತ್ತು ಆಮ್ ಆದ್ಮಿ ಪಕ್ಷದ (ಎಎಪಿ) ಪ್ರಮುಖ ನಾಯಕ ಮನೀಶ್ ಸಿಸೋಡಿಯಾ, "ಪಕ್ಷದ ಕಾರ್ಯಕರ್ತರು ಚೆನ್ನಾಗಿ ಹೋರಾಡಿದರು. ನಾವೆಲ್ಲರೂ ಕಷ್ಟಪಟ್ಟು ಕೆಲಸ ಮಾಡಿದ್ದೇವೆ. ಜನರು ಕೂಡ ನಮ್ಮನ್ನು ಬೆಂಬಲಿಸಿದ್ದಾರೆ. ಆದರೆ, ನಾನು ಅಲ್ಪ ಮತಗಳಿಂದ ಸೋತಿದ್ದೇನೆ. ಗೆದ್ದ ಅಭ್ಯರ್ಥಿಯನ್ನು ನಾನು ಅಭಿನಂದಿಸುತ್ತೇನೆ. ಅವರು ಕ್ಷೇತ್ರಕ್ಕಾಗಿ ಕೆಲಸ ಮಾಡುತ್ತಾರೆಂದು ನಾನು ಭಾವಿಸುತ್ತೇನೆ" ಎಂದು ಹೇಳಿದ್ದಾರೆ.

ನಾಲ್ಕನೇ ಬಾರಿಗೆ ಮರುಚುನಾವಣೆ ಬಯಸಿದ್ದ ಕೇಜ್ರಿವಾಲ್, ಕಳೆದ ಮೂರು ಚುನಾವಣೆಗಳಿಂದ ಅವರ ಭದ್ರಕೋಟೆಯಾಗಿರುವ ನವದೆಹಲಿ ವಿಧಾನಸಭಾ ಸ್ಥಾನವನ್ನು ಗೆಲ್ಲುವ ಭರವಸೆ ಹೊಂದಿದ್ದರು. ಆದರೆ, ಬಿಜೆಪಿ ಮುಂದೆ ಸೋಲು ಒಪ್ಪಿಕೊಂಡಿದೆ. ಈ ಬಾರಿ ಪರ್ವೇಶ್ ವರ್ಮಾ ಗೆಲುವು ಸಾಧಿಸಿದ್ದು, ದೆಹಲಿ ಸಿಎಂ ರೇಸ್‌ನಲ್ಲೂ ಮುಂಚುಣಿಯಲ್ಲಿದ್ದಾರೆ.

# ತಾಲ್ಲೂಕು ಮಟ್ಟದ ದಲಿತರ ಕುಂದು ಕೊರತೆ ಸಭೆ



**ಮುಳಬಾಗಿಲು:** ದಲಿತರ ಬೆನ್ನೆಲುಬಾಗಿ ಪೊಲೀಸ್ ಇಲಾಖೆ ಸದಾ ಇರುತ್ತದೆ, ತಾವು ಸಹ ಇಲಾಖೆಯೊಂದಿಗೆ ಉತ್ತಮ ಬಾಂಧವ್ಯ ಹೊಂದಿರುವುದು ಈ ಸಭೆಯಿಂದ ಗೊತ್ತಾಗುತ್ತಿದೆ. ಏನು ಈ ದಿನ ಸಭೆಯಲ್ಲಿ ದಲಿತ ಮುಖಂಡರು ತಿಳಿಸಿರುವ ಸಮಸ್ಯೆಗಳಲ್ಲಿ ಮುಂದಿನ ಸಭೆ ಒಳಗೆ ಶೇಕಡ ನೂರಕ್ಕೆ-60ರಷ್ಟು ಸಮಸ್ಯೆಗಳನ್ನು ಇತ್ಯರ್ಥಪಡಿಸಲು ಕ್ರಮ ಕೈಗೊಳ್ಳುವುದಾಗಿ ಜಿಲ್ಲಾ ಪೊಲೀಸ್ ರಕ್ಷಣಾಧಿಕಾರಿ ಬಿ.ನಿಖಿಲ್ ತಿಳಿಸಿದರು.

ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಏರ್ಪಡಿಸಿದ್ದ ತಾಲ್ಲೂಕು ಮಟ್ಟದ ದಲಿತರ ಕುಂದು ಕೊರತೆಗಳ ಸಭೆಯಲ್ಲಿ ಮುಖಂಡರಿಂದ ಸಮಸ್ಯೆಗಳನ್ನು ತಿಳಿದು ಮಾತನಾಡಿದರು.

ಅಸ್ಪೃಶ್ಯತೆ ಆಚರಣೆ, ದಲಿತ ಸಮುದಾಯವನ್ನು ತಾರತಮ್ಯದಿಂದ ನೋಡುವುದು ಎಲ್ಲಿಯೂ ಕಂಡುಬಂದಿಲ್ಲ, ಅಂತ ಘಟನೆಗಳು ಎಲ್ಲಿಯಾದರೂ ನಡೆಯುತ್ತಿದ್ದರೆ ಪೊಲೀಸ್ ಇಲಾಖೆ ಗಮನಕ್ಕೆ ತನ್ನಿ ಎಂದು ತಿಳಿಸಿ. ಇಂದಿನ ಸಭೆಯಲ್ಲಿ ತಿಳಿಸಿರುವ ಎಲ್ಲಾ ಸಮಸ್ಯೆಗಳ ಇತ್ಯಾರ್ಥಕ್ಕೆ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಪರಿಹರಿಸಲಾಗುವುದೆಂದರು.

ನಗರದ ಬಜಾರು ಬೀದಿ ರಸ್ತೆಗೆ ಡಾ.ಬಿ.ಆರ್ ಅಂಬೇಡ್ಕರ್ ಬಜಾರು ಬೀದಿ ಎಂದು ನಾಮಫಲಕ ಸಹ ಅಳವಡಿಸಲಾಗಿದೆ, ಆದರೆ ಇದುವರೆಗೂ ಕಾರ್ಯರೂಪಕ್ಕೆ ಬಂದಿಲ್ಲ, ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಸರ್ಕಾರದಿಂದ ಒಂದು ಕೋಟಿ ರೂ ಮಂಜೂರಾಗಿದೆ ಅಷ್ಟೇ ಅಲ್ಲದೆ ಶಾಸಕರು ಸಹ 25 ಲಕ್ಷ ನೀಡುವುದಾಗಿ ತಿಳಿಸಿದ್ದಾರೆ. ಆದರೆ ಭವನಕ್ಕೆ ಸೇರಿದ 20 ಗುಂಟೆ ಜಮೀನಿನ ತಕರಾರಿನಿಂದ ನಿರ್ಮಾಣಕ್ಕೆ ತೊಂದರೆಯಾಗಿದೆ ಹಾಗಾಗಿ ಈ ಕೂಡಲೇ ಸಮಸ್ಯೆಯನ್ನು ಇತ್ಯರ್ಥ ಪಡಿಸಬೇಕು. ತಾಲೂಕಿನಲ್ಲಿ ಎಗ್ಗಿಲ್ಲದೆ ಮದ್ಯ ಮಾರಾಟವಾಗುತ್ತಿದ್ದರು ಅಬಕಾರಿ ಇಲಾಖೆ ನಿರ್ಲಕ್ಷ ತೋರಿದೆ, ಅದರಲ್ಲೂ ಯಥೇಚ್ಛವಾಗಿ ದಲಿತ ಕೇರಿಗಳಲ್ಲಿ ಸಾರಾಯಿ ಮಾರಾಟ ಮಾಡುವ ಚಿಲ್ಲರೆ ಅಂಗಡಿಗಳ ಮಾಲೀಕರ ಮೇಲೆ ಕಠಿಣ ಕಾನೂನು ಕ್ರಮ ತೆಗೆದುಕೊಳ್ಳಬೇಕು. ಕೂಲಿ ನಾಲಿ ಮಾಡಿ ಜೀವನ ಕಟ್ಟಿಕೊಂಡಿರುವ ದಲಿತ ಬಡ ಕುಟುಂಬಗಳು ಅಕ್ರಮ ಮದ್ಯ ಮಾರಾಟಕ್ಕೆ ಬಲಿಯಾಗುತ್ತಿವೆ ಎಂದು ದೂರಿದರು.

ಸಭೆಯಲ್ಲಿ ಡಿವೈಎಸ್ಪಿ ನಂದಕುಮಾರ್, ವೃತ ನಿರೀಕ್ಷಕರಾದ ಕೆ,ಜಿ ಸತೀಶ್, ರಾಜಣ್ಣ, ಪಿಎಸೈಗಳಾದ ವಿಠ್ಠಲ್ ವೈ ತಳವಾರ್, ಮಮತಾ, ಉಪ ತಹಸಿಲ್ದಾರ್ ಆರ್.ಕೊಂಡಪ್ಪ, ತಾ.ಪಂ ವ್ಯವಸ್ಥಾಪಕ ವರದರಾಜು, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಭುವನ್ ಕುಮಾರ್, ದಲಿತ ಮುಖಂಡರಾದ ಗೊಲ್ಲಹಳ್ಳಿ ವೆಂಕಟೇಶ್, ಮೆಕಾನಿಕ್ ಶ್ರೀನಿವಾಸ್, ಸಂಗಸಂದ್ರ ವಿಜಯ್ ಕುಮಾರ್, ವಿ.ಕೆ ರಾಜು, ತಾತಿಘಟ್ಟ ರಾಮಚಂದ್ರಪ್ಪ, ಗುಜನಹಳ್ಳಿ ರಾಮಪ್ಪ ಮತ್ತಿತರರಿದ್ದರು.

# ಕಮಾಂಡರ್ ಸುಧೀರ್ ಮತ್ತು ಅಧಿಕಾರಿಗಳ ತಂಡ ಭೇಟಿ



**ಶಿಡ್ಲಘಟ್ಟ:** ಕೇಂದ್ರದ ಏರ್ ಕಮಾಂಡರ್ ಸುಧೀರ್ ಯಾದವ್ ಮತ್ತು ಅವರ ಅಧಿಕಾರಿಗಳ ತಂಡವು ಜಿಲ್ಲೆಯಲ್ಲಿ ಅಧ್ಯಯನ ಪ್ರವಾಸ ಕೈಗೊಂಡಿತ್ತು. ನಗರದ ಸರ್ಕಾರಿ ರೇಷ್ಮೆಗೂಡು ಮಾರುಕಟ್ಟೆ, ಆನೂರು ಗ್ರಾಮದ ಮಾದರಿ ಅಂಗನವಾಡಿ, ಡಿಜಿಟಲ್ ಲೈಬ್ರರಿಗೆ ಭೇಟಿ ನೀಡಿತು.

ರೇಷ್ಮೆಗೂಡು ಮಾರುಕಟ್ಟೆಯಲ್ಲಿ ಇ-ಹರಾಜು, ಇ-ತೂಕ ಹಾಗೂ ಇ-ಬಟವಾಡೆ ವ್ಯವಸ್ಥೆ, ಮಾದರಿ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳಿಗೆ ಸಿಗುವ ಸವಲತ್ತು, ಡಿಜಿಟಲ್ ಲೈಬ್ರರಿಯಲ್ಲಿನ ಓದುಗರಿಗೆ ಸಿಗುತ್ತಿರುವ ಅನುಕೂಲ ಕುರಿತು ತಂಡವು ಮಾಹಿತಿ ಪಡೆಯಿತು.

ಕೇಂದ್ರ ಸರ್ಕಾರಕ್ಕೆ ಜಿಲ್ಲಾಮಟ್ಟದ ಆಡಳಿತ ವರದಿ ನೀಡಲು ಆಗಮಿಸಿದ್ದ ತಂಡಕ್ಕೆ ಇಲ್ಲಿನ ಮಾರುಕಟ್ಟೆಯಲ್ಲಿ ಇ-ಆಡಳಿತ ವ್ಯವಸ್ಥೆ ಕುರಿತು ರೇಷ್ಮೆಗೂಡು ಮಾರುಕಟ್ಟೆ ಸಹಾಯಕ ನಿರ್ದೇಶಕರಾದ ಕೆ.ತಿಮ್ಮರಾಜು ಅಗತ್ಯ ದಾಖಲೆಗಳೊಂದಿಗೆ ಮಾಹಿತಿ ಒದಗಿಸಿದರು.

ರೇಷ್ಮೆಗೂಡು ಮಾರುಕಟ್ಟೆಗೆ ಆವಕವಾಗುವ ರೇಷ್ಮೆಗೂಡಿನ ಪ್ರಮಾಣಕ್ಕೆ ತಕ್ಕಂತೆ ಜಾಲರಿ ನೀಡಿ ಪ್ರತಿ ಲಾಟಿಗೂ ಸರಣಿ ಕ್ರಮ ಸಂಖ್ಯೆ ನೀಡಲಾಗುತ್ತದೆ, ಇ-ಹರಾಜು ಮೂಲಕ ರೀಲರ್ ತಮಗೆ ಬೇಕಾಗುವ ರೇಷ್ಮೆ ಗೂಡಿಗೆ ಬಿಡ್ ನೀಡುತ್ತಾರೆ, ಯಾರು ಹೆಚ್ಚಿನ ಬಿಡ್ ನೀಡುತ್ತಾರೋ ಅವರಿಗೆ ಆ ರೇಷ್ಮೆಗೂಡು ಲಾಟು ಸಿಗುತ್ತದೆ ಒಂದೊಮ್ಮೆ ರೈತನಿಗೆ ಬಿಡ್ ಬೆಲೆ ಸಮಾಧಾನ ತರದಿದ್ದಲ್ಲಿ ಬಿಡ್ ರದ್ದುಪಡಿಸುವ ಅವಕಾಶ ರೈತನಿಗಿದೆ ಎಂದರು.

ಮೊದಲ ಸುತ್ತಿನ ಬಿಡ್ ನಲ್ಲಿ ಹರಾಜು ಆಗದೆ ಉಳಿದ ರೇಷ್ಮೆಗೂಡಿಗೆ ಎರಡನೇ ಬಾರಿ ಹರಾಜಿಗೆ ಅವಕಾಶ ನೀಡಲಾಗುವುದು, ಎರಡು ಬಾರಿ ಹರಾಜಿನಲ್ಲಿಯೂ ರೈತನಿಗೆ ಬೆಲೆ ಸಮಾಧಾನವಾಗದಿದ್ದಲ್ಲಿ ಮರು ದಿನದ ಬಿಡ್ ಗೆ ಕಾಯಬಹುದು ಅಥವಾ ಬೇರೆ ರೇಷ್ಮೆಗೂಡು ಮಾರುಕಟ್ಟೆಗೆ ಹೋಗಲು ಮುಕ್ತ ಅವಕಾಶ ನೀಡಲಾಗುವುದು, ಹರಾಜು ಪ್ರಕ್ರಿಯೆ ಮುಗಿದಾದ ಮೇಲೆ ಎಲೆಕ್ಟ್ರಾನಿಕ್ ಯಂತ್ರಗಳಲ್ಲಿ ರೇಷ್ಮೆಗೂಡಿನ ನಿಖರ ತೂಕ ಮಾಡಲಾಗುತ್ತದೆ,ಹರಾಜು ಮುಗಿದ 24 ಗಂಟೆಯ ಒಳಗೆ ರೈತರ ಬ್ಯಾಂಕ್ ಖಾತೆಗೆ ಹಣ ಜಮೆ ಮಾಡಲಾಗುವುದು, ಇದರಿಂದ ರೇಷ್ಮೆಗೂಡಿನ ಗುಣಮಟ್ಟದ ಆಧಾರದಲ್ಲಿ ರೈತರಿಗೆ ಬೆಲೆ ಸಿಗಲಿದೆ ತಮಗೆ ಬೇಕಾದ ಗುಣಮಟ್ಟದ ರೇಷ್ಮೆಗೂಡು ರೀಲರ್‌ಗಳಿಗೆ ಸಿಗಲಿದೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಕಚೇರಿ ಚುನಾವಣಾ ತಹಶೀಲ್ದಾರ್ ಬಿ.ಕೆ.ಶ್ವೇತಾ, ಜಿಲ್ಲಾ ಪಂಚಾಯಿತಿ ನರೇಗಾ ಸಂಯೋಜಕ ಜಿ.ಎನ್.ಮಧು ಮತ್ತೀತರರು ಹಾಜರಿದ್ದರು.

# ಹಾಲಿನ ಬಾಕಿ ಹಾಗೂ ಖರೀದಿ ದರ ಹೆಚ್ಚಳಕ್ಕೆ ಒತ್ತಾಯ



**ಶಿಡ್ಲಘಟ್ಟ:** ಹಾಲಿನ ಬಾಕಿ ಹಣ ನೀಡಬೇಕು ಹಾಗೂ ಹಾಲಿನ ಖರೀದಿ ದರ ಹೆಚ್ಚಿಸಲು ಒತ್ತಾಯಿಸಿ ಪ್ರತಿಭಟನೆಯನ್ನು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯಿಂದ ಫೆ.10 ರಂದು ಬೆಂಗಳೂರಿನ ಕರ್ನಾಟಕ ಹಾಲು ಮಹಾಮಂಡಳಿ ಎದುರು ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ರೈತ ಸಂಘ ಹಾಗೂ ಹಸಿರು 7ನೆ ರಾಜ್ಯ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಬೈರೇಗೌಡ ತಿಳಿಸಿದ್ದಾರೆ.

ನಗರದ ರೈತ ಸಂಘದ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಜ.1ರಿಂದ ಪ್ರತಿ ಲೀಟರ್ ಹಾಲಿಗೆ 5 ರೂ.ಗಳನ್ನು ಹೆಚ್ಚಳ ಮಾಡುವುದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿದ್ದರು, ಆದರೆ 35 ದಿನಗಳಾದರೂ ಬೆಲೆ ಏರಿಕೆ ಆಗಿಲ್ಲ ಕುಡಿಯುವ ನೀರಿಗಿಂತ ಹಾಲು ಅಗ್ಗವಾಗಿರುವುದು ದುರಂತ ಎಂದರು.

ಹಾಲಿಗೆ ಸೂಕ್ತ ಬೆಲೆ ಸಿಗದಿರುವುದೇ ರಾಜ್ಯದಲ್ಲಿ ದಿನೇ ದಿನೆ ಹಾಲಿನ ಉತ್ಪಾದನೆ ಕುಠಿತವಾಗುತ್ತಿರುವುದಕ್ಕೆ ಕಾರಣ,ರಾಜ್ಯ ಮತ್ತು ಕೇಂದ್ರ ಬಜೆಟ್‌ನಲ್ಲಿ ರೈತರನ್ನು ಕಡೆಗಣಿಸಲಾಗುತ್ತಿದ್ದು ನಗರ ಕೇಂದ್ರಿತ ಅಭಿವೃದ್ಧಿಗೆ ಆದ್ಯತೆ ನೀಡುವ ಮೂಲಕ ಗ್ರಾಮಗಳನ್ನು ನಿರ್ಲಕ್ಷಿಸಿ, ಜನರು ಗುಳೆ ಹೋಗುವಂತೆ ಮಾಡಲಾಗುತ್ತಿದೆ. ಹೈನೋದ್ಯಮದ ಉಳಿವಿಗಾಗಿ ಪ್ರತಿ ಲೀಟರ್‌ಗೆ ಕನಿಷ್ಠ 50 ರೂ.ಗಳ ಬೆಲೆ ಸಿಗಬೇಕೆಂದು ಒತ್ತಾಯಿಸಿದರು

ನೀರಿಗೆ ಬರವಿದ್ದರೂ ಹಾಲಿಗೆ ಬರವಿಲ್ಲದಂತಹ ನಾಡು ನಮ್ಮದು. ಸುಮಾರು 25 ಲಕ್ಷ ರೈತ ಕುಟುಂಬಗಳು 15,450 ಹಾಲು ಉತ್ಪಾದಕರ ಸಂಘಗಳ ಮೂಲಕ 16 ಹಾಲು ಮಹಾ ಮಂಡಳಿಗಳಿಗೆ ಪ್ರತಿದಿನ 80 ಲಕ್ಷ ಲೀಟರ್ ಹಾಲು ಪೂರೈಸುತ್ತಿವೆ,ಪಶು ಆಹಾರದ ಜೊತೆಗೆ ಬೂಸಾ, ಹಿಂಡಿ, ಚಕ್ಕೆ ಮಿಶ್ರಣ ಎಲ್ಲದರ ಬೆಲೆ ಏರಿಕೆಯಾಗಿದೆ.

ಅಂಕಿ ಅಂಶಗಳ ಪ್ರಕಾರ ಹಾಲಿನ ಉತ್ಪಾದನೆಗೆ 50 ರೂ.ಗಳು ಖರ್ಚಾಗುತ್ತಿದೆ,ಸ್ವಾಮಿನಾಥನ್ ವರದಿಯಂತೆ ಪ್ರತಿ ಲೀಟರ್ ಹಾಲಿಗೆ 76 ರೂ.ಗಳನ್ನು ನೀಡಬೇಕಿದೆ, ಆದರೆ ಸರ್ಕಾರ ಕಣ್ಮುಚ್ಚಿ ಕುಳಿತಿದೆ ಎಂದರು.

ಈ ಸಂದರ್ಭದಲ್ಲಿ ರೈತ ಸಂಘದ ಮುನಿನಂಜಪ್ಪ, ಕೆಂಪರೆಡ್ಡಿ, ಮಳಮಾಚನಹಳ್ಳಿ ರಮೇಶ್,ಭೀಮಣ್ಣ, ದೇವರಾಜ್, ನಾಗರಾಜು, ನಾರಾಯಣಸ್ವಾಮಿ, ವಾಸುದೇವ್, ಕೃಷ್ಣಪ್ಪ, ಸೊಣ್ಣಪ್ಪರೆಡ್ಡಿ, ರಾಮಚಂದ್ರಪ್ಪ, ಸುಬ್ರಮಣಿ, ಜಗದೀಶ್ ಮುಂತಾದವರು ಹಾಜರಿದ್ದರು.

# ಅರ್ಥಪೂರ್ಣ ಸಮ್ಮೇಳನ ಆಚರಣೆಗೆ ಮನವಿ



**ಶಿಡ್ಲಘಟ್ಟ:** ಸಮಸ್ತ ನಾಗರೀಕರು ಸೇರಿಕೊಂಡು ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಬೇಕು ಪಕ್ಷ, ಜಾತಿ ಧರ್ಮವನ್ನು ಮೀರಿ ಎಲ್ಲಾರು ಕೈಜೋಡಿಸಬೇಕು ಎಂದು ಶಾಸಕರಾದ ಬಿ.ಎನ್. ರವಿಕುಮಾರ್ ಮನವಿ ಮಾಡಿದರು.

ಫೆ.14ರಂದು ಆಯೋಜಿಸಿರುವ ತಾಲ್ಲೂಕು 10ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸಮ್ಮೇಳನಾಧ್ಯಕ್ಷರಾಗಿ ಆಯ್ಕೆಯಾದ ಪತ್ರಕರ್ತ ರೂಪಸಿರಮೇಶ್ ಅವರ ನಿವಾಸಕ್ಕೆ ಪರಿಷತ್‌ನ ಪದಾಧಿಕಾರಿಗಳೊಂದಿಗೆ ತೆರಳಿ ಆಹ್ವಾನ ನೀಡಿ ಅವರು ಮಾತನಾಡಿದರು.

ಪರಿಷತ್ತು ಜಾತಿ,ಧರ್ಮ,ಪಕ್ಷಗಳನ್ನು ಮೀರಿ ಎಲ್ಲರನ್ನೂ ಒಳಗೊಂಡಂತೆ ಕನ್ನಡದ ಕೈಂಕರ್ಯಗಳನ್ನು ನಡೆಸಿಕೊಂಡು ಕನ್ನಡ ನಾಡು ನುಡಿ ಭಾಷೆಯ ಪರವಾದ ಚಟುವಟಿಕೆಗಳ ಮೂಲಕ ಕನ್ನಡಿಗರ ಬದುಕನ್ನು ಕಟ್ಟುವ ಕೆಲಸವನ್ನು ಮಾಡಬೇಕು ಎಂದರು. ಸಮ್ಮೇಳನಾಧ್ಯಕ್ಷರಾಗಿ ಆಯ್ಕೆ ಆಗಿರುವ ರೂಪಸಿ ರಮೇಶ್ ಅವರು ಮಾತನಾಡಿ, ಹಲವಾರು ವರ್ಷಗಳ ಹೋರಾಟದ ಬದುಕಿಗೆ ಅರ್ಥ ಸಿಕ್ಕ ದಿನ ಇದಾಗಿದೆ,ನನ್ನನ್ನು ಸಮ್ಮೇಳನಾಧ್ಯಕ್ಷರಾಗಿ ಆಯ್ಕೆ ಮಾಡಿದ್ದಕ್ಕೆ ಎಲ್ಲಾ ನನ್ನ ಕನ್ನಡದ ಬಂಧುಗಳಿಗೆ ಅಭಾರಿಯಾಗಿದ್ದೇನೆ ಎಂದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಬಿ.ಎನ್.ಸ್ವಾಮಿ, ಕ್ಷೇತ್ರ ಶಿಕ್ಷಣಾಧಿಕಾರಿ ನರೇಂದ್ರಕುಮಾರ್,ಪಿ.ಎಲ್.ಡಿ. ಅಧ್ಯಕ್ಷ ಬಂಕ್ ಮುನಿಯಪ್ಪ, ಕಸಾಪ ತಾಲ್ಲೂಕು ಅಧ್ಯಕ್ಷ ನಾರಾಯಣಸ್ವಾಮಿ, ಮುಖಂಡರಾದ ತಾದೂರುರಘು, ಎಸ್.ವಿ.ನಾಗರಾಜರಾವ್,ವಿ. ಕೃಷ್ಣ, ಮನೋಹರ್ ಹೆಚ್.ಕೆ.ಸುರೇಶ್, ಅಂಬಾರಿ ಮಂಜುನಾಥ್, ಮುಂತಾದವರು ಹಾಜರಿದ್ದರು.

# ಅಧ್ಯಕ್ಷರಾಗಿ ಅವಿರೋಧ ಆಯ್ಕೆ

**ಶಿಡ್ಲಘಟ್ಟ:** ತಾಲ್ಲೂಕಿನ ಕಸಬಾ ಹೋಬಳಿಯ ಹುಜಗೂರು ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಹುಜುಗೂರು ಎಂ.ರಾಮಯ್ಯ ಹಾಗೂ ಉಪಾಧ್ಯಕ್ಷರಾಗಿ ಎಚ್.ಕೆ. ಆಂಜಿನಪ್ಪ ಅವಿರೋಧವಾಗಿ ಆಯ್ಕೆಯಾದರು.

ಒಟ್ಟು 11 ಸಂಖ್ಯಾ ಬಲವಿರುವ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಹಾಗೂ ಉಪಾದ್ಯಕ್ಷರ ಚುನಾವಣೆ ನಡೆಯಿತು.

ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಕೇವಲ ಒಂದೊಂದು ನಾಮಪತ್ರ ಸಲ್ಲಿಕೆಯಾದ ಹಿನ್ನಲೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಚುನಾವಣಾಧಿಕಾರಿ ಕೆ.ಎಸ್.ಭಾಸ್ಕರ್ ರೆಡ್ಡಿ ಅದ್ಯಕ್ಷ ಹಾಗು ಉಪಾಧ್ಯಕ್ಷರ ಆಯ್ಕೆಯನ್ನು ಘೋಷಿಸಿದರು, ಸಹಾಯಕರಾಗಿ ಸಂಘದ ಕಾರ್ಯ ನಿರ್ವಹಣಾಧಿಕಾರಿ ಚೆನ್ನಕೇಶವ ಕಾರ್ಯ ನಿರ್ವಹಿಸಿದರು.

ಈ ಸಂದರ್ಭದಲ್ಲಿ ಸಂಘದ ನಿರ್ದೇಶಕರಾದ ಎಚ್.ಎಮ್. ಕೃಷ್ಣಾರೆಡ್ಡಿ,ಎಚ್.ಎ.ಮುನಿಸೊಣ್ಣಪ್ಪ, ವೆಂಕಟೇಶಪ್ಪ, ಹೆಚ್.ನರಸಿಂಹಯ್ಯ, ರಾಮಪ್ಪ, ಕೃಷ್ಣಪ್ಪ, ಎಚ್.ವಿ.ನಾರಾಯಣಸ್ವಾಮಿ, ಸಾವಿತ್ರಮ್ಮ, ಕೋನಮ್ಮ ಹಾಗು ಹಿರಿಯ ಮುಖಂಡರಾದ ವೆಂಕಟರಾಯಪ್ಪ,ಮುನೇಗೌಡ, ಕೃಷ್ಣಪ್ಪ,ಶ್ರೀನಿವಾಸ್, ಲಕ್ಷ್ಮೀನಾರಾಯಣ, ನಾರಾಯಣಸ್ವಾಮಿ, ಮುನಿವೆಂಕಟಪ್ಪ,ಲೋಕೇಶ್, ತಿಪ್ಪೇನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಅಂಬರೀಶ್ ಹಾಗು ಸಿಬ್ಬಂದಿ ವರ್ಗ ಹಾಜರಿದ್ದರು.



# ಧರಣಿಗೆ ಬೆಂಬಲಿಸಲು ಸಿಪಿಐ ಕರೆ



**ಚೇಳೂರು:** ಮನೆ, ನಿವೇಶನ, ಜಮೀನು, ಬಗರ್ ಹುಕ್ಕುಂ, ಅರಣ್ಯ ಸಾಗುವಳಿ ಹಕ್ಕಿಗಾಗಿ ಸಿಪಿಎಂ ಮತ್ತು ಕರ್ನಾಟಕ ಪ್ರಾಂತ ರೈತ ಸಂಘ ಕರ್ನಾಟಕ ಪ್ರಾಂತ ಕೂಲಿ ಕಾರ್ಮಿಕರ ಸಂಘದ ನೇತೃತ್ವದಲ್ಲಿ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಯಲಿದೆ.

ಚೇಳೂರು ಪಟ್ಟಣದ ಪ್ರವಾಸಿಮಂದಿರದಲ್ಲಿ ಬೆಂಗಳೂರಿನಲ್ಲಿ ನಡೆಯುವ ಅನಿರ್ಧಿಷ್ಠಾವಧಿ ಧರಣಿಯ ಪೂರ್ವ ಭಾವಿ ಸಭೆಯಲ್ಲಿ ಜಿಲ್ಲಾ ಸಿಪಿಐ(ಎಂ) ಉಪಾದ್ಯಕ್ಷರಾದ ಎಂ.ಪಿ.ಮುನಿವೆಂಕಟಪ್ಪ ಮಾತನಾಡಿ, ಜಿಲ್ಲೆಯಲ್ಲಿ ಜನರ ಸಮಸ್ಯೆಗಳು ಬೆಟ್ಟದಷ್ಟು ಇವೆ. ಬಗೆಹರಿಸುವಲ್ಲಿ ಸರಕಾರ ವಿಫಲವಾಗಿದೆ. ಜೊತೆಗೆ ಅಧಿಕಾರಿಗಳು ಬೇಜಾವಬ್ದಾರಿಯಿಂದ ವರ್ತಿಸುತ್ತಿದ್ದಾರೆ. ಚೇಳೂರು ನೂತನ ತಾಲ್ಲೂಕಾಗಿ ಐದು ವರ್ಷವಾಗಿ ಸರಕಾರಿ ಕಛೇರಿಗಳು ಪ್ರಾರಂಭವಾಗಿಲ್ಲ. ಈ ಭಾಗದಲ್ಲಿ ರೈತಾಪಿ ಜನರಿಗೆ ಜೀವನ ಮಾಡಲು ಕಷ್ಟಕರವಾಗಿದೆ ಈ ಭಾಗದಲ್ಲಿ ಶಾಶ್ವತವಾದ ನೀರಾವರಿಯು ಇಲ್ಲ, ನದಿ ನಾಲೆಗಳಿಲ್ಲ ಕೈಗಾರಿಕೆ ಪ್ರದೇಶಗಳಿಲ್ಲ ಕೂಲಿ ಮಾಡಿದರೆ ಜೀವನ ಇಲ್ಲವಾದರೆ ಇಲ್ಲ ಶಾಶ್ವತವಾದ ಕೈಗಾರಿಕೆಗಳು ತೆರೆಯಬೇಕಾಗಿದೆ ಈ ತಿಂಗಳ 10 ರಂದು ಬೆಂಗಳೂರಿನಲ್ಲಿ ನಡೆಯುವ ಅನಿರ್ಧಿಷ್ಠಾವಧಿ ಧರಣಿ ನಡೆಯಲಿದೆ 1500 ಜನ ಪ್ರತಿನಿಧಿಗಳು ಭಾಗವಹಿಸಲಿದ್ದು ಧರಣಿಯು ಬೆಂಗಳೂರು ನಗರದ ಫ್ರೀಡಂ ಪಾರ್ಕ್ನಲ್ಲಿ ನಡೆಯಲಿದೆ ಎಲ್ಲಾ ನಾಗರೀಕರು. ರೈತರು. ಯುವ ಜನತೆ. ಭಾಗವಹಿಸಿ ಯಶಸ್ವಿ ಮಾಡಲು ಮನವಿ ಮಾಡಿದರು.

ಪೂರ್ವ ಭಾವಿ ಸಭೆಯಲ್ಲಿ ಸಿಪಿಎಂ ಮುಖಂಡರಾದ ಚನ್ನರಾಯಪ್ಪ. ರಘುರಾಮಿರೆಡ್ಡಿ ಚೇಳೂರು ಸಿಪಿಐ(ಎಂ) ಕಾರ್ಯದರ್ಶಿ ಗೌನೋರುಪಲ್ಲಿ ಬೈರಾರೆಡ್ಡಿ ಮಾಚನಪಲ್ಲಿ ಬೈರೆಡ್ಡಿ. ಜಹೀರ್‌ಬೇಗ್. ಮಂಜುನಾಥ. ಸಿ.ಜಿ.ಶಿವಣ್ಣ. ಆರ್.ವಿ ಆಶೋಕ್. ಉತ್ತನ್ನ. ಆದಿನಾರಾಯಣ. ಪೆದ್ದೂರು ಲಕ್ಷ್ಮೀನಾರಾಯಣ. ರತ್ನಮ್ಮ. ರಾಮಚಂದ್ರ. ಹಾಜರಿದ್ದರು.

# ಮಿಡಿದ ಮರಗಳು; ಸಾಮಾಜಿಕ ಕಳಕಳಿಯ ಕಾಳಜಿ

**ಬೆಂಗಳೂರು:** ಮಿಡಿದ ಮರಗಳು ಕೃತಿಯಲ್ಲಿ ಪರಿಸರ ಪ್ರೇಮದ, ಜೀವನ ಪ್ರೇಮದ ಸಾಮಾಜಿಕ ಕಳಕಳಿಯ ಕಾಳಜಿಯಿದೆ ಎಂದು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ, ಹಿರಿಯ ಸಾಹಿತಿ ಡಾ.ದೊಡ್ಡರಂಗೇಗೌಡ ತಿಳಿಸಿದ್ದಾರೆ.

ನಗರದ ಬಿ.ಎಂ.ಶ್ರೀ ಪ್ರತಿಷ್ಠಾನದಲ್ಲಿ ದೊಡ್ಡರಂಗೇ ಗೌಡರ ಅಭಿಮಾನಿಗಳ ಬಳಗದವತಿಯಿಂದ ಆಯೋಜಿಸಿದ ಅವರ 79ನೇ ಜನ್ಮದಿನದ ಪ್ರಯುಕ್ತ ಪರಿಸರ ಮಂಜು ಅವರ ಮೂರನೇ ಕೃತಿಯ ಮುಖಪುಟ ಬಿಡುಗಡೆ ಮಾಡಿ ಮಾತನಾಡಿದರು.


ಹಣ ಹಣವೆಂದು ಓಡುವ ನಾವು, ಪರಿಸರ ಸಂರಕ್ಷಣೆ ಮಾಡಿಕೊಳ್ಳದಿದ್ದರೆ ನೋವು. ಇದನ್ನೆಲ್ಲಾ ಅರಿತ ಪರಿಸರ ಮಂಜು ಮಿಡಿದ ಮರಗಳು ಲೇಖನಗಳಲ್ಲಿ ಓದುಗರೊಂದಿಗೆ ಸಂವಾದಿಸಿದ್ದಾರೆ ಎಂದು ನುಡಿದರು.

ಇದೇವೇಳೆ ಮಿಡಿತ ಫೌಂಡೇಶನ್ ಸಂಸ್ಥೆ ಪರಿಸರ ಮಂಜು, ಸಿಂಹಾದ್ರಿ, ಸೌಮ್ಯ ಪವಾರ್, ಶಿವಪ್ಪ, ಸುರೇಶ್ ಮತ್ತಿತರರು ಗೌಡರ ಜನ್ಮದಿನಕ್ಕೆ ಪುಷ್ಪನಮನ ಸಲ್ಲಿಸಿ, ಸಸಿ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಚಲನಚಿತ್ರ ನಿರ್ದೇಶಕ ಡಾ.ಟಿ.ಎಸ್. ನಾಗಾಭರಣ, ನಾಡೋಜ ಡಾ. ಮನು ಬಳಿಗಾರ್, ಸಾಹಿತಿ ಉಪೇಂದ್ರ ಕುಮಾರ್, ವ.ಚ. ಚನ್ನೇಗೌಡ, ಡಾ. ವೆ. ಅಜತ್‌ಕುಮಾರ್, ಡಾ.ಪರಿಸರ ಮಂಜುನಾಥ, ಡಾ. ಗುಣವಂತ ಮಂಜು, ವ್ಯವಸ್ಥಾಪಕ ಸಂಪಾದಕಿ ಡಾ.ಜಿ.ವೈ. ಪದ್ಮನಾಗರಾಜು ಮತ್ತಿತರರು ಉಪಸ್ಥಿತರಿದ್ದರು.



# ದೇವಾಲಯ ಸ್ಥಾಪಿಸಿ, ಪೂಜಿಸುವುದು ನಮ್ಮ ಸಂಪ್ರದಾಯ



**ಕೆ.ಆರ್.ಪೇಟೆ.:** ಪುರಾತನ ಕಾಲದಿಂದಲೂ ದೇವಾಲಯಗಳನ್ನು ಸ್ಥಾಪಿಸಿ ಪೂಜಿಸುವುದು ನಮ್ಮ ಸಂಪ್ರದಾಯವಾಗಿದ್ದು ನಾಡಿನ ಜನತೆಗೆ ಶಾಂತಿ, ನೆಮ್ಮದಿ ಸಿಗಲಿದೆ ಎಂದು ಜೆಡಿಎಸ್ ಯುವ ರಾಜ್ಯಾದ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದರು.

ಅವರು ತಾಲ್ಲೂಕಿನ ಕಿಕ್ಕೇರಿ ಹೋಬಳಿಯ ಬೋಳಮಾರನಹಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಸ್ರೀ ಲಕ್ಷ್ಮಿದೇವಿ ದೇವಾಲಯದ ಜೀರ್ಣೋದ್ದಾರ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ನಮ್ಮ ಪೂರ್ವಜರು ಸಂಕಷ್ಟಗಳು ಎದುರಾದ ಸಮಯದಲ್ಲಿ ಭಗವಂತನ ಸನ್ನಿಧಿಗೆ ತೆರಳಿ ತಮ್ಮ ಕಷ್ಟಗಳನ್ನು ಪರಿಹರಿಸುವಂತೆ ಬೇಡಿಕೊಳ್ಳುವ ಮೂಲಕ ಮಾನಸಿಕ ನೆಮ್ಮದಿಯನ್ನು ಪಡೆಯುತ್ತಿದ್ದರು. ಇದು ತಲೆತಲೆಮಾರಿನಿಂದಲೂ ಬೆಳೆದು ಬಂದಿದ್ದು ಮಾನವನಿಗೆ ಶಾಂತಿ, ನೆಮ್ಮದಿಯನ್ನು ಕರುಣಿಸುವ ದೇವಾಲಯಗಳನ್ನು ಪ್ರತಿ ಗ್ರಾಮದಲ್ಲಿಯೂ ನಿರ್ಮಿಸಿ ಪೂಜಿಸುವ ಮೂಲಕ ಮಾನಸಿಕ ನೆಮ್ಮದಿಯನ್ನು ಪಡೆಯುತ್ತಿದ್ದೇವೆ. ಶ್ರೀ ಲಕ್ಷ್ಮಿದೇವಿಯ ಆಶೀರ್ವಾದ ತಾಲ್ಲೂಕಿನ ಎಲ್ಲರಿಗೂ ದೊರಕಲಿ, ಸಕಾಲದಲ್ಲಿ ಗ್ರಾಮಕ್ಕೆ ತಾಲ್ಲೂಕಿಗೆ ಸುಖಶಾಂತಿ, ಮಳೆಬೆಳೆ ಆಗಲಿ ಎಂದರು

**ಕಾರ್ಯಕರ್ತನ ಮನೆಗೆ ಭೇಟಿ:**

ಇತ್ತೀಚಿಗೆ ಮನ್ಮುಲ್ ಪರಾಜಿತ ಅಭ್ಯರ್ಥಿ ಬೋರ್‌ವೆಲ್ ಮಹೇಶ್ ಅವರ ತಾಯಿ ನಿಧನರಾಗಿದ್ದು ಆ ಸಂದರ್ಭದಲ್ಲಿ ಭೇಟಿ ನೀಡಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಬೂಕನಕೆರೆ ಹೋಬಳಿ ನಾಟನಹಳ್ಳಿ ಗ್ರಾಮಕ್ಕೆ ತೆರಳಿ ಕಾರ್ಯಕರ್ತ ಮಹೇಶ್ ಕುಟುಂಬಸ್ಥರ ಆರೋಗ್ಯ ವಿಚಾರಿಸಿ ನಂತರ ಮನ್ಮುಲ್ ಚುನಾವಣೆಯಲ್ಲಿ ಸೋಲು, ಗೆಲುವು ಸಹಜ ಗೆಲುವು ಬಂದಾಗ ಹಿಗ್ಗದೇ ಸೋಲುಂಟಾದಾಗ ಕುಗ್ಗದೇ ಕಾರ್ಯಕರ್ತರೊಂದಿಗೆ ಇದ್ದರೆ ಸಮಯವೇ ನಮಗೆ ಒಳ್ಳೆಯ ದಿನಗಳು ಬರುವಂತೆ ಮಾಡುತ್ತವೆ ಎಂದರು.

ಇದೇ ಸಂದರ್ಭದಲ್ಲಿ ಶಾಸಕ ಹೆಚ್.ಟಿ.ಮಂಜು, ರಾಜ್ಯ ಮಾರಾಟ ಮಹಾಮಂಡಳಿಯ ನಿರ್ದೇಶಕ ಚೋಳೇನಹಳ್ಳಿ ಪುಟ್ಟಸ್ವಾಮಿಗೌಡ, ಜಿಲ್ಲಾ ಜೆಡಿಎಸ್ ಪ್ರಧಾನ ಕಾರ್ಯದರ್ಶಿ ಬಿ.ಎಂ.ಕಿರಣ್, ಟಿಎಪಿಸಿಎಂಎಸ್ ಮಾಜಿ ನಿರ್ದೇಶಕ ಹೆಚ್.ಟಿ.ಲೋಕೇಶ್, ವಿ ಎಸ್ ಎಸ್ ಎನ್ ಮಾಜಿ ಅಧ್ಯಕ್ಷ ಮಹದೇವೇಗೌಡ, ಶಾಸಕರ ಆಪ್ತಸಹಾಯಕರಾದ ಪ್ರತಾಪ್, ಅಭೀ ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.

# ವಿಗ್ರಹ ಪುನರ್ ಪ್ರತಿಷ್ಠಾಪನಾ ಮಹೋತ್ಸವ



**ಮಾಗಡಿ:** ತಾಲೂಕಿನ ಮುತ್ತರಾಯನಗುಡಿ ಪಾಳ್ಯದಲ್ಲಿ ಶ್ರೀಗ್ರಾಮದೇವತೆ ಅಮ್ಮನವರ ದೇವಾಲಯ ಜೀರ್ಣೋದ್ಧಾರ ಹಾಗೂ ವಿಗ್ರಹ ಪುನರ್ ಪ್ರತಿಷ್ಠಾಪನಾ ಕುಂಭಾಭಿಷೇಕ ಮಹೋತ್ಸವ ನಡೆಯಲಿದೆ ಎಂದು ದೇವಾಲಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷ ಎಂ.ಸಿ.ಗೋವಿಂದರಾಜು ತಿಳಿಸಿದ್ದಾರೆ.

ಗೋಧೂಳಿ ಲಗ್ನದಲ್ಲಿ ಯಾಗಶಾಲೆ ಪ್ರವೇಶ, ಪ್ರಾರ್ಥನೆ, ಗಂಗಾಪೂಜೆ, ಗಣಪತಿ ಹೋಮ, ದೀಪಾರಾಧನೆ, ಗಣಹೋಮ, ಕಳಸರಾಧಾನಾ ಪೂಜೆ, ಮಹಾ ಮಂಗಳಾರತಿ ಮತ್ತು ಪ್ರಸಾದ ವಿನಿಯೋಗ ನಡೆಯಲಿದೆ.

ನವಗ್ರಹ ಹೋಮ, ಆಂಜನೇಯ ಹೋಮ, ದುರ್ಗಾಹೋಮ, ಪ್ರಾಣ ಪ್ರತಿಷ್ಠೆ, ಕುಂಭಾಭಿಷೇಕ, ಪೂರ್ಣಾಹುತಿ, ಗ್ರಾಮ ದೇವತೆ ಪ್ರತಿಷ್ಠಾಪನೆಯನ್ನು ಶೃಂಗೇರಿಯ ರಾಮಚಂದ್ರ ಭಟ್, ಗೌರಿಬಿದನೂರಿನ ಅಶ್ವತ್ಥನಾರಾಯಣ ಶಾಸ್ತ್ರಿನೆರವೇರಿಸಲಿದ್ದಾರೆ.

ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಆದಿಚುಂಚನಗಿರಿ ಮಠಾಧ್ಯಕ್ಷ ಡಾ.ನಿರ್ಮಲಾನಂದನಾಥ ಸ್ವಾಮೀಜಿ, ಪಟ್ಟನಾಯಕನಹಳ್ಳಿ ಸ್ಫಟಿಕಪುರಿ ಗುರುಗುಂಡ ಬ್ರಹ್ಮೇಶ್ವರ ಮಠದ ಡಾ.ನಂಜಾವದೂತ ಸ್ವಾಮೀಜಿ , ವಿಜಯನಗರ ಆದಿ ಚುಂಚನಗಿರಿ ಮಠದ ಸೌಮ್ಯನಾಥ ಸ್ವಾಮೀಜಿ, ಎಲೆರಾಂಪುರ ಮಠದ ಡಾ.ಹನುಮಂತ ಸ್ವಾಮೀಜಿ ವಹಿಸಲಿದ್ದಾರೆ.

ಶಾಸಕ ಎಚ್.ಸಿ. ಬಾಲಕೃಷ್ಣ ಅಧ್ಯಕ್ಷತೆ ವಹಿಸಲಿದ್ದಾರೆ, ಮುಖ್ಯ ಅತಿಥಿಗಳಾಗಿ ಎಂಎಲ್ಸಿ ಪುಟ್ಟಣ್ಣ, ಚಿದಾನಂದ್ ಎಂ.ಗೌಡ,ರಾಮೀಜಿ ಗೌಡ, ಮಾಜಿ ಎಂಎಲ್ಸಿ ಅಶ್ವತ್ಥ ನಾರಾಯಣ್, ಕೆಂಪೇಗೌಡ ಆಸ್ಪತ್ರೆ ಅಧ್ಯಕ್ಷ ಎಚ್.ಎನ್.ಅಶೋಕ್,ಕೆಪಿಸಿಸಿ ವಕ್ತಾರ ಮುರುಳಿಧರ್ ಹಾಲಪ್ಪ, ಜೆಪಿ.ಚಂದ್ರೇಗೌಡ, ಜಿ.ಪಂ. ಮಾಜಿ ಸದಸ್ಯ ವಿಜಯ್ ಕುಮಾರು ಸೇರಿದಂತೆ ಹಲವರು ಗಣ್ಯರು, ಸಂಘ,ಸಂಸ್ಥೆಗಳ ಮುಖಂಡರು ಭಾಗವಹಿಸಲಿದ್ದಾರೆ ಎಂದರು.

# ಶೈಕ್ಷಣಿಕ ಪ್ರಗತಿಗೆ ಉದ್ದಿಮೆದಾರರು ಸಹಕರಿಸಬೇಕಿದೆ

**ಮಾಲೂರು:** ತಾಲ್ಲೂಕಿನಲ್ಲಿರುವ ಉದ್ದಿಮೆಗಳು ಹಾಗೂ ಕೈಗಾರಿಕಾ ಸಂಸ್ಥೆಗಳು ಸಿ.ಎಸ್.ಆರ್ ಅನುದಾನವನ್ನು ಸ್ಥಳೀಯ ಸರ್ಕಾರಿ ಶಾಲಾ ಕಟ್ಟಡಕ್ಕೆ ಬಳಕೆ ಮಾಡುವ ಮೂಲಕ ಹೆಚ್ಚಿನ ರೀತಿಯಲ್ಲಿ ಶೈಕ್ಷಣಿಕ ಪ್ರಗತಿಗೆ ಉದ್ದಿಮೆದಾರರು ಸಹಕರಿಸಬೇಕೆಂದು ಶಾಸಕ ಕೆ ವೈ ನಂಜೇಗೌಡ ಹೇಳಿದ್ದಾರೆ.

ತಾಲ್ಲೂಕಿನ ಮಡಿವಾಳ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಕಾಡದೇನಹಳ್ಳಿ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರು ಘಟಕ, ಮತ್ತು ಹನುಮನಾಯಕನಹಳ್ಳಿ ಗ್ರಾಮದಲ್ಲಿ ನೂತನ ಅಂಗನವಾಡಿ ಕಟ್ಟಡ ಮತ್ತು ಮಡಿವಾಳ ಗ್ರಾಮದಲ್ಲಿ ಡಿಜಿಟಲ್ ಗ್ರಂಥಾಲಯ ಹಾಗೂ ಶಾಲಾ ಕಟ್ಟಡ ಉದ್ಘಾಟನೆ ಹಾಗೂ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಶಾಸಕ ಕೆ ವೈ ನಂಜೇಗೌಡ ಮಾತನಾಡಿದರು,

ಮಾಲೂರು ತಾಲ್ಲೂಕಿನಲ್ಲಿ ಅತಿ ಹೆಚ್ಚು ಕೈಗಾರಿಕಾ ಕಾರ್ಖಾನೆಗಳನ್ನ ಹೊಂದಿಕೊಂಡಿರುವ ಪ್ರದೇಶದವಾಗಿದೆ ಕೈಗಾರಿಕಾಗಳ ಸಿ ಎಸ್ ಆರ್ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಗ್ರಾಮೀಣ ಪ್ರದೇಶದ ಮೂಲ ಭೂತ ಸೌಕರ್ಯಗಳಿಗೆ ಹಾಗೂ ಸರ್ಕಾರಿ ಶಾಲೆಗಳ ಉನ್ನತೀಕರಿಸಲು ಅಧಿಕಾರಿಗಳು ಮುಂದಾಗಬೇಕು ಎಂದು ತಿಳಿಸಿದರು.

ಅಲ್ಲದೇ ತಾಲ್ಲೂಕಿನ ಮಾಸ್ತಿ ಹೋಬಳಿ ಹಾಗೂ ಟೇಕಲ್ ಹೋಬಳಿ ಭಾಗದ ಹಳ್ಳಿಗಳು ತೀರ ಹಿಂದುಳಿದ ಪ್ರದೇಶವಾಗಿದೆ ಸರ್ಕಾರಿ ಶಾಲೆಗಳಿಗೆ ಸರ್ಕಾರದ ಅನುದಾನದ ಜೊತೆಗೆ ಕೈಗಾರಿಕೆಗಳ ಸಿ ಎಸ್ ಆರ್ ಅನುದಾನ ಮತ್ತು ದಾನಿಗಳಿಂದ ಗಡಿ ಭಾಗದ ಹಳ್ಳಿಗಳ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿ ಪಡಿಸಬೇಕು ಎಂದರು.

ಇನ್ನೂ ಗ್ರಾಮೀಣ ಪ್ರದೇಶದ ಜನರಿಗೆ ಒಳ್ಳೆಯ ಆರೋಗ್ಯ ನೀಡುವ ಸಲುವಾಗಿ ತಾಲ್ಲೂಕು ಆಡಳಿತ ತೆಗೆದುಕೊಂಡ



ತೀರ್ಮಾನದಂತೆ ತಾಲ್ಲೂಕಿನ 28 ಗ್ರಾಮ ಪಂಚಾಯ್ತಿಗಳಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲು ನಿರ್ಧರಿಸಲಾಗಿದ್ದು, ಇದುವರೆಗೂ 24 ಗ್ರಾಮ ಪಂಚಾಯ್ತಿಗಳಲ್ಲಿ ಎಂ.ವಿ.ಜೆ ಆಸ್ಪತ್ರೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಆರೋಗ್ಯ ಶಿಬಿರಗಳಲ್ಲಿ 11 ಸಾವಿರಕ್ಕೂ ಹೆಚ್ಚು ಮಂದಿ ಸದುಪಯೋಗ ಪಡಿಸಿಕೊಂಡಿದ್ದಾರೆ. ಅಲ್ಲದೆ ಕೆಲ ರಾಜಕಾರಣಿಗಳು ಪ್ರಚಾರ ಪಡೆದುಕೊಳ್ಳಲು ಮಹನೀಯರ ಹೆಸರಿನಲ್ಲಿ ಆರೋಗ್ಯ ಶಿಬಿರಗಳನ್ನು ಹಮ್ಮಿಕೊಳ್ಳುತ್ತಿದ್ದಾರೆ ಶಾಸಕ ಕೆ ವೈ ವೈ ನಂಜೇಗೌಡ ಲೇವಡಿ ಮಾಡಿದರು,

ಎಂ.ಸಿ.ಹಳ್ಳಿ ಶಾಲೆಗೆ ಶಿಕ್ಷಕರ, ವಿದ್ಯಾರ್ಥಿಗಳ ಬೇಡಿಕೆಗಳಿಗೆ ಶಾಸಕ ನಂಜೇಗೌಡರು ಸ್ಪಂದಿಸಿ ರಂಗಮಂದಿರ ನಿರ್ಮಿಸಿಕೊಡಲಾಗಿವುದು. ಇನ್ನೂಳಿದ 2 ಬೇಡಿಕೆಗಳನ್ನು ಸ್ಥಳಿಯ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ, ಅಧ್ಯಕ್ಷೆಗೆ ಜವಾಬ್ದಾರಿ ವಹಿಸಿದರು.

ಈ ಸಂದರ್ಭದಲ್ಲಿ ಡಾ.ಪ್ರಮೋದ್, ಅಧ್ಯಕ್ಷೆ ಪದ್ಮಸುರೇಶ್, ಸದಸ್ಯರಾದ ಕುಮಾರಿಜಯರಾಮೇಗೌಡ , ಕಾಡದೇನಹಳ್ಳಿ ನವೀನ್, ಡಿಸಿಸಿ ಅಧ್ಯಕ್ಷ ಸಿ.ಲಕ್ಷ್ಮೀನಾರಾಯಣ್, ಪಿಡಿಒ ಎಸ್.ಪಿ.ಕಾಶೀನಾಥ್, ಕಾರ್ಯದರ್ಶಿ ಅಂಬರೀಶ್, ಬಿಲ್ ಕಲೇಕ್ಟರ್ ಲೋಕೇಶ್, ಮುನಿರಾಜು, ಮಾದನಹಟ್ಟಿ ರವಿಕುಮಾರ್, ಚಂದ್ರಶೇಖರ್ ಗೌಡ, ನಾಗರಾಜ್ ರೆಡ್ಡಿ, ಪಿಆರ್.ಡಿ ವಿಶ್ವನಾಥರೆಡ್ಡಿ, ಸಿಡಿಪಿಒ ಬೈರರೆಡ್ಡಿ, ತಾಲ್ಲೂಕು ವೈದ್ಯಾಧಿಕಾರಿ ಡಾ ವಸಂತ್, ಸಿ.ವಿ.ರಾಮನ್, ಸುರೇಶ್, ಶ್ರೀನಿವಾಸ್, ಶಾಲಾ ಮಕ್ಕಳು, ಶಿಕ್ಷಕರು ಸೇರಿದಂತೆ ಹಲವಾರು ಮುಖಂಡರು, ಜನಪ್ರತಿನಿಧಿಗಳು ಹಾಜರಿದ್ದರು.

# ಕಾಮಗಾರಿಗೆ ಗುದ್ದಲಿ ಪೂಜೆ

**ಮುಳಬಾಗಿಲು:** ಮೂರು ಕೋಟಿ ರೂ.ಅನುದಾನದಿಂದ ನಗ್ರೋತ್ಥಾನ ಯೋಜನೆ ಅಡಿಯಲ್ಲಿ ಅಲ್ಪಸಂಖ್ಯಾತರ ಬಡಾವಣೆಗಳಲ್ಲಿ ಸಿಸಿ ರಸ್ತೆ. ಕಾಮಗಾರಿಗೆ ಗುದ್ದಲಿ ಪೂಜೆ ಸಲ್ಲಿಸಿ. ಚಾಲನೆ ನೀಡಿದ ಶಾಸಕ ಸಮೃದ್ಧಿ ಮಂಜುನಾಥ್.

ನಗರದ ಅಲ್ಪಸಂಖ್ಯಾತರ ಬಡಾವಣೆಯಲ್ಲಿ ನಗರೋತ್ಥಾನ ಯೋಜನೆಯಡಿಯಲ್ಲಿ ಮೂರು ಕೋಟಿ ವೆಚ್ಚದ ಅನುದಾನದಿಂದ .ಅಭಿವೃದ್ಧಿ ಮಾಡಲು. ವಿವಿಧ ಕಾಮಗಾರಿಗಳಿಗೆ ಶಾಸಕ ಸಮೃದ್ಧಿ ಮಂಜುನಾಥ್ ಪೂಜೆ ಸಲ್ಲಿಸಿ. ಸುದ್ದಿಗಾರರೊಂದಿಗೆ ಮಾತ ನಾಡಿದ ಅವರು ಮುಳಬಾಗಿಲು ನಗರದ ಎಲ್ಲಾ ಬಡಾವಣೆಗಳಲ್ಲಿ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರದಿಂದ ಬಂದಂತಹ ಅನುದಾನವನ್ನು ಅಲ್ಪಸಂಖ್ಯಾತರ ಬಡಾವಣೆಗಳಲ್ಲಿ ಒಂದಾದ ಸಮೀರ್ ಮೊಹಲ್ಲದಲ್ಲಿ ಸಿಸಿ ರಸ್ತೆ. ಮತ್ತು ಬೇಸಿಗೆ ಕಾಲದಲ್ಲಿ ನೀರಿನ ಕೊರತೆ ಬರಬಾರದೆಂದು ಮುಂಜಾಗ್ರತಾ ಕ್ರಮವಾಗಿ ನಗರದಲ್ಲಿ ಕುಡಿಯುವ ನೀರಿಗಾಗಿ 15 ಕೊಳವೆ ಬಾವಿ ಕೊರೆಸಲು ಅಧಿಕಾರಿಗಳಿಗೆ ಸೂಚಿಸಿರುತ್ತೇನೆ ಮನೆಮನೆಗೂ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ವ್ಯವಸ್ಥೆ ಮಾಡಿದ್ದು. ಸರ್ಕಾರದಿಂದ ಹೆಚ್ಚಿನ ಅನುದಾನ ತಂದು ಮುಳಬಾಗಿಲು ನಗರವನ್ನು ರಾಜ್ಯದಲ್ಲೇ ಮಾದರಿ ಸುಂದರ ಅಭಿವೃದ್ಧಿ ಹೊಂದಿದ ನಗರವನ್ನಾಗಿ ರೂಪಿಸಲು ಪಣ ತೊಟ್ಟಿರುವುದಾಗಿ ತಿಳಿಸಿದರು

ನಗರಸಭೆಯ ಪೌರಾಯುಕ್ತಾರಾದ ವಿ ಶ್ರೀಧರ್. ಅಧ್ಯಕ್ಷರಾದ, ಶಬಾನ ಬೇಗ. ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಮಾನುಲ್ಲಾ. ನಗರಸಭಾ ಸದಸ್ಯರಾದ ಬಿಜೆಪಿ ಪ್ರಸಾದ್. ಮೊಹಮ್ಮದ್ ಜಬಿವುಲ್ಲಾ. ಪದ್ಮಾವತಿ ರಘು, ಅಕ್ಬಲ್. ಶಾಹಿಂ ಪಾಷಾ. ನೌಶಾದ್. ಶಬ್ಬೀರ್. ಅಪ್ಪಿ. ಸೋಮಣ್ಣ. ಸುಬ್ರಮಣಿ. ಮುಸ್ತಫಾ ಪಾಷಾ. ಮುಖಂಡರು, ಅಧಿಕಾರಿ ವರ್ಗದವರು ಹಾಜರಿದ್ದರು.

# ಅಪರಾಧ ಮುಕ್ತ ಸಮಾಜ ನಿರ್ಮಾಣದಲ್ಲಿ ಯುವಜನರ ಪಾತ್ರ ಮಹತ್ತರ

**ದೇವನಹಳ್ಳಿ:** ಅಪರಾಧ ಮುಕ್ತ ಸಮಾಜ ನಿರ್ಮಾಣದಲ್ಲಿ ವಿದ್ಯಾರ್ಥಿಗಳು ಹಾಗೂ ಯುವಜನರ ಪಾತ್ರ ಮಹತ್ತರವಾದದ್ದುಎಂದು ಪೊಲೀಸ್ ವೃತ್ತ ನಿರೀಕ್ಷಕರಾದ ಪ್ರಶಾಂತ್ ನಾಯಕ್ ಹೇಳಿದ್ದಾರೆ.

ವಿಜಯಪುರ ಪಟ್ಟಣದ ಪ್ರಗತಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ವಿಜಯಪುರ ಪ್ರಗತಿ ಪ್ರಥಮ ದರ್ಜೆ ಕಾಲೇಜು, ವಿಜಯಪುರ ಪೊಲೀಸ್ ಠಾಣೆ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಇನ್ನರ್ ವೀಲ್‌ಕ್ಲಬ್ ಆಫ್ ವಿಜಯಪುರ. ಇವರ ಸಹಯೋಗದಲ್ಲಿ ಆಯೋಜಿಸಿದ್ದ 36 ನೇ ರಾಷ್ಟ್ರೀಯರಸ್ತೆ ಸುರಕ್ಷತಾ ಸಪ್ತಾಹ ಕಾರ್ಯಕ್ರಮದಲ್ಲಿಅವರು ಮಾತನಾಡಿದರು.

ಸಮಾಜಯಾವ ದಿಕ್ಕಿನಲ್ಲಿ ಸಾಗುತ್ತಿದೆಎನ್ನುವಕುರಿತುಯುವಜನರಲ್ಲಿಜಾಗ್ರತೆಇರಲಿ, ಸಾಮಾಜಿಕ ಜಾಲತಾಣಗಳ ಬಳಕೆ ಕಡಿಮೆ ಮಾಡಿ, ಇತ್ತಿಚೆಗೆ ಮೊಬೈಲ್ ಬಳಕೆ ದುಬಾರಿಯಾಗುತ್ತಿದೆ. ಓದುವುದರಕಡೆಗೆ ಹೆಚ್ಚು ಗಮನಹರಿಸಬೇಕು. ಶರಣರ ವಚನಗಳನ್ನು ಪಾಲಿಸಬೇಕು. ಇಂಡಿಯನ್ ಪೀನಲ್ ಕೋಡ್ ಬದಲಿಗೆ 2024 ರಲ್ಲಿ ಬದಲಾಗಿರುವ




ಭಾರತೀಯ ನ್ಯಾಯಸಂಹಿತೆಯಕುರಿತು ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು. ಸಾಮಾಜಿಕ ಜಾಲತಾಣಗಳ ಬಳಕೆಯ ಕುರಿತುಎಚ್ಚರಿಕೆಯಾಗಿರಿ, ಬಾಲ್ಯವಿವಾಹಗಳು ನಡೆಯದಂತೆಎಚ್ಚರಿಕೆ ವಹಿಸಿರಿ, ಇತರರಿಗೆ ನೀವು ಅರಿವು ಮೂಡಿಸಬೇಕು. ಬೇರೆ ರಾಜ್ಯಗಳಿಂದ ಬರುವಅಪರಿಚಿತರ ಬಗ್ಗೆ ಎಚ್ಚರವಿರಲಿ, ಅನುಮಾನಾಸ್ಪದವಾಗಿಯಾರಾದರೂಓಡಾಡುವುದುಕಂಡು ಬಂದರೆಅಂತಹವರ ಬಗ್ಗೆ ಎಚ್ಚರಿಕೆಇರಲಿ. ಅಪರಿಚಿತ ಕರೆಗಳು ಬಂದರೆಕೂಡಲೇ 1930 ಹೆಲ್ಪ್ ಲೈನ್ ಸಂಖ್ಯೆಗೆಕರೆ ಮಾಡಿ. ರಸ್ತೆಗಳಲ್ಲಿ ವೀಲಿಂಗ್ ಮಾಡಬೇಡಿ, ಮಾಡುವವರುಕಂಡು ಬಂದರೆ 112 ಗೆ ಕರೆ ಮಾಡಿ, ಮಾಹಿತಿ ನೀಡಿ, ಮಾಹಿತಿ ನೀಡುವವರ ಮಾಹಿತಿ ಬಹಿರಂಗವಾಗುವುದಿಲ್ಲ. ಇಂತಹ ಬೆಳವಣಿಗೆಗಳು ಅಪಘಾತಗಳು ಹಾಗೂ ಅಪರಾಧಗಳನ್ನು ತಡೆಗಟ್ಟಲು ಅನುಕೂಲವಾಗಲಿದೆ ಎಂದರು.

ಸಹಾಯಕ ಪೊಲೀಸ್ ಸಬ್‌ಇನ್ಸ್ಪೆಕ್ಟರ್ ಹೆಚ್.ಎಸ್.ಆಜಾದ್ ಮಾತನಾಡಿ, ರಸ್ತೆಗಳಲ್ಲಿ ವಾಹನಗಳು ಚಾಲನೆ ಮಾಡುವಾಗ ಸುರಕ್ಷತೆ ಮತ್ತು ಜಾಗ್ರತೆಯನ್ನು ಪಾಲಿಸಬೇಕು. ಅಪ್ರಾಪ್ತರು ವಾಹನಗಳು ಚಾಲನೆ ಮಾಡುವುದು ಅಪರಾಧವಾಗುತ್ತದೆ. ಮಕ್ಕಳು ಮಾಡುವಂತಹಅಪರಾಧ ಚಟುವಟಿಕೆಗಳಿಗೆ ಪೋಷಕರು ಜವಾಬ್ದಾರರಾಗುತ್ತಾರೆ. ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ, ಮೊಬೈಲ್ ಗಳಲ್ಲಿ ಆಪ್ ಗಳ ಮೂಲಕ ದಿಕ್ಕು ತಪ್ಪಿಸುವವರ ಸಂಖ್ಯೆ ಹೆಚ್ಚಾಗಿದೆ. ವಾಟ್ಸಪ್‌ಕಾಲ್ ಗಳ ಮೂಲಕ ಪೊಲೀಸರ ವೇಷದಲ್ಲಿ ಕರೆ ಮಾಡಿ ಬೆದರಿಕೆ ಹಾಕುತ್ತಾರೆ. ಡಿಜಿಟಲ್ ಅರೆಸ್ಟ್ ಮಾಡುತ್ತಾರೆ. ಅದಕ್ಕೆ ಹೆದರದೆ ಪೊಲೀಸ್ ಠಾಣೆಗೆ ಬಂದುದೂರು ನೀಡಿ, ಅಂತಹ ನಂಬರ್‌ಗಳನ್ನು ಬ್ಲಾಕ್ ಮಾಡಿಕೊಳ್ಳಿ. ಮಕ್ಕಳು ಕೂಡಾ ಮಾದಕ ವ್ಯಸನಿಗಳಾಗುತ್ತಿದ್ದಾರೆ. ಇದರ ಬಗ್ಗೆ ಎಚ್ಚರವಿರಲಿ. ಅಪಘಾತಗಳು ನಡೆದಾಗ ಸಾರ್ವಜನಿಕರು ನಮಗೂ ಅವರಿಗೆ ಸಂಬಂಧವಿಲ್ಲ ಎನ್ನುವಂತೆ ವರ್ತಿಸುತ್ತಾರೆ. ನೋಡಿಕೊಂಡು ಹೋಗಬೇಡಿ, ತಕ್ಷಣ 112ಗೆ ಪೊಲೀಸರಿಗೆ ಕರೆ ಮಾಡಿ ತಿಳಿಸಿ ಎಂದು ಸಲಹೆ ನೀಡಿದರು.

ಪ್ರಾಂಶುಪಾಲ ಡಾ.ಎನ್.ನಾಗರಾಜ್, ಇನ್ನರ್ ವೀಲ್‌ಕ್ಲಬ್‌ಅಧ್ಯಕ್ಷೆ ಪ್ರೇಮಾನಾಗರಾಜ್, ಆಶಾಶೈಲೇಂದ್ರ, ಬಾರತಿಶಿವಪ್ರಸಾದ್, ವೀಣಾನಟಶೇಖರ್, ಸುಷ್ಮಾ ಅಶೋಕ್, ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾರಿ ಅರ್.ಶೆಟ್ಟಿನಾಯಕ್, ಹಾಜರಿದ್ದರು.

# ವಿಎಸ್‌ಎಸ್‌ಎನ್‌ಗೆ ಅವಿರೋಧ ಆಯ್ಕೆ



**ಮಾಗಡಿ:** ತಾಲೂಕಿನ ಬಾಚೇನಹಟ್ಟಿ ವಿಎಸ್‌ಎಸ್ ಎನ್‌ಗೆ ನೂತನ ಅಧ್ಯಕ್ಷರಾಗಿ ಕಾಂಗ್ರೆಸ್‌ನ ಎ.ಎಂ. ನಾಗರಾಜು, ಉಪಾಧ್ಯಕ್ಷರಾಗಿ ಕಲ್ಲೂರು ಕೆ. ರಂಗನಾಥ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಅಧ್ಯಕ್ಷ ಸ್ಥಾನದ ಜಯರಾಮಯ್ಯ, ಉಪಾಧ್ಯಕ್ಷ ಸ್ಥಾನದ ಮಂಗಮ್ಮ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಶುಕ್ರವಾರ ನಡೆದ ಚುನಾವಣೆಗೆ ಅಧ್ಯಕ್ಷ ಸ್ಥಾನಕ್ಕೆ ಎ.ಎಂ.ನಾಗರಾಜು, ಉಪಾಧ್ಯಕ್ಷ ಸ್ಥಾನಕ್ಕೆ ಕಲ್ಲೂರು ಕೆ.ರಂಗನಾಥ್ ಒರತು ಪಡಿಸಿ, ಯಾರು ನಾಮಪತ್ರ ಸಲ್ಲಿಸದ ಕಾರಣ. ಈ ಎರಡು ನಾಮಪತ್ರಗಳು ಸಿಂಧುಗೊಂಡ ಕಾರಣ ಅಧ್ಯಕ್ಷರಾಗಿ ಎ.ಎಂ. ನಾಗರಾಜು, ಉಪಾಧ್ಯಕ್ಷರಾಗಿ ಕಲ್ಲೂರು ಕೆ. ರಂಗನಾಥ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ವೆಂಕಟೇಶ್ ಘೋಷಿಸಿದರು. ಈ ವೇಳೆ ರೈತರು, ಸದಸ್ಯರು, ಮುಖಂಡರು ಪಟಾಕಿ ಸಿಡಿಸಿ ಸಿಹಿ ಹಂಚುವ ಮೂಲಕ ಸಂಭ್ರಮಾಚರಣೆ ನಡೆಸಿದರು.

ಅಧ್ಯಕ್ಷ ಎ.ಎಂ.ನಾಗರಾಜು ಮಾತನಾಡಿ, ಸಹಕಾರಿ ಸಂಘಗಳ ಅಭಿವೃದ್ಧಿಯಿಂದ ದೇಶದ ಪ್ರಗತಿ ಸಾಧ್ಯ. ಸಹಕಾರಿ ಸಂಘಗಳು ರೈತರಿಗೆ ವರದಾನವಾಗಿವೆ. ಸಂಘದಿಂದ ಬೆಳೆಸಾಲ, ಚಿನ್ನಾಭರಣ ಸಾಲ, ಹೈನುಗಾರಿಕೆ, ಕುರಿ,ಕೋಳಿ ಸಾಕಾಣಿಕೆಗೆ ಕಡಿಮೆ ದರದಲ್ಲಿ ಸಾಲ ಸೌಲಭ್ಯ ನೀಡುತ್ತಿರುವುದರಿಂದ ರೈತರು ಸ್ವಾವಲಂಭಿ ಜೀವನ ನಡೆಸುತ್ತಿದ್ದಾರೆ. ಸಾಮಾನ್ಯ ಕಾರ್ಯಕರ್ತನನ್ನು ಅಧ್ಯಕ್ಷನನ್ನಾಗಿ ಮಾಡಿದ ಶಾಸಕ ಎಚ್.ಸಿ.ಬಾಲಕೃಷ್ಣ, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಎಚ್.ಎನ್.ಆಶೋಕ್ ಹಾಗೂ ಎಲ್ಲಾ ನಿರ್ದೇಶಕರುಗಳಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಉಪಾಧ್ಯಕ್ಷ ಕೆ.ರಂಗನಾಥ್ ಮಾತನಾಡಿ, ವಿಎಸ್‌ಎಸ್‌ಎನ್ ಕಟ್ಟಡ ಹಳೆಯ ಕಟ್ಟಡವಾಗಿದ್ದು ಶಾಸಕ ಎಚ್.ಸಿ.ಬಾಲಕೃಷ್ಣ, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಎಚ್.ಎನ್.ಆಶೋಕ್ ಸಹಕಾರದಿಂದ ನವಾರ್ಡ್‌ನಿಂದ 1,50 ಕೋಟಿರೂ ಸಾಲ ಪಡೆದು ಸುಂದರವಾದ ನೂತನ 3 ಅಂತಸ್ಥಿನ ಕಟ್ಟಡ ನಿರ್ಮಿಸಲು ಈಗಾಗಲೇ 24 ಲಕ್ಷರೂ ವೆಚ್ಚದಲ್ಲಿ 3 ಗುಂಟೆ ಜಾಗವನ್ನು ಖರೀದಿಸಲಾಗಿದೆ, ಮೊದಲ ಅಂತಸ್ಥಿನಲ್ಲಿ ಜನತಾ ಬಜಾರು, 2 ಅಂತಸ್ಥಿನಲ್ಲಿ ಸುಂದರ ಕಚೇರಿ, 3ನೇ ಅಂತಸ್ಥಿನಲ್ಲಿ ಸಭಾಂಗಣ ನಿರ್ಮಿಸಲಾಗುವುದು. ಕಟ್ಟಡ ನಿರ್ಮಾಣಕ್ಕೆ ಶೀಘ್ರವೇ ಗುದ್ದಲಿಪೂಜೆ ನೆರವೇರಿಸಲಾಗುವುದು. ಸಂಘದಿಂದ ಬೆಳೆಸಾಲ, ಚಿನ್ನಾಭರಣ ಸಾಲವಾಗಿ 7,50 ಕೋಟಿ ಸಾಲವಿತರಿಸಲಾಗಿದೆ. ಸಂಘ ಉತ್ತಮವಾಗಿ ನಡೆಯುತ್ತಿದ್ದು ಜಿಲ್ಲೆಗೆ ಮಾದರಿಯಾಗಿಸಲು ಶ್ರಮಿಸುವುದಾಗಿ ತಿಳಿಸಿದರು. ನಿರ್ದೇಶಕರಾದ ಜಯರಾಮಯ್ಯ, ಮಂಗಮ್ಮ,ಎಸ್. ಮಂಜುನಾಥ್,ಶಿವಣ್ಣ, ಬಿ.ಹೆಚ್.ಆಶೋಕ್, ರತ್ನಮ್ಮ, ರಾಮಯ್ಯ, ನರಸಿಂಹಯ್ಯ, ರಾಮಾನಾಯ್ಕ, ಕಾರ್ಯದರ್ಶಿ ನಾಗೇಶ್, ಮುಖಂಡರಾದ ಮುದ್ದಹನುಮೇಗೌಡ, ಗ್ರಾ.ಪಂ. ಮಾಜಿ ಅಧ್ಯಕ್ಷ ಪ್ರಕಾಶ್, ಬಾಳೇಗೌಡ ಇತರರು ಇದ್ದರು.

# ಮುಖಂಡರುಗಳು ಗೈರು ವಿಫಲವಾದ ಪುರಸಭೆ ಆಯ–ವ್ಯಯ ಸಭೆ





ಕೆ.ಆರ್.ಪೇಟೆ: ಅಭಿವೃದ್ಧಿ ಕೆಲಸಕಾರ್ಯಗಳನ್ನು ಮಾಡದೇ ಕೇವಲ ಸಭೆ ಮಾಡುವುದರಿಂದ ಯಾವುದೇ ಪ್ರಯೋಜನ ಇಲ್ಲ ಎಂದು ಪುರಸಭಾ ಆಯ–ವ್ಯಯ ಸಭೆಗೆ ಹಾಲಿ ಪುರಸಭಾ ಸದಸ್ಯರು ಹಾಗೂ ಮುಖಂಡರುಗಳು ಗೈರಾಗಿದ್ದರಿಂದ ಸಭೆಯು ಬಹುತೇಕ ವಿಫಲವಾಗಿದೆ.

ಪುರಸಭಾ ಅಧ್ಯಕ್ಷೆ ಪಂಕಜಾಪ್ರಕಾಶ್ ಅವರ ಅಧ್ಯೆಕ್ಷತೆಯಲ್ಲಿ ನಡೆದ ಸಭೆಯು ವಿಫಲವಾಗಿದ್ದು, ಕಳೆದ ಐದು ವರ್ಷಗಳಿಂದ ಆಯವ್ಯಯ ಸಭೆಯಲ್ಲಿ ಮಂಡಿಸಲಾಗಿದ್ದ ಯಾವುದೇ ಅಭಿವೃದ್ಧಿ ಕೆಲಸಗಳಾಗದೆ ಇರುವುದರಿಂದ ಹಾಗೂ ಕಳೆದ ಸಾಲಿನ ಆಯವ್ಯಯ ಸಭೆಯಲ್ಲಿ ಮಂಡಿಸಿದ್ದಂತ ಒಂದೂ ಕೆಲಸವನ್ನು ಪುರೆಸಭೆಯವರು ನಿರ್ವಹಣೆ ಮಾಡದೆ ಇರುವುದರಿಂದ ಬೆಸತ್ತ ಜನ ಪ್ರತಿನಿಧಿಗಳು ಮತ್ತು ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಭೆಗೆ ಗೈರು ಹಾಜರಾಗಿದ್ದರೆ, ಸಭೆಯಲ್ಲಿ ಯಾವುದೆ ಹೊಸ ವಿಷಯಗಳನ್ನು ಮಂಡಿಸದೇ ಹಳೆಯ ಮನವಿಗಳನ್ನು ಮುಂದಿನ ಸಾಲಿನಲ್ಲಿ ಬಗೆಹರಿಸಿದರೆ ಸಾಕು ಎಂದು ಸಭೆಯಲ್ಲಿ ಹಾಜರಿದ್ದ ಬೆರಳೆಣಿಕೆಯಷ್ಟು ಜನಪ್ರತಿನಿಧಿಗಳು ಮತ್ತು ಸಂಘಸಂಸ್ಥೆಗಳ ಪದಾಧಿಕಾರಿಗಳು ಮನವಿ ಮಾಡುವ ಮೂಲಕ ಪುರಸಭೆಯಲ್ಲಿ ಯಾವುದೇ ಕೆಲಸ ಕಾರ್ಯಗಳು ಆಗುತ್ತಿಲ್ಲಾ ಎಂದು ಆಡಳಿತ ಪಕ್ಷದ ಹಾಲಿ ಸದಸ್ಯರೆ ಬೇಸರ ವ್ಯಕ್ತಪಡಿಸಿದ ಪ್ರಸಂಗ ಇಂದು ನಡೆದ ಸಭೆಯಲ್ಲಿ ನಡೆಯಿತು.

ಸ್ಥಾಯಿ ಸಮಿತಿ ಅಧ್ಯಕ್ಷ ಕೆ.ರವೀಂದ್ರಬಾಬು ಅವರು ಸಭೆಯನ್ನು ಆರಂಬಿಸುವ ಮಾತನಾಡುತ್ತಿದ್ದಂತೆ ಹಿರಿಯ ಸದಸ್ಯ ಕೆ.ಸಿ.ಮಂಜುನಾಥ ಸ್ವಾಮಿ ಹೊಸ ಆಯ ವ್ಯಯದ ಬಗ್ಗೆ ಸಭೆ ಮಾಡುವ ಮೊದಲು ಈ ಹಿಂದಿನ ವರ್ಷದಲ್ಲಿ ನಾವು ಕೋರಿಕೊಂಡಿದ್ದ ಶ್ರೀ ಲಕ್ಷೀನಾರಾಯಣಸ್ವಾಮಿ ದೇವಸ್ಥಾದ ಮುಖ್ಯದ್ವಾರ, ರುದ್ರಭೂಮಿ ಅಭಿವೃದ್ಧಿ ಶುದ್ಧ ಕುಡಿಯುವ ನೀರಿನ ಘಟಕ ಸೇರಿದಂತೆ ಇತರೆ ಕೆಲಸಗಳು ಏನಾಗಿವೆ ಎಂದು ಮಾಹಿತಿ ನೀಡಿ ನಂತರ ಸಭೆಯನ್ನು ನಡೆಸಿ ಎಂದು ಹೇಳುತ್ತಿದ್ದಂತೆ ಅವರ ಬೆಂಬಲಕ್ಕೆ ನಿಂತ ಮತ್ತೊಬ್ಬ ಸದಸ್ಯ ಡಿ ಪ್ರೇಮ್‌ಕುಮಾರ್ ನಾನೂ ಕೂಡಾ ಹಳೆಕಿಕ್ಕೇರಿರಸ್ತೆಯ ಎರಡೂ ಪ್ರವೇಶ ಸ್ಥಳಗಳಲ್ಲಿ ಡಾ. ಬಿ.ಆರ್.ಅಂಬೇಡ್ಕರ್ ದ್ವಾರ ನಿರ್ಮಿಸಲು ಕೋರಿದ್ದೆ. ಪಟ್ಟಣ ಪ್ರವೇಶದಲ್ಲಿ ಸ್ವಾಗತ ಕಮಾನ್ ಅಳವಡಿಸಲು ಕೋರಿದ್ದೆವು. ಪಾರ್ಕ್ ಮತ್ತು ಕೆರೆಗಳ ಅಭಿವೃದ್ಧಿಗೆ ಮನವಿಮಾಡಿದ್ದೇವು ಇವುಗಳಲ್ಲಿ ಯಾವುದಾದರು ಕೆಲಸ ಆಗಿದ್ದರೆ ಹೇಳಿ ಎಂದು ಪಟ್ಟು ಹಿಡಿದು ಕುಳಿತಾಗ ಮುಖ್ಯಾಧಿಕಾರಿ ನಟರಾಜ್ ಅವರು ಕಾರಣಾಂತರಗಳಿಂದ ಯಾವುದೇ ಕೆಲಸ ಆಗಿಲ್ಲಾ. ಈಗ ನಿಮ್ಮ ಸಲಹೆ ಸೂಚನೆ ನೀಡಿ ನಾವು ಅದಕ್ಕೆ ಆಧ್ಯತೆ ನೀಡುವೆ ಎಂದಾಗ ಇದಕ್ಕೆ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರು ವಿರೋಧ ವ್ಯಕ್ತ ಪಡಿಸಿ ಈ ಹಿಂದಿನ ಮನವಿಯನ್ನೇ ಪೂರೈಸಿ ಎಂದರು.

ಸದಸ್ಯೆ ಕೆ.ಎಸ್.ಸಂತೋಷ್ ಕುಮಾರ್ ಮಾತನಾಡಿ ಸ್ವಾಮಿ ನಮಗೂ ಬೇರೆ ಬೇರೆ ಕೆಲಸ ಇರುತ್ತದೆ ಅದರ ನಡುವೆ ಜನರಿಗೆ ಏನಾದರೂ ಸೇವೆ ಮಾಡೋಣ ಅಂತಾ ಈ ಸಭೆಗೆ ಬಂದಿದ್ದೇವೆ. ಆದರೆ ನೀವು ನಮ್ಮ ಮನವಿಗೆ ನ್ಯಾಯ ಕೊಡಿಸದೆ ಕೇವಲ ಕಾಫಿ ಕುಡಿಸಿ ಕಳುಹಿಸುವುದಾದರೆ ಇಂತಹ ಸಭೆಗಳನ್ನು ದಯಮಾಡಿ ಮಾಡಬೇಡಿ. ಈಗಾಗಲೆ ವಾರಕ್ಕೆ ಎರಡು ರಜೆಪಡೆ ದುಕೊಂಡು ಜನರ ಕೆಲಸ ಮಾಡಿದ ಅಧಿಕಾರಿಗಳು ಇಂತಹ ಸಭೆಯ ನೆಪಮಾಡಿಕೊಂಡು ಕಾಲಹರಣ ಮಾಡದೇ ಜನರ ಕೆಲಸವನ್ನಾದರೂ ಕಚೇರಿಯಲ್ಲಿಕುಳಿತು ಮಾಡಿ ಎಂದು ಬೇಸರ ವ್ಯಕ್ತಪಡಿಸಿದರು. ಸಭೆಯಲ್ಲಿ ಉಪಾಧ್ಯಕ್ಷೆ ಸೌಭಾಗ್ಯಉಮೇಶ್, ಸದಸ್ಯರಾದ ಪ್ರವೀಣ್‌ಕುಮಾರ್, ತಿಮ್ಮೇಗೌಡ, ವ್ಯವಸ್ಥಾಪಕಿ ಕಾಂಚನಾ, ಆರೋಗ್ಯ ನಿರೀಕ್ಷಕ ಅಶೋಕ್, ಕಂದಾಯ ಅಧಿಕಾರಿ ರವಿ, ಲೆಕ್ಕಾಧಿಕಾರಿ ಸುನೀಲ್, ಮುಖಂಡರಾದ ವಿಶ್ವಾನಾಥ್, ಮಂಜುನಾಥ್, ಮತ್ತಿತರರು ಹಾಜರಿದ್ದರು. ಅರ್ಧಕ್ಕೂ ಹೆಚ್ಚು ಪುರಸಭಾ ಸದಸ್ಯರು ಎಂಜಿನಿಯರ್ ಬಸವರಾಜ್ ಗೈರುಹಾಜರಿ ಸಭೆಯಲ್ಲಿ ಕಂಡುಬಂದಿತು.



**ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಸಹಕಾರ ಸಹಯೋಗದೊಂದಿಗೆ ತಿರುಮಲ ತಿರುಪತಿ ದೇವಸ್ಥಾನದ ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಆರ್.ಕೆ. ವಾದೀಂದ್ರಾಚಾರ್ ಹಾಗೂ ಟಿಟಿಡಿ ಹೆಚ್.ಡಿ.ಪಿ.ಪಿ ಸಂಚಾಲಕರಾದ ಡಾ.ಪಿ.ಭುಜಂಗರಾವ್ ಅವರ ನೇತೃತ್ವದಲ್ಲಿ ವಿವಿಧ ಭಜನಾ ಮಂಡಳಿಗಳಿಂದ ಶ್ರೀಹರಿ ಭಜನೆ, ಹರಿನಾಮ ಸಂಕೀರ್ತನೆ ಕಾರ್ಯಕ್ರಮಗಳು ಜರುಗಿತು.**

# ಸಹಕಾರಿ ಸಂಘದ 12 ಮಂದಿ ಅವಿರೋಧ ಆಯ್ಕೆ

**ದೇವನಹಳ್ಳಿ:** ವಿಜಯಪುರ ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ 5 ವರ್ಷಗಳ ಆಡಳಿತಾವಧಿಗೆ ನಿರ್ದೇಶಕರ ಸ್ಥಾನಗಳಿಗೆ ನಿಗದಿಯಾಗಿದ್ದ ಚುನಾವಣೆಯಲ್ಲಿ 12 ಮಂದಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ವಿ.ಶಿವಕುಮಾರ್. ಅವರುಘೋಷಣೆ ಮಾಡಿದರು.

ಸಾಲಗಾರರಕ್ಷೇತ್ರ ಸಾಮಾನ್ಯ: ಆರ್. ಮುನಿರಾಜು, ಟಿ.ನಾಗರಾಜ್, ಎಂ.ವೀರಣ್ಣ, ಪಿ.ಎಂ.ಚಂದ್ರು, ಎಸ್.ಶಿವಾನಂದ, ಸಾಲಗಾರರ ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರ: ಜಿ.ನರಸಿಂಹಯ್ಯ, ಸಾಲಗಾರರ ಪರಿಶಿಷ್ಟ ಪಂಗಡ ಮೀಸಲು: ಎನ್.ತಿಮ್ಮರಾಜು, ಸಾಲಗಾರರಕ್ಷೇತ್ರದ ಹಿಂದುಳಿದ ವರ್ಗ ಪ್ರವರ್ಗ ಎ ಮೀಸಲು: ಕೆ.ನಾಗರಾಜ್, ಸಾಲಗಾರರಕ್ಷೇತ್ರದ ಹಿಂದುಳಿದ ವರ್ಗ ಪ್ರವರ್ಗ ಬಿ ಮೀಸಲು: ಎಂ.ಮುನೇಗೌಡ, ಸಾಲಗಾರರಕ್ಷೇತ್ರ ಮಹಿಳಾ ಮೀಸಲು: ಪುಷ್ಪಮ್ಮ, ಜಿ.ನಾಗರತ್ನಮ್ಮ, ಸಾಲಗಾರರಲ್ಲದಕ್ಷೇತ್ರ ವಿಜಯರಾಣಿ.ಆರ್, ಇವರುಅವಿರೋಧವಾಗಿಆಯ್ಕೆಯಾಗಿದ್ದಾರೆ.

ಪಟ್ಟಣದ ಪ್ರವಾಸಿಮಂದಿರದಲ್ಲಿ ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಮುಖಂಡರೆಲ್ಲರೂ ಸಭೆ ನಡೆಸಿ, ಸಹಕಾರಿ ಸಂಘದಲ್ಲಿ ಪಕ್ಷಕ್ಕೆ ಮಾನ್ಯತೆ ನೀಡದೆ, ಎಲ್ಲಾ ಕ್ಷೇತ್ರಗಳಿಗೂ ಅವಿರೋಧವಾಗಿಆಯ್ಕೆ ಮಾಡಲು ತೀರ್ಮಾನಿಸಿದ್ದರಿಂದ ನಾಮಪತ್ರಗಳು ಸಲ್ಲಿಸಿದ್ದವರ ಪೈಕಿ 12 ಮಂದಿ ಹೊರತುಪಡಿಸಿ, ಉಳಿದವರು ವಾಪಸ್ಸು ಪಡೆದುಕೊಂಡಿದ್ದರಿಂದಅವಿರೋಧವಾಗಿಆಯ್ಕೆಯಾಗಿದ್ದಾರೆಎಂದುಘೋಷಣೆ ಮಾಡಿದರು.

ಕೆಪಿಸಿಸಿ ಸದಸ್ಯಎ.ಚಿನ್ನಪ್ಪ ಮಾತನಾಡಿ, ಸಹಕಾರಿ ಸಂಘಗಳಲ್ಲಿ ರಾಜಕೀಯಕ್ಕೆ ಅವಕಾಶ ನೀಡದೆ, ಸರ್ಕಾರದಿಂದ ಸಿಗುವಂತಹ ಸೌಲಭ್ಯಗಳನ್ನು ರೈತರಿಗೆ ತಲುಪಿಸಿ, ಅವರನ್ನುಆರ್ಥಿಕವಾಗಿ ಸಬಲರನ್ನಾಗಿ ಮಾಡುವಕಡೆಗೆ ನಾವೆಲ್ಲರೂ ಚಿಂತನೆನಡೆಸಬೇಕು.ನಿರ್ದೇಶಕರಾಗಿಆಯ್ಕೆಯಾಗಿರುವವರೂ ಸಹಾ ರೈತರ ಹಿತಕ್ಕಾಗಿ ಕೆಲಸ ಮಾಡಿ, ಸಂಘವನ್ನುಅಭಿವೃದ್ಧಿಯತ್ತಕೆ ೊಂಡೊಯ್ಯಬೇಕುಎಂದರು.

ಸಂಘದಮುಖ್ಯಕಾರ್ಯನಿರ್ವಾಹಕಅಧಿಕಾರಿ ಶ್ಯಾಂಸುಂದರ್, ಬಿಜೆಪಿ ಮುಖಂಡ ಬಿ.ಚೇತನ್‌ಗೌಡ, ನಾರಾಯಣಸ್ವಾಮಿ, ಗೊಡ್ಲುಮುದ್ದೇನಹಳ್ಳಿ ಗ್ರಾಮ ಪಂಚಾಯಿತಿಅಧ್ಯಕ್ಷ ಮುರಳೀಧರ್, ಮಾಜಿಅಧ್ಯಕ್ಷಎಂ.ಜಗದೀಶ್, ಕಾಂಗ್ರೆಸ್ ಹೋಬಳಿ ಅಧ್ಯಕ್ಷ ವೀರೇಗೌಡ, ಪುರಸಭಾ ಮಾಜಿ ಸದಸ್ಯರಾದಆರ್.ಮುನಿರಾಜು, ಎಂ.ವೀರಣ್ಣ, ಮುಖಂಡರಾದ ಹೊಸಹಳ್ಳಿ ಮುನೇಗೌಡ, ಪುರಕೃಷ್ಣಪ್ಪ, ವಿರೂಪಾಕ್ಷಪ್ಪ, ಕೊಮ್ಮಸಂದ್ರಗ್ರಾಮ ಪಂಚಾಯಿತಿ ಸದಸ್ಯ ಸುರೇಶ್, ಸೀನಪ್ಪ, ಸೊಣ್ಣೇಗೌಡ, ಎಸ್.ಶಿವಾನಂದ, ಮುಂತಾದವರು ಹಾಜರಿದ್ದರು.

# ವ್ಯವಸಾಯ ಸೇವಾ ಸಹಕಾರ ಬ್ಯಾಂಕ್ ಅಧ್ಯಕ್ಷರ ಆಯ್ಕೆ

**ಚೇಳೂರು:** ಚೇಳೂರು ತಾಲೂಕಿನ ಸೋಮನಾಥಪುರ ವ್ಯವಸಾಯ ಸೇವಾ ಸಹಕಾರ ಬ್ಯಾಂಕ್ ಅಧ್ಯಕ್ಷರ ಉಪಾದ್ಯಕ್ಷರ ಚುನಾವಣೆ ನಡೆದು ಅದ್ಯಕ್ಷರಾಗಿ ಮರಿ ಮಾಕಲಪಲ್ಲಿ ಪಿ.ಮುತ್ತಿರೆಡ್ಡಿ ಉಪಾದ್ಯಕ್ಷರಾಗಿ ಬೂದಿಲಪಲ್ಲಿ ಚಂದ್ರಶೇಖರರೆಡ್ಡಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಚುನಾವಣೆ ನೇತೃತ್ವವನ್ನು ಆಡಳಿತ ಮಂಡಳಿಯ ನಿರ್ದೇಶಕ ಮಂಡ್ಯಂಪಲ್ಲಿ ಮಂಜುನಾಥರೆಡ್ಡಿ ವಹಿಸಿಕೊಂಡಿದ್ದರು.

ಚೇಳೂರು ತಾಲೂಕಿನ ಸೋಮನಾಥಪುರ ವ್ಯವಸಾಯ ಸೇವಾ ಸಹಕಾರ ಬ್ಯಾಂಕ್ ಚುನಾವಣೆ ಐದು ವರ್ಷಗಳಗೊಮ್ಮೆ ನಡೆಯುತ್ತಿತ್ತು ಬ್ಯಾಂಕ್ ಅಭಿವೃದ್ದಿಯ ಹಿತ ದೃಷ್ಠಿಯಿಂದ ಹಣ ಪೋಲು ಮಾಡದೇ ಚುನಾವಣೆ ನಡೆಸದೇ ಎಲ್ಲಾ ಶೇವಣಿದಾರರ ರೈತರ. ಮನವೊಲಿಸಿ ಅವಿರೋಧವಾಗಿ ಆಯ್ಕೆ ಮಾಡಿಕೊಂಡು ಬರುತ್ತಿದ್ದರು. ಆದರೆ ರಾಜಕೀಯ ಲಾಭಕ್ಕಾಗಿ ಚುನಾವಣೆ



ನಡೆಸಿದರೂ ವಿರೋಧ ಬಣದವರ ಫಲ ನೀಡದಂತೆ ಆಯಿತು.

ಆಡಳಿತ ಮಂಡಳಿಯ ನಿರ್ದೇಶಕರಾಗಿ ಗೌನೋರುಪಲ್ಲಿ ಬಯ್ಯಾರೆಡ್ಡಿ. ಬಯಾರೆಡ್ಡಿ. ಬಿ.ವೆಂಕಟರವಣಪ್ಪ. ಎಂ. ಎಸ್. ವೆಂಕಟಶೇಷಾರೆಡ್ಡಿ. ರೆಡ್ಡಮ್ಮ. ವೆಂಕಟರವಣಮ್ಮ. ರಾಚವಾರಪಲ್ಲಿ ಆರ್.ವಿ. ವೆಂಕಟೇಶ್ ಗಂಗಪ್ಪ. ಅಜಾದ್‌ಬೇಗ್. ಆಯ್ಕೆಯಾಗಿದ್ದಾರೆ.

ಸಮಾರಂಭದಲ್ಲಿ ಗ್ರಾ.ಪಂ. ಹಿರಿಯ ಮುಖಂಡರಾದ ಬೂದಿಲಪಲ್ಲಿ ಬಿ.ವಿ.ಪಾಪಿರೆಡ್ಡಿ. ಜಿ.ಮುತ್ತಿರೆಡ್ಡಿ. ಟಿ.ಸಿ. ವೆಂಕಟರವಣಪ್ಪ. ಚಿನ್ನ ವೆಂಕಟರೆಡ್ಡಿ. ಎಂ.ವೈ. ಕೊಂಡಿರೆಡ್ಡಿ. ದೇವರ್ಲಪಲ್ಲಿ ಡಿ.ವಿ.ಕೃಷ್ಣಪ್ಪ. ಬಿ.ಎಂ,ಬಯ್ಯಾರೆಡ್ಡಿ. ಶಿವರಾಮರೆಡ್ಡಿ ಇತರರು ಉಪಸ್ಥಿರಿದ್ದರು.

# ಆಗಸ್ಟ್‌ನಿಂದ ಬಾಂಗ್ಲಾದೇಶದಲ್ಲಿ 23 ಹಿಂದೂಗಳ ಸಾವು: 152 ದೇವಾಲಯಗಳ ಮೇಲೆ ದಾಳಿ

**ನವದೆಹಲಿ:** 2024ರ ಆಗಸ್ಟ್‌ನಿಂದ ನೆರೆಯ ಬಾಂಗ್ಲಾದೇಶದಲ್ಲಿ ಒಟ್ಟು 23 ಹಿಂದೂಗಳ ಸಾವಾಗಿದೆ ಮತ್ತು 152 ಹಿಂದೂ ದೇವಾಲಯಗಳ ಮೇಲಿನ ದಾಳಿ ಆಗಿದೆ ಎಂದು ವರದಿಗಳು ಉಲ್ಲೇಖಿಸಿವೆ ಎಂದು ಸಂಸತ್‌ಗೆ ಕೇಂದ್ರ ಸರ್ಕಾರ ಶುಕ್ರವಾರ ತಿಳಿಸಿದೆ.

ನಿನ್ನೆಯ ಲೋಕಸಭೆಯಲ್ಲಿ ಬಾಂಗ್ಲಾದೇಶದಲ್ಲಿ ಕಳೆದ 2 ತಿಂಗಳಲ್ಲಿ ಹಿಂದೂ ದೇವಾಲಯಗಳ ಮೇಲಿನ ದಾಳಿ ಮತ್ತು ಘಟನೆಯಲ್ಲಿ ಗಾಯಗೊಂಡ, ಸತ್ತ ಹಿಂದೂಗಳ ಸಂಖ್ಯೆ, ಅವರಿಗೆ ಉಂಟಾಗಿರುವ ಕಿರುಕುಳದ ಪ್ರಕರಣಗಳ ವಿವರಗಳ ಬಗ್ಗೆ ಸರ್ಕಾರವನ್ನು ಕೇಳಲಾಯಿತು.

ಈ ಪ್ರಶ್ನೆಗೆ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಅವರು ಲಿಖಿತ ಪ್ರತಿಕ್ರಿಯೆಯಲ್ಲಿ ಉತ್ತರಿಸಿದರು. "ಕಳೆದ ಎರಡು ತಿಂಗಳ ಅವಧಿಯಲ್ಲಿ (ನವೆಂಬರ್ 26, 2024 ರಿಂದ ಜನವರಿ 25, 2025 ರವರೆಗೆ) ಬಾಂಗ್ಲಾದೇಶದಲ್ಲಿ ಹಿಂದೂಗಳ ವಿರುದ್ಧ 76 ದಾಳಿ ಘಟನೆಗಳು ವರದಿಯಾಗಿವೆ. ಆಗಸ್ಟ್‌ನಿಂದ 23 ಹಿಂದೂಗಳು ಮೃತಪಟ್ಟಿದ್ದಾರೆ ಮತ್ತು ಹಿಂದೂ ದೇವಾಲಯಗಳ ಮೇಲೆ 152 ದಾಳಿಯ ಘಟನೆಗಳಾಗಿವೆ. ಬಾಂಗ್ಲಾದೇಶದಲ್ಲಿ ಹಿಂದೂಗಳು ಮತ್ತು ಇತರ ಅಲ್ಪಸಂಖ್ಯಾತರ ವಿರುದ್ಧದ ಹಿಂಸಾಚಾರದ ಘಟನೆಗಳನ್ನು ಭಾರತ ಸರ್ಕಾರ ಗಮನಿಸಿದೆ. ಹಾಗೇ ಬಾಂಗ್ಲಾದೇಶದ ಸರ್ಕಾರದೊಂದಿಗೆ ತನ್ನ ಕಳವಳವನ್ನು ಹಂಚಿಕೊಂಡಿದೆ" ಎಂದು ಸದನಕ್ಕೆ ವಿವರಿಸಿದರು.




"2024ರ ಡಿಸೆಂಬರ್ 9ರಂದು ನಮ್ಮ ವಿದೇಶಾಂಗ ಕಾರ್ಯದರ್ಶಿ ಬಾಂಗ್ಲಾದೇಶಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಹಿಂದೂಗಳು ಮತ್ತು ಇತರ ಅಲ್ಪಸಂಖ್ಯಾತರ ರಕ್ಷಣೆಗೆ ಸಂಬಂಧಿಸಿದಂತೆ ಭಾರತದ ನಿರ್ಧಾರಗಳನ್ನು ಪುನರುಚ್ಚರಿಸಲಾಗಿದೆ. ಡಿಸೆಂಬರ್ 10ರಂದು ಬಾಂಗ್ಲಾದೇಶದ ಸರ್ಕಾರವು ಪತ್ರಿಕಾಗೋಷ್ಠಿಯಲ್ಲಿ ಅಲ್ಲಿನ ಅಲ್ಪಸಂಖ್ಯಾತರ ವಿರುದ್ಧದ ದಾಳಿಗಳಿಗೆ ಸಂಬಂಧಿಸಿದ ಒಟ್ಟು 88 ಪ್ರಕರಣಗಳಲ್ಲಿ 70 ಜನರನ್ನು ಬಂಧಿಸಲಾಗಿದೆ ಎಂದು ಘೋಷಿಸಿದೆ. ಪೊಲೀಸ್ ತನಿಖೆಗಳು ತರುವಾಯ 1,254 ಘಟನೆಗಳನ್ನು ಪರಿಶೀಲಿಸಿದೆ ಎಂದು ಬಾಂಗ್ಲಾ ಸರ್ಕಾರ ಹೇಳಿದೆ".

"ಅಲ್ಪಸಂಖ್ಯಾತರು ಸೇರಿದಂತೆ ಬಾಂಗ್ಲಾದೇಶದ ಎಲ್ಲಾ ನಾಗರಿಕರ ಜೀವನ ಮತ್ತು ಸ್ವಾತಂತ್ರ್ಯದ ರಕ್ಷಣೆಯ ಪ್ರಾಥಮಿಕ ಜವಾಬ್ದಾರಿಯು ಬಾಂಗ್ಲಾದೇಶದ ಸರ್ಕಾರದ್ದಾಗಿದೆ. ಢಾಕಾದಲ್ಲಿರುವ ಭಾರತದ ಹೈಕಮಿಷನ್ ಅಲ್ಪಸಂಖ್ಯಾತರಿಗೆ ಸಂಬಂಧಿಸಿದ ಪರಿಸ್ಥಿತಿಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುವುದನ್ನು ಮುಂದುವರೆಸಿದೆ" ಎಂದು ಸಚಿವ ಕೀರ್ತಿ ವರ್ಧನ್ ಸಿಂಗ್ ಉತ್ತರಿಸಿದ್ದಾರೆ.

ಮುಂದುವರೆದು ಪ್ರತ್ಯೇಕ ಪ್ರಶ್ನೆಗೊಂದು ಸಚಿವರು ಉತ್ತರಿಸಿದರು. ತಮಗೆ ಲಭ್ಯವಿರುವ ಮಾಹಿತಿಯ ಪ್ರಕಾರ, "ರಷ್ಯಾದ ಸಶಸ್ತ್ರ ಪಡೆಗಳಲ್ಲಿ 127 ಭಾರತೀಯ ಪ್ರಜೆಗಳ ಪೈಕಿ 97 ಪ್ರಜೆಗಳ ಸೇವೆಗಳನ್ನು ಸ್ಥಗಿತಗೊಳಿಸಲಾಗಿದೆ. ಮೃತಪಟ್ಟಿರುವ 12 ಭಾರತೀಯರಲ್ಲಿ, ಏಳು ವ್ಯಕ್ತಿಗಳ ಮೃತದೇಹವನ್ನು ಭಾರತ ಸ್ವೀಕರಿಸಿದೆ. ಇನ್ನು ಎರಡು ಸಂದರ್ಭಗಳಲ್ಲಿ, ಆಯಾ ಕುಟುಂಬಗಳ ಇಚ್ಛೆಯಂತೆ ರಷ್ಯಾದಲ್ಲಿ ಅಂತ್ಯಕ್ರಿಯೆ ನಡೆಸಲಾಯಿತು. ಹಾಗೇ ವರದಿಯಾದ ಮೂರು ಸಾವಿನ ಪ್ರಕರಣಗಳ ದೃಢೀಕರಣ ಮತ್ತು ಪರಿಶೀಲನೆಗಾಗಿ ಭಾರತ ಸರ್ಕಾರ ರಷ್ಯಾದ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದೆ" ಎಂದು ಅವರು ಹೇಳಿದ್ದಾರೆ.

# ಅಮೇರಿಕದಲ್ಲಿ ಮತ್ತೊಂದು ವಿಮಾನ ದುರಂತ: 10 ಮಂದಿ ಸಾವು


**ಅಲಾಸ್ಕಾ:** ಪಶ್ಚಿಮ ಅಲಾಸ್ಕಾದಲ್ಲಿ ಸಣ್ಣ ವಿಮಾನವೊಂದು ಪತನಗೊಂಡಿದೆ. ಪ್ರಯಾಣಿಕ ವಿಮಾನದಲ್ಲಿದ್ದ ಎಲ್ಲಾ 10 ಜನರು ಸಾವನ್ನಪ್ಪಿದ್ದಾರೆ ಎಂದು ಅಮೆರಿಕದ ಕೋಸ್ಟ್ ಗಾರ್ಡ್ ಹೇಳಿದೆ.

ಅಲಾಸ್ಕಾದ ಪಶ್ಚಿಮ ಕರಾವಳಿಯಲ್ಲಿ ನಿಯಂತ್ರಣ ಕಳೆದುಕೊಂಡು ನಾಪತ್ತೆಯಾದ ವಿಮಾನ ಪತನವಾಗಿರುವ ಸ್ಥಳವನ್ನು ಅಮೆರಿಕದ ಕೋಸ್ಟ್ ಗಾರ್ಡ್ ಶುಕ್ರವಾರ ಪತ್ತೆ ಹಚ್ಚಿದೆ. ಅಲಾಸ್ಕಾದ ಕೋಸ್ಟ್ ಗಾರ್ಡ್ ಫಿ ಖಾತೆಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ್ದು, ವಿಮಾನವು ನೋಮ್‌ನಿಂದ ಆಗ್ನೇಯಕ್ಕೆ 34 ಮೈಲುಗಳಷ್ಟು ದೂರದಲ್ಲಿ ಕಂಡು ಬಂದಿದೆ ಎಂದು ಹೇಳಿದೆ.

ವಿಮಾನದಲ್ಲಿದ್ದ ಎಲ್ಲರೂ ಮೃತಪಟ್ಟಿದ್ದಾರೆ ಎಂದು ನಂಬಲಾಗಿದೆ ಎಂದು ಕೋಸ್ಟ್ ಗಾರ್ಡ್ ಅಧಿಕಾರಿಗಳು ತಿಳಿಸಿದ್ದಾರೆ. ಕಳಪೆ ಹವಾಮಾನ ಮತ್ತು ಕಡಿಮೆ ಗೋಚರತೆಯಿಂದಾಗಿ ವಿಮಾನ ನಿಯಂತ್ರಣ ಕಳೆದುಕೊಂಡು ಪತನವಾಗಿದೆ. ಅಗ್ನಿಶಾಮಕ ಸಿಬ್ಬಂದಿ ನೋಮ್‌ನಿಂದ ಟಾಪ್‌ಕಾಕ್‌ವರೆಗೆ ತೀವ್ರ ಹುಡುಕಾಟ ನಡೆಸಿತು. ಇನ್ನು ಯುಎಸ್ ಕೋಸ್ಟ್ ಗಾರ್ಡ್ ಫ್ಲೈಟ್ ಸಿಬ್ಬಂದಿ ವಾಯುಪ್ರದೇಶದಲ್ಲಿ ಶೋಧ ಕೈಗೊಂಡಿತ್ತು.

ಅಲಾಸ್ಕಾ ಸಾರ್ವಜನಿಕ ಸುರಕ್ಷತೆ ಇಲಾಖೆಯ ಪ್ರಕಾರ, ಬೆರಿಂಗ್ ಏರ್ ನಿರ್ವಹಿಸುವ ಟರ್ಬೋಪ್ರಾಪ್ ಸೆಸ್ನಾ ಕಾರವಾನ್ ಗುರುವಾರ ಮಧ್ಯಾಹ್ನ ಕಾಣೆಯಾಗಿದೆ ಎಂದು ವರದಿಯಾಗಿತ್ತು.

ಸ್ಥಳೀಯ ಕಾಲಮಾನ ಶುಕ್ರವಾರ ಬೆಳಗ್ಗೆ 9 ಗಂಟೆಗೆ ವಿಮಾನದಲ್ಲಿದ್ದ ಪ್ರತಿಯೊಬ್ಬರ



ಕುಟುಂಬಗಳಿಗೆ ಸೂಚನೆ ನೀಡಲಾಗಿದೆ ಎಂದು ನೋಮ್ ಸ್ವಯಂಸೇವಕ ಅಗ್ನಿಶಾಮಕ ಇಲಾಖೆ ತಿಳಿಸಿದೆ. ಅಲಾಸ್ಕಾ ಸ್ಟೇಟ್ ಟ್ರೂಪರ್ ಲೆಫ್ಟಿನೆಂಟ್ ಬೆನ್ ಎಂಡ್ರೆಸ್ ಅವರು ಮಾತನಾಡಿ, ವಿಮಾನದಲ್ಲಿದ್ದವರೆಲ್ಲ ವಯಸ್ಕರು ಎಂದು ಹೇಳಿದರು

ಜನವರಿ ಅಂತ್ಯದಲ್ಲಿ ಸಂಭವಿಸಿತ್ತು ಭೀಕರ ಅಪಘಾತ: ಪ್ಯಾಸೆಂಜರ್ ಜೆಟ್ ಮತ್ತು ಸೇನಾ ಹೆಲಿಕಾಪ್ಟರ್ ನಡುವೆ ಭೀಕರ ಅಪಘಾತ ಸಂಭವಿಸಿ 67 ಮಂದಿ ಸಾವನ್ನಪ್ಪಿದ್ದರು. ಅಮೆರಿಕನ್ ಏರ್‌ಲೈನ್ಸ್ ವಿಮಾನ ಸಂಖ್ಯೆ 5342 ಮತ್ತು ಬ್ಲಾಕ್ ಹಾವಕ್ ಹೆಲಿಕಾಪ್ಟರ್ ನಡುವೆ ಈ ಡಿಕ್ಕಿ ಸಂಭವಿಸಿತ್ತು.

ಈ ಸಂದರ್ಭದಲ್ಲಿ ಪ್ಯಾಸೆಂಜರ್ ಜೆಟ್‌ನಲ್ಲಿ 67 ಜನರಿದ್ದರು. ಫೆಡರಲ್ ವಿಮಾನ ಆಡಳಿತ (ಎಫ್‌ಎಎ)ದ ವರದಿ ಪ್ರಕಾರ, ಬುಧವಾರ ರಾತ್ರಿ 9ರ ಸುಮಾರಿಗೆ ಅಪಘಾತವಾಗಿತ್ತು . ಪ್ಯಾಸೆಂಜರ್ ಜೆಟ್ ರೊನಾಲ್ಡ್ ರೀಗನ್ ವಾಷಿಂಗ್ಟನ್ ನ್ಯಾಷನಲ್ ಏರ್‌ಪೋರ್ಟ್‌ನ ರನ್‌ವೇ 33ರಲ್ಲಿ ಇಳಿಯುತ್ತಿದ್ದಂತೆ ದುರಂತ ನಡೆದಿತ್ತು.

# ಇರಾನ್ ಎಂದಿಗೂ ಪರಮಾಣು ಶಸ್ತ್ರಾಸ್ತ್ರ ತಯಾರಿಸಲು ಯತ್ನಿಸಿಲ್ಲ

**ಟೆಹ್ರಾನ್:** ತಮ್ಮ ದೇಶ ಎಂದಿಗೂ ಅಣ್ವಸ್ತ್ರಗಳನ್ನು ಅಭಿವೃದ್ಧಿಪಡಿಸಲು ಪ್ರಯತ್ನಿಸಿಲ್ಲ ಎಂದು ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯಾನ್ ಗುರುವಾರ ಹೇಳಿದ್ದಾರೆ.

ಇರಾನ್‌ನ 1979ರ ಇಸ್ಲಾಮಿಕ್ ಕ್ರಾಂತಿಯ ವಿಜಯದ 46ನೇ ವಾರ್ಷಿಕೋತ್ಸವದ ಅಂಗವಾಗಿ ಟೆಹ್ರಾನ್‌ನಲ್ಲಿ ನಡೆದ ಸಮಾರಂಭದಲ್ಲಿ ಅವರು ಈ ಹೇಳಿಕೆ ನೀಡಿದ್ದಾರೆ ಎಂದು ಅಧ್ಯಕ್ಷರ ಕಚೇರಿಯ ಹೇಳಿಕೆ ತಿಳಿಸಿದೆ.

ಇರಾನ್ ರಾಜಧಾನಿಯಲ್ಲಿ ನಡೆದ ಈ ಸಮಾರಂಭದಲ್ಲಿ ವಿದೇಶಿ ರಾಯಭಾರಿಗಳು ಮತ್ತು ಅಂತಾರಾಷ್ಟ್ರೀಯ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

"ನಾವು ಪರಮಾಣು ಶಸ್ತ್ರಾಸ್ತ್ರಗಳನ್ನು ಅಭಿವೃದ್ಧಿಪಡಿಸಲು ಪ್ರಯತ್ನಿಸುವುದಿಲ್ಲ. ಇರಾನ್‌ನ ಸರ್ವೋಚ್ಚ ನಾಯಕ ಅಲಿ ಖಮೇನಿ ಫತ್ವಾ ಹೊರಡಿಸುವ ಮೂಲಕ ಇದನ್ನು ಸ್ಪಷ್ಟವಾಗಿ ಹೇಳಿದ್ದಾರೆ" ಎಂದು ಪೆಜೆಶ್ಕಿಯಾನ್ ಹೇಳಿದರು.

ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಅಭಿವೃದ್ಧಿಪಡಿಸುವ ಉದ್ದೇಶವನ್ನು ಹೊಂದಿಲ್ಲ ಎಂಬುದನ್ನು ಪರಿಶೀಲಿಸುವುದು ತುಂಬಾ ಸುಲಭ. "ಪರಮಾಣು ಪರೀಕ್ಷಕರು



ಅವರು ಬಯಸಿದಾಗಲೆಲ್ಲ ಇಲ್ಲಿಗೆ ಬಂದು ಬಯಸಿದಾಗಲೆಲ್ಲಾ ತನಿಖೆ ಮಾಡಿದ್ದಾರೆ. ಇನ್ನೂ ನೂರು ಬಾರಿ ಬೇಕಾದರೆ ಅವರು ಬಂದು ತನಿಖೆ ಮಾಡಲಿ. ಪರಮಾಣು ಶಸ್ತ್ರಾಸ್ತ್ರಗಳನ್ನು ಅಭಿವೃದ್ಧಿಪಡಿಸುವ ಕೆಲಸಕ್ಕೆ ನಾವು ಎಂದಿಗೂ ಕೈ ಹಾಕಲ್ಲ." ಎಂದು ಅವರು ತಿಳಿಸಿದರು.

ಇರಾನ್ ಪರಮಾಣು ಶಸ್ತ್ರಾಸ್ತ್ರ ತಯಾರಿಸುವುದನ್ನು ತಡೆಯುವ ಉದ್ದೇಶದಿಂದ ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಇರಾನ್ ವಿರುದ್ಧ ಗರಿಷ್ಠ ಒತ್ತಡದ ಅಭಿಯಾನವನ್ನು ಮರುಸ್ಥಾಪಿಸಲು ಕಾರ್ಯನಿರ್ವಾಹಕ ಆದೇಶ ಹೊರಡಿಸಿದ ನಂತರ ಇರಾನ್ ಅಧ್ಯಕ್ಷರ ಈ ಹೇಳಿಕೆಗಳು ಮಹತ್ವ ಪಡೆದುಕೊಂಡಿವೆ.

ಟ್ರಂಪ್ ಅವರ ಆದೇಶದ ಬಗ್ಗೆ ಬುಧವಾರ ರಾತ್ರಿ ಇರಾನ್‌ನ ವಿದೇಶಾಂಗ ಸಚಿವ ಸಯೀದ್ ಅಬ್ಬಾಸ್ ಅರಾಗ್ಚಿ ಸಾಮಾಜಿಕ ಮಾಧ್ಯಮ ಪ್ಲಾಟ್ ಫಾರ್ಮ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, "ಗರಿಷ್ಠ ಒತ್ತಡ ಎಂದು ಕರೆಯಲ್ಪಡುವ ಅಭಿಯಾನವು ವಿಫಲ ಪ್ರಯತ್ನವಾಗಿದೆ" ಎಂದು ಬರೆದಿದ್ದಾರೆ.

ಈ ಪದವನ್ನು ಪುನರಾವರ್ತಿಸುವುದು ಇರಾನ್‌ನಿಂದ ಗರಿಷ್ಠ ಮಟ್ಟದ ಪ್ರತಿರೋಧವನ್ನು ಹುಟ್ಟು ಹಾಕುತ್ತದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ಇರಾನ್ ಜುಲೈ 2015ರಲ್ಲಿ ವಿಶ್ವ ಶಕ್ತಿಗಳೊಂದಿಗೆ ಜಂಟಿ ಸಮಗ್ರ ಕ್ರಿಯಾ ಯೋಜನೆ ಎಂದು ಔಪಚಾರಿಕವಾಗಿ ಕರೆಯಲ್ಪಡುವ ಪರಮಾಣು ಒಪ್ಪಂದಕ್ಕೆ ಸಹಿ ಹಾಕಿತು. ನಿರ್ಬಂಧಗಳನ್ನು ತೆಗೆದುಹಾಕುವುದಕ್ಕೆ ಪ್ರತಿಯಾಗಿ ತನ್ನ ಪರಮಾಣು ಕಾರ್ಯಕ್ರಮದ ಮೇಲೆ ಹೇರಲಾದ ನಿರ್ಬಂಧಗಳನ್ನು ಒಪ್ಪಿಕೊಂಡಿತು. ಆದಾಗ್ಯೂ, ಯುನೈಟೆಡ್ ಸ್ಟೇಟ್ಸ್ ಮೇ 2018ರಲ್ಲಿ ಒಪ್ಪಂದದಿಂದ ಹಿಂದೆ ಸರಿದು ನಿರ್ಬಂಧಗಳನ್ನು ಮರುಸ್ಥಾಪಿಸಿತ್ತು.

# ಸಿಎಂ ರೇಸ್‌ನಲ್ಲಿ ಪರ್ವೇಶ್, ವಿಜೇಂದರ್, ದುಷ್ಯಂತ್

**ನವದೆಹಲಿ:** ದೆಹಲಿ ವಿಧಾನಸಭಾ ಚುನಾವಣೆಯ ಮತ ಎಣಿಕೆ ನಡೆಯುತ್ತಿದ್ದು, ಬಿಜೆಪಿ ಆರಂಭಿಕ ಮುನ್ನಡೆ ಪಡೆದುಕೊಂಡಿದ್ದು, ಎಎಪಿ ನಾಲ್ಕನೇ ಅವಧಿಗೆ ಅಧಿಕಾರಕ್ಕೆ ಬರಲು ಪೈಪೋಟಿ ನೀಡುತ್ತಿದೆ. 27 ವರ್ಷಗಳ ನಂತರ ರಾಷ್ಟ್ರ ರಾಜಧಾನಿಯಲ್ಲಿ ಬಿಜೆಪಿ ಸರ್ಕಾರ ರಚಿಸುತ್ತದೆಯೇ ಎಂಬುದನ್ನು ನಿರ್ಧರಿಸಲು ಮಧ್ಯಾಹ್ನದವರೆಗೂ ಕಾಯಬೇಕಾಗುತ್ತದೆ. 2015 ರಿಂದ ದೆಹಲಿಯಲ್ಲಿ ಆಡಳಿತ ನಡೆಸುತ್ತಿರುವ ಎಎಪಿ ಮೇಲೆ ಹಲವಾರು ಎಕ್ಸಿಟ್ ಪೋಲ್‌ಗಳು ಬಿಜೆಪಿಗೆ ಅಧಿಕಾರ ಎಂದು ಹೇಳಿವೆ.

ಚುನಾವಣಾ ಆಯೋಗದ ಪ್ರಕಾರ ದೆಹಲಿ ಚುನಾವಣೆಯಲ್ಲಿ ಶೇ.60.54ರಷ್ಟು ಮತದಾನವಾಗಿದೆ. ದೆಹಲಿ ಬಿಜೆಪಿ ಅಧ್ಯಕ್ಷ ವೀರೇಂದ್ರ ಸಚ್‌ದೇವ ಅವರು ತಮ್ಮ ಪಕ್ಷವು ಸುಮಾರು 50 ಸ್ಥಾನಗಳನ್ನು ಗೆಲ್ಲಲಿದೆ ಎಂದು ಹೇಳಿದ್ದಾರೆ. ಎಎಪಿ ಎಕ್ಸಿಟ್ ಪೋಲ್ ಸಮೀಕ್ಷೆಗಳ ಫಲಿತಾಂಶಗಳನ್ನು ತಿರಸ್ಕರಿಸಿದೆ, ಅರವಿಂದ್ ಕೇಜ್ರಿವಾಲ್ ನಾಲ್ಕನೇ ಬಾರಿಗೆ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಆದರೆ ಆರಂಭಿಕ



ಫಲಿತಾಂಶಗಳು ಇದು ಕಷ್ಟ ಎನ್ನುತ್ತಿವೆ.

ರಾಜಕೀಯ ವಿಶ್ಲೇಷಕ ನವೀನ್ ಗೌತಮ್ ಅವರು, ಬಿಜೆಪಿಗೆ ಬಹುಮತ ಬಂದರೆ ಇಡೀ ಚುನಾವಣಾ ಪ್ರಚಾರದಲ್ಲಿ ಮುಂಚೂಣಿಯಲ್ಲಿದ್ದ ಹೊಸದಿಲ್ಲಿಯ ಬಿಜೆಪಿ ಅಭ್ಯರ್ಥಿ ಪ್ರವೇಶ್ ವರ್ಮಾ ಸಿಎಂ ಅಭ್ಯರ್ಥಿ ಆಗುವಲ್ಲಿ ಮುಂದಿದ್ದಾರೆ. ಅಂತೆಯೇ, ವಿಧಾನಸಭೆಯಲ್ಲಿ ಎರಡನೇ ಬಾರಿಗೆ ವಿರೋಧ ಪಕ್ಷದ ನಾಯಕರಾಗಿ ಸೇವೆ ಸಲ್ಲಿಸಿರುವ ವಿಜೇಂದರ್ ಗುಪ್ತಾ ಅವರು ಸಹ ಪ್ರಬಲ ಸ್ಪರ್ಧಿಯಾಗಬಹುದು ಎಂದು ಗೌತಮ್ ಹೇಳಿದ್ದಾರೆ.

ಮತ್ತೊಬ್ಬ ರಾಜಕೀಯ ವಿಶ್ಲೇಷಕ ಮನೋಜ್ ಮಿಶ್ರಾ ಮಾತನಾಡಿ, ಈ ಬಾರಿ ಬಿಜೆಪಿ ಕರೋಲ್ ಬಾಗ್ ಮೀಸಲು ವಿಧಾನಸಭಾ ಕ್ಷೇತ್ರದಿಂದ ದುಷ್ಯಂತ್ ಗೌತಮ್ ಅವರಿಗೆ ಟಿಕೆಟ್ ನೀಡಿದೆ. ಅವರು ದೆಹಲಿಯ ಮಲ್ಕಾ ಗಂಜ್‌ನಲ್ಲಿ ಹುಟ್ಟಿ ಬೆಳೆದಿದ್ದಾರೆ. ದುಶ್ಯಂತ್ ಗೌತಮ್ ಬಿಜೆಪಿಯ ರಾಷ್ಟ್ರೀಯ ಉಪಾಧ್ಯಕ್ಷರಾಗಿದ್ದು, ಸಂಘಟನೆಯಲ್ಲಿ ವಿವಿಧ ಹುದ್ದೆಗಳನ್ನು ಅಲಂಕರಿಸಿದ್ದಾರೆ.

ವಿದ್ಯಾರ್ಥಿ ರಾಜಕೀಯದಲ್ಲಿ ಸಕ್ರಿಯರಾಗಿದ್ದ ದುಷ್ಯಂತ್ ಗೌತಮ್ ಅವರು ತಮ್ಮ ಓದು ಮುಗಿಸಿದ ಬಳಿಕ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನ ವಿಭಾಗೀಯ ಅಧ್ಯಕ್ಷರಾಗಿ ಕೆಲಸ ಮಾಡಿದ್ದಾರೆ . ಅವರು ಮೂರು ಬಾರಿ ಬಿಜೆಪಿ ಪರಿಶಿಷ್ಟ ಮೋರ್ಚಾದ ಅಧ್ಯಕ್ಷರಾಗಿಯೂ ದುಡಿದಿದ್ದಾರೆ. ಅವರು ಸಂಘಟನೆ ಮತ್ತು ರಾಜಕೀಯವನ್ನು ಹತ್ತಿರದಿಂದ ನೋಡಿದ್ದಾರೆ. ಇವರು ಕೂಡಾ ದೆಹಲಿಯ ಮುಖ್ಯಮಂತ್ರಿ ಹುದ್ದೆಗೆ ಪ್ರಬಲ ಸ್ಪರ್ಧಿಯಾಗಬಹುದು ಎಂದು ಮಿಶ್ರಾ ಹೇಳಿದ್ದಾರೆ.

ಇದೇ ವೇಳೆ ಸುಮಾರು 15 ಸ್ಥಾನಗಳು ವಿಐಪಿ ಕ್ಯಾಂಡಿಡೇಟ್ ಗಳಿಂದಾಗಿ ಚರ್ಚೆಗೆ ಗ್ರಾಸವಾಗಿವೆ. ಕೆಲವು ಹೈ–ಪ್ರೊಫೈಲ್ ಸ್ಥಾನಗಳಲ್ಲಿ ನವದೆಹಲಿ ಸ್ಥಾನ, ಕಲ್ಕಾಜಿ ಸ್ಥಾನ, ಜಂಗ್‌ಪುರ ಸ್ಥಾನ, ಪಟಪರ್‌ಗಂಜ್ ಸ್ಥಾನ ಮತ್ತು ಚಾಂದಿನಿ ಚೌಕ್ ವಿಧಾನಸಭಾ ಕ್ಷೇತ್ರಗಳು ಸೇರಿವೆ.

# ಅಯೋಧ್ಯೆಯಲ್ಲಿ ಭಕ್ತಾದಿಗಳ ಸಂಖ್ಯೆ ಏರಿಕೆ

**ನವದೆಹಲಿ:** ಅಯೋಧ್ಯೆಯ ರಾಮ ಮಂದಿರದಲ್ಲಿ ದರ್ಶನ ಮತ್ತು ಆಚರಣೆಗಳ ಸಮಯವನ್ನು ಪ್ರಸ್ತುತ ಬೆಳಿಗ್ಗೆ 7 ರಿಂದ ಬೆಳಿಗ್ಗೆ 6 ಕ್ಕೆ ಬದಲಾಯಿಸಲಾಗಿದೆ ಎಂದು ಅಧಿಕಾರಿಗಳು ಶುಕ್ರವಾರ ತಿಳಿಸಿದ್ದಾರೆ. ಶ್ರೀ ರಾಮ್ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಪ್ರಕಾರ, ದೇವಾಲಯವು ಈಗ ಪ್ರತಿದಿನ ಬೆಳಿಗ್ಗೆ 6 ರಿಂದ ರಾತ್ರಿ 10 ರವರೆಗೆ ಭಕ್ತಾದಿಗಳ ದರ್ಶನಕ್ಕೆ ತೆರೆದಿರುತ್ತದೆ.

ಮುಂಜಾನೆ 4 ಗಂಟೆಗೆ ಮಂಗಳಾರತಿ ನಡೆಯಲಿದ್ದು, ನಂತರ ದೇವಾಲಯದ ಬಾಗಿಲುಗಳನ್ನು ಸಂಕ್ಷಿಪ್ತವಾಗಿ ಮುಚ್ಚಲಾಗುತ್ತದೆ. ಬೆಳಿಗ್ಗೆ 6 ಗಂಟೆಗೆ ಶೃಂಗಾರ ಆರತಿ ನಡೆಯಲಿದ್ದು, ಅಲ್ಲಿಂದ ಮುಂದಕ್ಕೆ ಸಾರ್ವಜನಿಕರಿಗೆ ದರ್ಶನ ಆರಂಭವಾಗಲಿದೆ. ಮಧ್ಯಾಹ್ನ 12 ಗಂಟೆಗೆ 'ರಾಜಭೋಗ್' ಅರ್ಪಿಸಲಾಗುವುದು. ಆಗ ಭಕ್ತರು ದರ್ಶನ ಮಾಡಬಹುದು ಎಂದು ದೇವಾಲಯದ ಟ್ರಸ್ಟ್ ತಿಳಿಸಿದೆ. 'ಸಂಧ್ಯಾ ಆರತಿ' ಸಂಜೆ 7 ಗಂಟೆಗೆ ನಿಗದಿಯಾಗಿದ್ದು, ಈ ಸಮಯದಲ್ಲಿ ದೇವಾಲಯದ ಬಾಗಿಲುಗಳನ್ನು 15 ನಿಮಿಷಗಳ ಕಾಲ ಮುಚ್ಚಿ ಮತ್ತೆ ತೆರೆಯಲಾಗುತ್ತದೆ.

ಶಯನ ಆರತಿಯನ್ನು ರಾತ್ರಿ 9.30 ರ ಬದಲು ರಾತ್ರಿ 10 ಗಂಟೆಗೆ ನಡೆಸಲಾಗುವುದು. ನಂತರ ರಾತ್ರಿ ದೇವಾಲಯವನ್ನು ಮುಚ್ಚಲಾಗುತ್ತದೆ. ಹೆಚ್ಚುತ್ತಿರುವ ಭಕ್ತರ ಸಂಖ್ಯೆಗೆ ಅನುಗುಣವಾಗಿ ಬದಲಾವಣೆಗಳನ್ನು ಮಾಡಲಾಗಿದ್ದು, ದರ್ಶನ ಸಮಯವನ್ನು ಬೆಳಿಗ್ಗೆ ಸುಮಾರು 90 ನಿಮಿಷ ಮತ್ತು ಸಂಜೆ 30 ನಿಮಿಷಗಳವರೆಗೆ ವಿಸ್ತರಿಸಲಾಗಿದೆ. ಪ್ರಸಾದ ಅರ್ಪಣೆಯ ಸಮಯದಲ್ಲಿ ಭಕ್ತರಿಗೆ 'ದರ್ಶನ' ವ್ಯವಸ್ಥೆ ಇರುತ್ತದೆ ಎಂದು ಟ್ರಸ್ಟ್ ತಿಳಿಸಿದೆ.

ಜ.26 ಮತ್ತು 'ಬಸಂತ್ ಪಂಚಮಿ' (ಫೆ.3) ನಡುವೆ ಒಂದು ಕೋಟಿಗೂ ಹೆಚ್ಚು ಭಕ್ತರು ಪವಿತ್ರ ನಗರಿ ಅಯೋಧ್ಯೆಗೆ ಭೇಟಿ ನೀಡುವ ಮೂಲಕ ಹೊಸ ದಾಖಲೆ ನಿರ್ಮಾಣವಾಗಿದೆ ಎಂದು ಉತ್ತರ ಪ್ರದೇಶ ಸರ್ಕಾರ ಫೆ.3ರಂದು ಹೇಳಿದೆ.

ಭವ್ಯವಾದ ದೇವಾಲಯದಲ್ಲಿ ರಾಮ್ ಲಲ್ಲಾ ಸಿಂಹಾಸನಾರೋಹಣ ಮಾಡಿದ ನಂತರ ಇದೇ ಮೊದಲ ಬಾರಿಗೆ, ಪ್ರಯಾಗ್ ರಾಜ್?ನಲ್ಲಿ ಮಹಾ ಕುಂಭ ಮೇಳ ನಡೆಯುತ್ತಿದೆ. ಇದರಿಂದ ಅಯೋಧ್ಯೆಗೆ ಬರುತ್ತಿರುವ ಭಕ್ತಾದಿಗಳ ಸಂಖ್ಯೆಯೂ ಹೆಚ್ಚಾಗಿದೆ.

ರಾಮ ಮಂದಿರವು ಅಯೋಧ್ಯೆಯ ಆಧ್ಯಾತ್ಮಿಕ ಕೇಂದ್ರಬಿಂದುವಾಗಿದ್ದು, ಪ್ರತಿದಿನ ಸುಮಾರು 3 ಲಕ್ಷ ಭಕ್ತರು ಇಲ್ಲಿಗೆ ಭೇಟಿ ನೀಡುತ್ತಾರೆ. ದೇವಾಲಯದ ಟ್ರಸ್ಟ್ ದರ್ಶನಕ್ಕೆ ಅನುಕೂಲವಾಗುವಂತೆ ಹಲವಾರು ವ್ಯವಸ್ಥೆಗಳನ್ನು ಮಾಡಿದೆ. ದೇವಾಲಯವು ಪ್ರತಿದಿನ 18 ಗಂಟೆಗಳ ಕಾಲ ತೆರೆದಿರುತ್ತದೆ. ಇದಲ್ಲದೆ ಹನುಮಾನ್ ಗರ್ಹಿಗೆ ಭೇಟಿ ನೀಡುತ್ತಿರುವ ಭಕ್ತರ ಸಂಖ್ಯೆಯೂ ಹೆಚ್ಚಾಗಿದೆ ಎಂದು ಎಂದು ಟ್ರಸ್ಟ್ ಹೇಳಿಕೆಯಲ್ಲಿ ತಿಳಿಸಿದೆ.

# ತನ್ನ ಉದ್ಯೋಗಿಗಳಿಗೆ 14.5 ಕೋಟಿ ರೂ.ಬಂಪರ್ ಬೋನಸ್ ಕೊಟ್ಟ ಕಂಪೆನಿ!

**ಕೊಯಮತ್ತೂರ್:** ಉದ್ಯೋಗಿಗಳು ಕೇವಲ ಸಂಸ್ಥೆಯಲ್ಲಿ ದುಡಿಯುವ ವರ್ಗವಲ್ಲ. ಅವರು ಸಂಸ್ಥೆಯ ಲಾಭದಲ್ಲೂ ಭಾಗೀದಾರರು ಎಂದು ಐಟಿ ಸಂಸ್ಥೆಯೊಂದು ತನ್ನ ಉದ್ಯೋಗಿಗಳಿಗೆ 14.5 ಕೋಟಿ ರೂ ಮೊತ್ತದ ಬೃಹತ್ ಬೋನಸ್ ನೀಡಿದೆ.

ಕೊಯಮತ್ತೂರಿನ ಅವಿನಾಶಿ ರಸ್ತೆಯಲ್ಲಿ ಮುಖ್ಯ ಕಚೇರಿ ಹೊಂದಿರುವ ಕೊವಯಿ .ಕಾಮ್ ಈ ಬಂಪರ್ ಆಫರ್ ಅನ್ನು ತನ್ನ ಸಿಬ್ಬಂದಿಗೆ ನೀಡಿದೆ. ಇಂಗ್ಲೆಂಡ್ ಮತ್ತು ಚೆನ್ನೈನಲ್ಲಿ ಬ್ರ್ಯಾಂಚ್ ಕಚೇರಿ ಹೊಂದಿರುವ ಸಂಸ್ಥೆಯಲ್ಲಿ ಒಟ್ಟು 260 ಸಿಬ್ಬಂದಿ ಇದ್ದಾರೆ. ಇದರಲ್ಲಿ 140 ಉದ್ಯೋಗಿಗಳಿಗೆ ಅಂದರೆ, ಸಂಸ್ಥೆಯಲ್ಲಿ ಕಳೆದ 3 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗೆ ಭಾರೀ ಮೊತ್ತದ ಬೋನಸ್ ನೀಡಲು ನಿರ್ಧರಿಸಿ, ಸುದ್ದಿಯಾಗಿದೆ.

'ಟುಗೆದರ್ ವಿ ಗ್ರೋ' ಎಂಬ ಯೋಜನೆ ಅಡಿಯಲ್ಲಿ 2022 ಡಿ.21ಕ್ಕೆ ಮುಂಚೆ ಸೇರಿದ ಮೂರು ವರ್ಷ ಸೇವೆ ಪೂರೈಸಿದ ಉದ್ಯೋಗಿಗಳಿಗೆ ತಮ್ಮ ವಾರ್ಷಿಕ




ವೇತನದಲ್ಲಿ ಶೇ 50ರಷ್ಟನ್ನು ಬೋನಸ್ ಆಗಿ ನೀಡಲು ಸಂಸ್ಥೆ ನಿರ್ಧರಿಸಿದೆ. ಮೊದಲ ಹಂತದಲ್ಲಿ 80ಕ್ಕೂ ಹೆಚ್ಚು ಉದ್ಯೋಗಿಗಳಿಗೆ ಈ ಬೋನಸ್ ಹಣವನ್ನು ಜನವರಿ ತಿಂಗಳ ವೇತನದಲ್ಲಿ ನೀಡಿದ್ದಾರೆ. ಸಂಸ್ಥೆಯ ಸಂಸ್ಥಾಪಕ ಮತ್ತು ಸಿಇಒ ಸರವಣಕುಮಾರ್ ಮಾತನಾಡಿ, "ಸಂಸ್ಥೆಯ ಬೆಳವಣಿಗೆ ಮತ್ತು ಲಾಭಕ್ಕೆ ಕೊಡುಗೆ ನೀಡಿದ ಉದ್ಯೋಗಿಗಳನ್ನು ಪ್ರಶಂಸಿಸಬೇಕು ಎಂಬ ವಿಚಾರದಲ್ಲಿ ನಾನು ನಂಬಿಕೆ ಹೊಂದಿದ್ದೇನೆ. ಸಂಸ್ಥೆಯ ಸಂಪತ್ತನ್ನು ಉದ್ಯೋಗಿಗಳೊಂದಿಗೆ ಹಂಚಿಕೊಳ್ಳಬೇಕು ಎಂಬುದು ನನ್ನ ದೀರ್ಘಕಾಲದ ಕನಸು" ಎಂದು ಹೇಳಿದ್ದಾರೆ.

"ನಾವು ಉದ್ಯೋಗಿಗಳಿಗೆ ಪ್ರತಿಫಲ ನೀಡುವ ದಾರಿ ಹುಡುಕುತ್ತಿದ್ದೆವು. ಆರಂಭದಲ್ಲಿ ಹಂಚಿಕೆ ಮಾಲಿಕತ್ವದ ಷೇರು ಅಥವಾ ಷೇರು ಸಂಬಂಧಿತ ಅವಕಾಶದ ಕುರಿತು ನೋಡಿದೆವು. ಆದರೆ ಅವು ಕೇವಲ ಪೇಪರ್ ಹಣ. ಅವರಿಗೆ ನಿಜವಾದ ಪ್ರಯೋಜನ ಸಿಗಬೇಕು. ಸಂಸ್ಥೆಗೆ ಸಾರ್ವಜನಿಕ ಹೂಡಿಕೆದಾರರನ್ನು ಹೆಚ್ಚಿಸಬೇಕು ಅಥವಾ ಸಾರ್ವಜನಿಕರಿಗೆ ಷೇರುಗಳನ್ನು ನೀಡಬೇಕು. ಈ ಹಿನ್ನೆಲೆಯಲ್ಲಿ ಬೋನಸ್ ಅನ್ನು ಹಣದ ರೂಪದಲ್ಲಿ ನೀಡಲು ನಿರ್ಧರಿಸಿದೆವು. ನಮ್ಮ ಉದ್ಯೋಗಿಗಳು ಇದನ್ನು ಅವರ ಅವಶ್ಯಕತೆಗೆ ತಕ್ಕಂತೆ ಬಳಕೆ ಮಾಡಬಹುದು. ಇದನ್ನು ಅವರು ಬ್ಯಾಂಕ್ ಲೋನ್ ತೀರಿಸಲು, ಮನೆಗೆ ಡೌನ್‌ಪೇಮೆಂಟ್ ಮಾಡಲು ಅಥವಾ ಅವರ ಅಗತ್ಯಕ್ಕೆ ಅನುಗುಣವಾಗಿ ಹೂಡಿಕೆ ಮಾಡಬಹುದು" ಎಂದು ತಿಳಿಸಿದರು.


ಬೋನಸ್ ಕುರಿತು ಮಾತನಾಡಿರುವ ಉದ್ಯೋಗಿಗಳು, "ಸಂಸ್ಥೆಗಾಗಿ ದುಡಿದ ನಮಗೆ ಅದ್ಭುತವಾದ ಅಚ್ಚರಿ ಸಿಕ್ಕಿದೆ. ನಾವು ನಿರೀಕ್ಷೆ ಮಾಡಿದ್ದಕ್ಕಿಂತ ಸಂಸ್ಥೆ ಹೆಚ್ಚು ಬೋನಸ್ ನೀಡಿದೆ. ಇತರೆ ರಾಜ್ಯಗಳಲ್ಲಿ ಮಾತ್ರ ಈ ರೀತಿಯ ಆಫರ್‌ಗಳು ಸಿಗುತ್ತದೆ ಎಂದು ಕೇಳಿದ್ದೆವು. ಇದೀಗ ನಮಗೂ ಸಿಕ್ಕಿರುವುದು ಖುಷಿ ತಂದಿದೆ. ಸಂಸ್ಥೆಯ ಬೆಳವಣಿಗೆಗೆ ನಾವು ಮತ್ತಷ್ಟು ಶ್ರಮವಹಿಸಲಿದ್ದೇವೆ" ಎಂದರು.

2023ರಲ್ಲಿ ಕೊವಯಿ.ಕಾಮ್ ಸಂಸ್ಥೆಯ ಒಟ್ಟಾರೆ ವಾರ್ಷಿಕ ಆದಾಯ 16 ಮಿಲಿಯನ್ ಡಾಲರ್ ಇದ್ದು, ಇತ್ತೀಚೆಗೆ ಬೆಂಗಳೂರು ಮೂಲದ ಸಂಸ್ಥೆಯನ್ನು ತನ್ನ ತೆಕ್ಕೆಗೆ ತೆಗೆದುಕೊಂಡಿತ್ತು.

# ಹಸೀನಾ ಭಾಷಣಕ್ಕೂ ಭಾರತಕ್ಕೂ ಸಂಬಂಧವಿಲ್ಲ: ಬಾಂಗ್ಲಾದೇಶ ರಾಯಭಾರಿಗೆ ವಿದೇಶಾಂಗ ಸಚಿವಾಲಯ ಸಮನ್ಸ್ ಜಾರಿ

**ನವದೆಹಲಿ:** ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರು ಭಾರತ ದೇಶದಲ್ಲಿದ್ದಾಗ ನೀಡಿದ ಹೇಳಿಕೆಗಳ ಕುರಿತು ಬಾಂಗ್ಲಾದೇಶ ಭಾರತ ಸರ್ಕಾರಕ್ಕೆ ತನ್ನ ಆಕ್ಷೇಪಣೆ ಸಲ್ಲಿಸಿತ್ತು. ಇದಾದ ನಂತರ, ಭಾರತದ ವಿದೇಶಾಂಗ ಸಚಿವಾಲಯವು ಇಂದು ಭಾರತದಲ್ಲಿರುವ ಬಾಂಗ್ಲಾದೇಶದ ಹಂಗಾಮಿ ಹೈಕಮಿಷನರ್ ಅವರಿಗೆ ಸಮನ್ಸ್ ಜಾರಿಗೊಳಿಸಿದೆ. ಶೇಖ್ ಹಸೀನಾ ಅವರ ಹೇಳಿಕೆಗಳನ್ನು ಅವರ "ವೈಯಕ್ತಿಕ ವಿಚಾರ" ಎಂದಿರುವ ಮೋದಿ ಸರ್ಕಾರ ಅದರಲ್ಲಿ ಭಾರತದ ಯಾವುದೇ ಪಾತ್ರವಿಲ್ಲ ಎಂದು ಸ್ಪಷ್ಟಪಡಿಸಿದೆ. ಶೇಖ್ ಹಸೀನಾ ಅವರ ಹೇಳಿಕೆಗಳನ್ನು ಭಾರತ ಸರ್ಕಾರದ ನಿಲುವಿನ ಜೊತೆ ಲಿಂಕ್ ಮಾಡುವುದು ದ್ವಿಪಕ್ಷೀಯ ಸಂಬಂಧಗಳನ್ನು ಸುಧಾರಿಸಲು ಸಹಾಯ ಮಾಡುವುದಿಲ್ಲ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ.

ಭಾರತವು ಬಾಂಗ್ಲಾದೇಶದೊಂದಿಗೆ ಸಕಾರಾತ್ಮಕ, ರಚನಾತ್ಮಕ ಮತ್ತು ಪರಸ್ಪರ ಪ್ರಯೋಜನಕಾರಿ ಸಂಬಂಧವನ್ನು ಬಯಸುತ್ತದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ



ವಕ್ತಾರ ರಣಧೀರ್ ಜೈಸ್ವಾಲ್ ಅಧಿಕೃತ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಇದನ್ನು ಇತ್ತೀಚಿನ ಉನ್ನತ ಮಟ್ಟದ ಸಭೆಗಳಲ್ಲಿ ಹಲವಾರು ಬಾರಿ ಪುನರುಚ್ಚರಿಸಲಾಗಿದೆ. ಆದರೂ ಬಾಂಗ್ಲಾದೇಶದ ಅಧಿಕಾರಿಗಳು ಭಾರತವನ್ನು ನಕಾರಾತ್ಮಕವಾಗಿ ಚಿತ್ರಿಸುತ್ತಲೇ ಇರುವುದು ವಿಷಾದಕರ. ಬಾಂಗ್ಲಾದೇಶ ಆಂತರಿಕ ಆಡಳಿತ ಸಮಸ್ಯೆಗಳಿಗೆ ನಮ್ಮನ್ನು ಹೊಣೆಗಾರರನ್ನಾಗಿ ಮಾಡುತ್ತಿದೆ ಎಂದು ಅವರು ಹೇಳಿದ್ದಾರೆ.

ಪರಸ್ಪರ ಪ್ರಯೋಜನಕಾರಿ ಸಂಬಂಧಕ್ಕಾಗಿ ಭಾರತ ಸರ್ಕಾರ ಪ್ರಯತ್ನಗಳನ್ನು ಮಾಡುತ್ತದೆ. ಅದರಂತೆ ಬಾಂಗ್ಲಾದೇಶ ಕೂಡ ಆ ವಾತಾವರಣವನ್ನು ಹಾಳು ಮಾಡದೆ ಅದೇ ರೀತಿ ಪ್ರತಿಕ್ರಿಯಿಸುತ್ತದೆ ಎಂದು ನಾವು ನಿರೀಕ್ಷಿಸುತ್ತೇವೆ ಎಂದು ಜೈಸ್ವಾಲ್ ತಮ್ಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.

77 ವರ್ಷದ ಶೇಖ್ ಹಸೀನಾ ಅವರು ಕಳೆದ ವರ್ಷ ಆಗಸ್ಟ್ 5ರಿಂದ ಭಾರತದಲ್ಲಿ ವಾಸಿಸುತ್ತಿದ್ದಾರೆ. ಬಾಂಗ್ಲಾದೇಶದಲ್ಲಿ ವಿದ್ಯಾರ್ಥಿಗಳ ನೇತೃತ್ವದ ಬೃಹತ್ ಪ್ರತಿಭಟನೆಯು ಅವರ 16 ವರ್ಷಗಳ ಅವಾಮಿ ಲೀಗ್ ಸರ್ಕಾರವನ್ನು ಪತನಗೊಳಿಸಿತು. ಇದಾದ ನಂತರ ಅವರು ರಾಜೀನಾಮೆ ನೀಡಿ ಬಾಂಗ್ಲಾದೇಶದಿಂದ ಭಾರತಕ್ಕೆ ಪಲಾಯನ ಮಾಡಿದರು. ಅಂದಿನಿಂದ ಅವರಿಗೆ ದೆಹಲಿಯಲ್ಲಿ ಆಶ್ರಯ ನೀಡಲಾಗಿದೆ.

ಢಾಕಾದಲ್ಲಿ ಅವರ ತಂದೆ ಶೇಖ್ ಮುಜಿಬುರ್ ರೆಹಮಾನ್ ಮನೆಯ ಮೇಲೆ ಇತ್ತೀಚೆಗೆ ನಡೆದ ಹಿಂಸಾಚಾರ, ದಾಳಿಗೆ ಶೇಖ್ ಹಸೀನಾ ಭಾವನಾತ್ಮಕವಾಗಿ ಪ್ರತಿಕ್ರಿಯಿಸಿದ್ದರು. ಇದಾದ ನಂತರ ಉದ್ವಿಗ್ನತೆ ಮತ್ತಷ್ಟು ಹೆಚ್ಚಾಯಿತು. ಈ ದಾಳಿಯನ್ನು ಖಂಡಿಸಿದ ಶೇಖ್ ಹಸೀನಾ, 'ಅವರು ಕಟ್ಟಡವನ್ನು ಕೆಡವಬಹುದು, ಆದರೆ ಇತಿಹಾಸವನ್ನು ಅಲ್ಲ. ಇತಿಹಾಸವು ತನ್ನ ಸೇಡು ತೀರಿಸಿಕೊಳ್ಳುತ್ತದೆ ಎಂಬುದನ್ನು ಅವರು ನೆನಪಿನಲ್ಲಿಡಬೇಕು' ಎಂದು ಹೇಳಿದ್ದರು.

ಇಂದು ನಮ್ಮ ತಂದೆಯ ಮನೆಯನ್ನು ಕೆಡವಲಾಗುತ್ತಿದೆ. ಆ ಮನೆ ಯಾವ ಅಪರಾಧ ಮಾಡಿದೆ ಅವರು ಮನೆಯ ಬಗ್ಗೆ ಏಕೆ ಭಯಪಡುತ್ತಿದ್ದರು ನಾನು ದೇಶದ ಜನರಿಂದ ನ್ಯಾಯವನ್ನು ಕೇಳುತ್ತೇನೆ. ನಾನು ನಿಮಗಾಗಿ ಏನನ್ನೂ ಮಾಡಲಿಲ್ಲವೇ ಎಂದು ಅವರು ಪ್ರಶ್ನಿಸಿದ್ದರು.

ಬಾಂಗ್ಲಾದೇಶದ ವಿದೇಶಾಂಗ ಸಚಿವಾಲಯವು ಢಾಕಾದಲ್ಲಿರುವ ಭಾರತದ ಹಂಗಾಮಿ ಹೈಕಮಿಷನರ್ ಅವರನ್ನು ಕರೆಸಿ, ಭಾರತದಲ್ಲಿರುವ ಶೇಖ್ ಹಸೀನಾ ನೀಡಿದ ಹೇಳಿಕೆಗಳ ವಿರುದ್ಧ ಬಲವಾದ ಪ್ರತಿಭಟನೆಯನ್ನು ಸಲ್ಲಿಸಿತು. ಶೇಖ್ ಹಸೀನಾ ಸುಳ್ಳು, ಕಲ್ಪಿತ ಮತ್ತು ಪ್ರಚೋದನಕಾರಿ ಹೇಳಿಕೆಗಳನ್ನು ನೀಡುವುದನ್ನು ತಡೆಯಲು ಬಾಂಗ್ಲಾದೇಶ ಭಾರತವನ್ನು ವಿನಂತಿಸಿತು. ಶೇಖ್ ಹಸೀನಾ ಅವರ ಇಂತಹ ಚಟುವಟಿಕೆಗಳನ್ನು ಬಾಂಗ್ಲಾದೇಶದ ವಿರುದ್ಧದ ಪ್ರತಿಕೂಲ ಕೃತ್ಯವೆಂದು ಪರಿಗಣಿಸಲಾಗಿದೆ ಎಂದು ಅದು ಹೇಳಿತ್ತು.

# ಬಾಲ್ಯದ ಸ್ನೇಹದಿಂದ ಪ್ರೇಮಾಂಕುರ; ಮನೆ ತೊರೆದು ಹೋದ ಯುವತಿಯರ ಹೇಳಿಕೆಗೆ ಪೊಲೀಸರೇ ಶಾಕ್?

**ಲಖನೌ:** ಬಾಲ್ಯದ ಗೆಳತಿಯರಿಬ್ಬರ ನಡುವೆ ಪ್ರೇಮಾಂಕುರವಾಗಿ, ಮದುವೆ ಮಾಡಿಕೊಳ್ಳುವ ಉದ್ದೇಶದಿಂದ ಓಡಿ ಹೋಗಿರುವ ಘಟನೆ ಉತ್ತರ ಪ್ರದೇಶದ ಲಖನೌದಲ್ಲಿ ವರದಿಯಾಗಿದೆ.

ಬಾಲ್ಯದಿಂದಲೂ ಅತ್ಯುತ್ತಮ ಸ್ನೇಹಿತರಾಗಿದ್ದ ಈ ಯುವತಿಯರು ವಯಸ್ಕರಾಗಿದ್ದು, ಮನೆಯಲ್ಲಿ ತೋರಿಸುತ್ತಿದ್ದ ಮದುವೆ ನಿಶ್ಚಯಗಳನ್ನು ನಿರಾಕರಿಸುತ್ತಿದ್ದರು. ಈ ನಡುವೆ ಇಬ್ಬರು ಒಟ್ಟಿಗೆ ಜೀವನ ಕಳೆಯಲು ನಿರ್ಧರಿಸಿ ಮನೆ ತೊರೆದಿದ್ದಾರೆ. ಮಕ್ಕಳ ಈ ವರ್ತನೆ ಕಂಡು ಗಾಬರಿಯಾದ ಪೋಷಕರು ಗಾಬರಿಯಾದರು. ಕಡೆಗೆ ಯುವತಿಯರು ಪೊಲೀಸರು ಠಾಣೆಗೆ ಬಂದು ತಾವಿಬ್ಬರೂ ವಯಸ್ಕರಾಗಿದ್ದು, ತಮ್ಮಿಚ್ಛೆಯಂತೆ ಜೀವನ ಕಳೆಯಲು ನಿಶ್ಚಯಿಸಿದ್ದೇವೆ ಎಂದು ಆಧಾರ್ ಕಾರ್ಡ್‌ನ ವಯಸ್ಸಿನ ದೃಢೀಕರಣವನ್ನು ತೋರಿಸಿದ್ದಾರೆ.

ಪೊಲೀಸರ ಎದುರು ಯುವತಿಯರು ಹೇಳಿದ್ದೇನು: ರಹೀಮಬಾದ್ ಇನ್ಸ್‌ಪೆಕ್ಟರ್ ಅಖ್ತರ್ ಅಹಮದ್ ಅನ್ಸಾರಿ, ಇಬ್ಬರು ಯುವತಿಯರು ಮತ್ತು ಕುಟುಂಬವನ್ನು ಠಾಣೆಗೆ ಕರೆ ತಂದಿದ್ದಾರೆ. ವಿಚಾರಣೆ ವೇಳೆ ಯುವತಿಯರು ಒಂದೇ ಗ್ರಾಮದಲ್ಲಿ ಬಾಲ್ಯದಿಂದಲೂ ನಾವಿಬ್ಬರು ಆಡಿ ಬೆಳೆದಿದ್ದು, ಉತ್ತಮ ಸ್ನೇಹಿರತಾಗಿದ್ದೇವೆ. ಆಗ್ಗಾಗ್ಗೆ ಇಬ್ಬರು ಒಟ್ಟಿಗೆ ಇಬ್ಬರ ಮನೆಯಲ್ಲೂ ಕಾಲ ಕಳೆಯುತ್ತಿದ್ದೇವೆ. ನಾವಿಬ್ಬರು ಇತರ ಸ್ನೇಹಿತರಿಗಿಂತ ಹೆಚ್ಚು ಅತ್ಯಪ್ತ ವಾಗಿದ್ದೆವು. ಈ ಬಗ್ಗೆ ಕುಟುಂಬ ಕೂಡ ಯಾವುದೇ ಆಕ್ಷೇಪಣೆ ವ್ಯಕ್ತಪಡಿಸಿರಲಿಲ್ಲ. ಇದೇ ವೇಳೆ, ನಿಧಾನವಾಗಿ ನಮ್ಮಿಬ್ಬರ ನಡುವೆ ಪ್ರೇಮಾಂಕುರವಾಯಿತು.

ಆರಂಭದಲ್ಲಿ ಈ ವಿಚಾರದ ಬಗ್ಗೆ ನಮ್ಮ ಕುಟುಂಬಗಳಿಗೆ ತಿಳಿದಿರಲಿಲ್ಲ. ಇಬ್ಬರ ಮನೆಯಲ್ಲೂ ಮದುವೆಗಾಗಿ ವರ ಹುಡುಕಾಟ ಆರಂಭಿಸಿದರು. ಅನೇಕ ಕುಟುಂಬದಿಂದ ಕೂಡ ಮದುವೆ ಪ್ರಸ್ತಾಪ ಬಂದರೂ ಯುವತಿಯರು ನಿರಾಕರಿಸಿದರು. ಈ ವೇಳೆ, ನಮ್ಮ ನಡುವಿನ ಗಾಢ ಸಂಬಂಧ ಮತ್ತಷ್ಟು ಗಟ್ಟಿಯಾಗಿತ್ತು. ನಾವಿಬ್ಬರು ಒಟ್ಟಿಗೆ ಮುಂದಿನ ಜೀವನ ಕಳೆಯೋಣ ಎಂದು ನಿರ್ಧರಿಸಿದ್ದೇವೆ ಎಂದು ಕುಟುಂಬಕ್ಕೆ ಮಾಹಿತಿ ನೀಡಿದೆವು. ನಮ್ಮ ನಿರ್ಧಾರ ಕುರಿತು ಕುಟುಂಬದ ಮನವೊಲಿಸಲು ಪ್ರಯತ್ನಿಸಿದೆವು. ಆದರೆ, ಅವರು ನಮ್ಮ ಈ ಸಂಬಂಧಕ್ಕೆ ವಿರೋಧ ವ್ಯಕ್ತಪಡಿಸಿದರು. ಕಡೆಗೆ ಬೇರೆ ದಾರಿ ಕಾಣದೇ ಪೊಲೀಸರ ಮುಂದೆ ವಿಷಯ ಪರಿಹಾರ ಮಾಡಲು ಮುಂದಾಗಿರುವುದಾಗಿ ಯುವತಿಯರು ತಿಳಿಸಿದರು.

ಸಮಾಲೋಚನೆಗೂ ಬಗ್ಗದ ಯುವತಿಯರು; ಮಹಿಳಾ ಪೊಲೀಸರು ಇಬ್ಬರು ಯುವತಿಯರನ್ನು ದೀರ್ಘಕಾಲ ಸಮಾಲೋಚನೆಗೆ ಒಳಪಡಿಸಿದರೂ ಅವರು ಅದನ್ನು ಸ್ವೀಕರಿಸಲಿಲ್ಲ. ಕಡೆಗೆ ಆಧಾರ್ ಕಾರ್ಡ್ ತೋರಿಸಿ ನಾವಿಬ್ಬರು ವಯಸ್ಕರಾಗಿದ್ದು, ನಮ್ಮ ಇಚ್ಛೆಯ ಸಂಗಾತಿ ಆಯ್ಕೆ ಮಾಡುವ ಹಕ್ಕು ಹೊಂದಿರುವುದಾಗಿ ತಿಳಿಸಿದರು. ಇದರಿಂದಾಗಿ ಪೊಲೀಸರು ಮೂಕರಾದರು. ಕುಟುಂಬಸ್ಥರು ಕೂಡ ದಿಕ್ಕು ಕಾಣದೇ ಮನೆಗೆ ಹಿಂದಿರುಗಿದರು.

# ವಿಜಯ್ ದೇವರಕೊಂಡ ಜೊತೆ ನಟಿಸೋವಾಗ ಅನನ್ಯಾಗೆ ಹಿತವೆನಿಸಿಲ್ಲ ಏಕೆ?



ನಟಿ ಅನನ್ಯಾ ಪಾಂಡೆ ಅವರು ಸ್ಟಾರ್ ನಟಿಯ ಮಗಳು. ಆದರೆ, ಅವರಿಗೆ ಅಂದುಕೊಂಡಂತ ಗೆಲುವು ಮಾತ್ರ ಸಿಗುತ್ತಿಲ್ಲ. ಈ ಬಗ್ಗೆ ಅವರಿಗೆ ಬೇಸರ ಇದೆ. ಚಂಕಿ ಪಾಂಡೆ ಮಗಳು ಎನ್ನುವ ಹಣೆಪಟ್ಟಿ ಕಾರಣದಿಂದ ಅವರು ಟೀಕೆಗೆ ಒಳಗಾಗಿದ್ದೂ ಇದೆ. ಅವರಿಗೆ ನಟನೆ ಬರೋದಿಲ್ಲ ಎಂದು ಅನೇಕರು ಟೀಕೆ ಮಾಡಿದ್ದರು. ಅವರು 'ಲೈಗರ್' ಸಿನಿಮಾದಲ್ಲಿ ನಟಿಸುವಾಗ ಅವರಿಗೆ ಅನ್‌ಕಂಫರ್ಟ್ ಫೀಲ್ ಕೊಟ್ಟಿತ್ತಂತೆ. ಈ ಬಗ್ಗ ಚಂಕಿ ಪಾಂಡೆ ಮಾತನಾಡಿದ್ದಾರೆ.

'ಲೈಗರ್' ಚಿತ್ರದ ಬಗ್ಗೆ ಅನನ್ಯಾ ಪಾಂಡೆ ಅವರು ಸಾಕಷ್ಟು ನಿರೀಕ್ಷೆ ಇಟ್ಟುಕೊಂಡಿದ್ದರು. ಪುರಿ ಜಗನ್ನಾಥ್ ಅವರು ಈ ಚಿತ್ರವನ್ನು ನಿರ್ದೇಶನ ಮಾಡಿದ್ದರು. ಈ ಚಿತ್ರದ ಮೂಲಕ ವೃತ್ತಿ ಬದುಕು ಬದಲಾಗಬಹುದು ಎಂದು ಅವರು ಅಂದುಕೊಂಡಿದ್ದರು. ಈಗ ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ದೊಡ್ಡ ಫ್ಲಾಪ್ ಎನಿಸಿಕೊಂಡಿತು. ಈ ಸಿನಿಮಾ ಮಾಡುವಾಗ ಅವರಿಗೆ ಒಂದು ಭಯ ಇತ್ತಂತೆ.

ಅನನ್ಯಾ ಪಾಂಡೆ ಅವರದ್ದು ಇನ್ನೂ ಬೇಬಿ ಫೇಸ್. ಅವರು ಪ್ರಬುದ್ಧವಾಗಿ ಕಾಣಿಸಿಕೊಂಡಿಲ್ಲ. ಹೀಗಾಗಿ, 'ಲೈಗರ್' ಚಿತ್ರಕ್ಕೆ ತಾವು ಸೂಕ್ತ ಹೌದೋ ಅಥವಾ ಇಲ್ಲವೋ ಎನ್ನುವ ಭಯ ಕಾಡಿತ್ತು. ಇದು ಅವರ ಮೊದಲ ದೊಡ್ಡ ಕಮರ್ಷಿಯಲ್ ಸಿನಿಮಾ ಆಗಿತ್ತು.'ನೀನು ಈ ಸಿನಿಮಾನ ಮಾಡಲೇಬೇಕು ಎಂದು ಹೇಳಿದೆ. ಆದರೆ, ಅವಳು ಆರಂಭದಲ್ಲಿ ಮಾಡೋದಿಲ್ಲ ಎಂದಳು.

ನಾನು ಈ ಚಿತ್ರ ಮಾಡಲು ತುಂಬಾನೇ ಯಂಗ್ ಎಂದು ಹೇಳುತ್ತಿದ್ದಳು' ಎಂದಿದ್ದಾರೆ ಚಂಕಿ ಪಾಂಡೆ. ಆದರೆ ಸಿನಿಮಾ ಸೋತ ಬಳಿಕ, ಅನನ್ಯಾಗೆ ಈ ಪಾತ್ರ ಸೂಕ್ತವಲ್ಲ ಎನಿಸುತ್ತು ಎಂದು ಒಪ್ಪಿಕೊಂಡರು. 'ಅದು ಕಮರ್ಷಿಯಲ್ ಆಗಿ ದೊಡ್ಡ ಸಿನಿಮಾ. ಆದರೆ, ಅವಳು ಏನು ಅಂದುಕೊಂಡಿದ್ದಳೋ ಅದು ಸತ್ಯ. ಆ ಘಟನೆ ಬಳಿಕ ನಾನು ಅವಳಿಗೆ ಒತ್ತಡ ಹಾಕುವುದನ್ನೇ ನಿಲ್ಲಿಸಿದೆ. ನನ್ನದು ತಪ್ಪಿರಬಹುದು. ನಾನು ಓಲ್ಡ್‌ಸ್ಕೂಲ್ ತರಹದವನು. ನನಗೆ ಏನು ಗೊತ್ತಿಲ್ಲ' ಎಂದಿದ್ದಾರೆ ಚಂಕಿ ಪಾಂಡೆ.

'ಲೈಗರ್' ಚಿತ್ರ ಪುರಿ ಜಗನ್ನಾಥ್ ನಿರ್ದೇಶನ ಮಾಡಿದ್ದರು. ಇದಾದ ಬಳಿಕ ವಿಜಯ್ ದೇವರಕೊಂಡ ಅವರು ಸಾಕಷ್ಟು ಸಮಸ್ಯೆ ಎದುರಿಸಿದರು.

# 'ನಾನು ಸಾಯೋವರೆಗೂ ಇಲ್ಲೇ ಇರ್ತೀನಿ'



ಪ್ರತಿ ವರ್ಷ ಫೆಬ್ರವರಿ 16 ಬಂತು ಅಂದ್ರೆ ನಟ ದರ್ಶನ್ ತೂಗುದೀಪ ಮನೆ ಮುಂದೆ ಜನವೋ ಜನ. ತಮ್ಮ ನೆಚ್ಚಿನ ನಾಯಕನಿಗೆ ಜನ್ಮದಿನದ ಶುಭಾಶಯಗಳನ್ನು ತಿಳಿಸಲು ಅಭಿಮಾನಿಗಳು ಮಧ್ಯ ರಾತ್ರಿಯೇ ಸರದಿಸಾಲಿನಲ್ಲಿ ನಿಲ್ಲುತ್ತಿದ್ದರು. ಆದರೆ ಈ ವರ್ಷ ದರ್ಶನ್ ತಮ್ಮ ಜನ್ಮದಿನವನ್ನು ಆಚರಿಸಿಕೊಳ್ತಿಲ್ಲ. ಹೌದು, ಈ ಬಗ್ಗೆ ಅವರೇ ವಿಶೇಷ ವಿಡಿಯೋ ಮಾಡಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.

ನನ್ನ ಅಭಿಮಾನಿಗಳಿಗೆ ಧನ್ಯವಾದ ಹೇಳಲಾ? ಥ್ಯಾಂಕ್ಸ್ ಹೇಳಲಾ? ಯಾವ ಪದ ಬಳಸಬೇಕು ಅಂತ ಗೊತ್ತಾಗ್ತಿಲ್ಲ. ನೀವು ತೋರಿಸಿದ ಪ್ರೀತಿಗೆ ಬೆಲೆ ಕಟ್ಟೋಕೆ ಆಗೋದಿಲ್ಲ. ನಾನು ಈ ವಿಡಿಯೋ ಮಾಡೋಕೆ ಜನ್ಮದಿನ ಕಾರಣ. ಪ್ರತಿಸಲವೂ ನಾನು ನಿಂತುಕೊಂಡು ನಿಮಗೆ ಶೇಕ್‌ಹ್ಯಾಂಡ್ ಕೊಟ್ಟು ಶುಭಾಶಯ ಹೇಳ್ತಿದ್ದೆ. ಆದರೆ ಈ ಸಲ ಜನ್ಮದಿನ ಆಚರಿಸಿಕೊಳ್ತಿಲ್ಲ. ಯಾವತ್ತೂ ಒಂದು ಇಂಜೆಕ್ಷನ್ ತಗೊಂಡು ನಿಂತುಕೊಳ್ತಿದ್ದೆ, ಹದಿನೈದು ಆರಾಮ್ ಇರ್ತಿದ್ದೆ. ಆದರೆ ಈ ಸಲ ಆಗ್ತಿಲ್ಲ. ಇದೊಂದು ಸಲ ನನ್ನನ್ನು ಕ್ಷಮಿಸಿ. ನಾನು ಇನ್ನು ಸ್ವಲ್ಪ ದಿನಗಳ ಬಳಿಕ ನಿಮ್ಮೆಲ್ಲರನ್ನು ವೈಯಕ್ತಿಕವಾಗಿ ಭೇಟಿ ಆಗ್ತೀನಿ.

ಸ್ಪೈನಲ್ ಕಾರ್ಡ್ ಸಮಸ್ಯೆ ಆಗಿರೋದು ಎಲ್ಲರಿಗೂ ಗೊತ್ತಿದೆ. ನಾನು ಆಪರೇಶನ್ ಮಾಡಿಸಲೇಬೇಕು. ನನ್ನ ಕಾಲು ಈಗಾಗಲೇ ನಂಬ್ ಆಗ್ತಿದೆ. ಹೀಗಾಗಿ ಆರೋಗ್ಯದ ಕಡೆಗೆ ಗಮನ ಕೊಡಲೇಬೇಕು.

ಸೂರಪ್ಪ ಬಾಬು ಅವರ ಹಣವನ್ನು ನಾನು ಮರಳಿ ನೀಡಿದ್ದೇನೆ. ಸೂರಪ್ಪ ಬಾಬು ಅವರಿಗೆ ಆರ್ಥಿಕ ಸಮಸ್ಯೆ ಇದ್ದಾಗಲೇ ನನ್ನ ಜೊತೆ ಸಿನಿಮಾ ಮಾಡಬೇಕು ಅಂತ ಮುಂದೆ ಬಂದರು. ಈ ಸಿನಿಮಾ ಮಾಡಿದ್ರೆ ಅವರ ಸಮಸ್ಯೆ ಬಗೆಹರಿಯತ್ತೆ ಅಂತ ಅವರು ಅಂದುಕೊಂಡಿದ್ದರು. ನಾನು ಆಗ ಸಿನಿಮಾ ಮಾಡೋಣ ಅಂತ ಒಪ್ಪಿಕೊಂಡೆ. ಆದರೆ ಈಗ ಇಷ್ಟು ಸಮಯ ವ್ಯರ್ಥ ಆಗಿದೆ. ಇನ್ನು ಕೂಡ ನಾನು ಸೂರಪ್ಪ ಬಾಬು ಹಣ ಇಟ್ಕೊಂಡರೆ ಸರಿ ಇರೋದಿಲ್ಲ ಅಂತ ಮರಳಿ ಹಣ ನೀಡಿದ್ದೇನೆ. ಮುಂದೊಂದು ದಿನ ಅವಕಾಶ ಸಿಕ್ಕರೆ, ಸ್ಕ್ರಿಪ್ಟ್ ಸಿಕ್ಕರೆ ನಾನು ಸೂರಪ್ಪ ಬಾಬು ಜೊತೆ ಸಿನಿಮಾ ಮಾಡ್ತೀನಿ.

ನಾನು ಹಾಗೂ ಜೋಗಿ ಪ್ರೇಮ್ ಮತ್ತೆ ಸಿನಿಮಾ ಮಾಡ್ತೀವಿ. ನಮ್ಮ ಗುರುಗಳು, ರಕ್ಷಿತಾ ಆಸೆ ಆಗಿದ್ದಕ್ಕೆ ನಾನು ಖಂಡಿತ ಪ್ರೇಮ್ ಜೊತೆ ಸಿನಿಮಾ ಮಾಡ್ತೀನಿ. ಕೆವಿಎನ್ ಪ್ರೊಡಕ್ಷನ್ಸ್ ಅವರು ಈಗಾಗಲೇ ಬೇರೆ ಸಿನಿಮಾ ಮಾಡುತ್ತಿದ್ದಾರೆ. ಯಾವುದೇ ಪ್ರೊಡಕ್ಷನ್ಸ್ ಆಗಿರಲೀ, ಇಂದಿನ ಕಾಲಘಟಕ್ಕೆ ಸಿನಿಮಾ ಮಾಡೋದು ಸುಲಭ ಇಲ್ಲ. ದುಡ್ಡು ಹೊಂದಿಸೋದು ಒಂದೇ ನಿರ್ಮಾಪಕನ ಕೆಲಸ ಅಲ್ಲ, ಇನ್ನೂ ಕೆಲಸ ಇರತ್ತೆ. ಅಡ್ವಾನ್ಸ್ ಹಣ ಕೊಟ್ಟು, ರಿಲೀಸ್ ಆಗುವವರೆಗೆ ನಿರ್ಮಾಪಕನ ಕೆಲಸ ಜಾಸ್ತಿ ಇರುತ್ತದೆ.

ಬೇರೆ ಸಿನಿಮಾ ಜೊತೆ ನನ್ನ ಸಿನಿಮಾ ಮಾಡೋದು ಕೂಡ ಸವಾಲಿನ ಕೆಲಸ ಆಗತ್ತೆ. ನನ್ನಂಥವನ ಮೇಲೆ ನೀವು ಕೊಟ್ಟ ಪ್ರೀತಿಗೆ ಬೆಲೆ ಕಟ್ಟೋಕೆ ಆಗೋದಿಲ್ಲ. ನನ್ನ ನಂಬಿಕೊಂಡ ಎಲ್ಲರಿಗೂ ಧನ್ಯವಾದಗಳು. ಎಲ್ಲ ಟೈಮ್‌ನಲ್ಲೂ ಜೊತೆಗಿದ್ದ ನಟ ಧನ್ವೀರ್, ಪ್ರಾಣಸ್ನೇಹಿತೆ ರಕ್ಷಿತಾ ಪ್ರೇಮ್, ಬುಲ್‌ಬುಲ್ ರಚಿತಾ ಪ್ರೇಮ್‌ಗೆ ಧನ್ಯವಾದಗಳು.

ನಾನು ಬೇರೆ ಭಾಷೆಗೆ ಹೋಗ್ತೀನಿ ಅಂತ ಹೇಳಲಾಗಿತ್ತಂತೆ. ನನಗೆ ಇಲ್ಲೇ ಇಷ್ಟು ಪ್ರೀತಿ ಸಿಕ್ಕಿದೆ ಅಂದ್ಮೇಲೆ ನಾನ್ಯಾಕೆ ಬೇರೆ ಕಡೆ ಹೋಗಲಿ? ಸಾಯೋವರೆಗೂ ನಾನು ಇಲ್ಲೇ ಇರ್ತೀನಿ. ಕಾವೇರಿ ಕೊಡಗಿನಲ್ಲಿ ಹುಟ್ಟಿ ಬೇರೆ ಕಡೆ ಹರಿಯುತ್ತಾಳೆ. ನಾನು ಕೊಡಗಿನಲ್ಲಿ ಹುಟ್ಟಿದ್ದೇನೆ. ನಾನು ಸೀಮಿತ ಆಗಿರೋದು ಮೇಕೆದಾಟುವರೆಗೆ ಮಾತ್ರವೇ. ನನ್ನ ಸಿನಿಮಾಗಳು ಬೇರೆ ಭಾಷೆಗೆ ಡಬ್ ಆಗಬಹುದು, ಆದರೆ ನಾನು ಇಲ್ಲೇ ಇರ್ತೀನಿ. ನಾನು ಕನ್ನಡದಲ್ಲಿಯೇ ಇರ್ತೀನಿ, ಕನ್ನಡದಲ್ಲೇ ಸಿನಿಮಾ ಮಾಡ್ತೀನಿ. ನನ್ನ ಜನ್ಮದಿನಕ್ಕೆ ಶುಭಾಶಯ ತಿಳಿಸಿದ ಎಲ್ಲರಿಗೂ ಧನ್ಯವಾದಗಳು. ಆದಷ್ಟು ಬೇಗ ನಿಮ್ಮೆಲ್ಲರಿಗೂ ತಿಳಿಸುವೆ.

# ಟೆನಿಸ್‌ನಲ್ಲಿ ಕರ್ನಾಟಕಕ್ಕೆ ಬೆಳ್ಳಿ, ತಮಿಳುನಾಡಿಗೆ ಚಿನ್ನ



**ಡೆಹ್ರಾಡೂನ್:** 38ನೇ ರಾಷ್ಟ್ರೀಯ ಗೇಮ್ಸ್‌ನ ಟೆನಿಸ್‌ನಲ್ಲಿ ಕರ್ನಾಟಕ ಪುರುಷರ ತಂಡ ಬೆಳ್ಳಿ ಪದಕ ಗೆದ್ದಿದೆ. ಕ್ರೀಡಾಕೂಟದ ಟೆನಿಸ್‌ನಲ್ಲಿ ರಾಜ್ಯ ಪುರುಷರ ತಂಡ ಪ್ರಾಬಲ್ಯ ಸಾಧಿಸಿದರೂ, ಚಿನ್ನ ಗೆಲ್ಲುವ ಆಸೆಗೆ ತಮಿಳುನಾಡು ತಣ್ಣೀರೆರಚಿತು. ಶುಕ್ರವಾರ ನಡೆದ ಫೈನಲ್‌ನಲ್ಲಿ ರಾಜ್ಯ ತಂಡಕ್ಕೆ 0–2 ಸೋಲು ಎದುರಾಗಿ, ಬೆಳ್ಳಿಗೆ ತೃಪ್ತಿಪಟ್ಟುಕೊಳ್ಳಬೇಕಾಯಿತು.

ಮೊದಲ ಸಿಂಗಲ್ಸ್‌ನಲ್ಲಿ ರಾಜ್ಯದ ರಿಶಿ ರೆಡ್ಡಿ ವಿರುದ್ಧ ತಮಿಳುನಾಡಿನ ಅಭಿನವ್ ಷಣ್ಮುಗಂ 3–6, 7–6(8–6), 6–4ರಲ್ಲಿ ಗೆಲುವು ಸಾಧಿಸಿದರು. 2ನೇ ಸಿಂಗಲ್ಸ್‌ನಲ್ಲಿ ಕರ್ನಾಟಕದ ನಂ.1 ಆಟಗಾರ ಪ್ರಜ್ವಲ್ ದೇವ್‌ಗೂ ಆಘಾತ ಎದುರಾಯಿತು. ಅವರು ತಾರಾ ಆಟಗಾರ ಮನೀಶ್ ಸುರೇಶ್‌ಕುಮಾರ್ ವಿರುದ್ಧ 7–5, 4–6, 4–6 ಸೆಟ್‌ಗಳಲ್ಲಿ ವೀರೋಚಿತ ಸೋಲು ಕಂಡರು.

ಬೆಳ್ಳಿ ವಿಜೇತ ಕರ್ನಾಟಕ ತಂಡದಲ್ಲಿ ಪ್ರಜ್ವಲ್ ದೇವ್, ರಿಶಿ ರೆಡ್ಡಿ ಜೊತೆ ನಿಕಿ ಪೂನಚ್ಚ, ಆದಿಲ್ ಕಲ್ಯಾಣ್‌ಪುರ ಹಾಗೂ ಮನೀಶ್ ಜಿ. ಇದ್ದರು. ಈ ತಂಡ ಸೆಮಿಫೈನಲ್‌ನಲ್ಲಿ ತೆಲಂಗಾಣ ವಿರುದ್ಧ ಗೆದ್ದಿತ್ತು. ಮಹಿಳಾ ವಿಭಾಗದಲ್ಲಿ ಕರ್ನಾಟಕ ತಂಡ ಕ್ವಾರ್ಟರ್ ಫೈನಲ್‌ನಲ್ಲಿ ತಮಿಳುನಾಡು ವಿರುದ್ಧ ಸೋತು ಹೊರಬಿದ್ದಿತ್ತು.

# ಪ್ರಶಾಂತ್ ನೀಲ್‌ಗೆ ಇದೆ ಒಂದು ಒಸಿಡಿ



ಪ್ರಶಾಂತ್ ನೀಲ್ ಅವರು ದೊಡ್ಡ ಮಟ್ಟದಲ್ಲಿ ಜನಪ್ರಿಯತೆ ಪಡೆದಿದ್ದಾರೆ. 'ಕೆಜಿಎಫ್ 2' ನಿರ್ದೇಶನದ ಮೂಲಕ ಅವರು ಪಡೆದ ಖ್ಯಾತಿ ತುಂಬಾನೇ ದೊಡ್ಡದು. ಪ್ರಶಾಂತ್ ನೀಲ್ ಅವರ ಹಳೆಯ ಸಂದರ್ಶನದ ವಿಡಿಯೋ ವೈರಲ್ ಆಗಿದೆ. ಈ ವಿಡಿಯೋದಲ್ಲಿ ಅವರು ತಮಗೆ ಇರುವ ಒಸಿಡಿ ಬಗ್ಗೆ ಮಾತನಾಡಿದ್ದರು. ಅವರು ತಮ್ಮ ಸಿನಿಮಾ ತುಂಬಾನೇ ಬ್ಲ್ಯಾಕ್ ಆಗಿ ಮೂಡಿ ಬರೋದು ಏಕೆ ಎಂಬುದನ್ನು ವಿವರವಾಗಿ ಹೇಳಿದ್ದರು.

ರಾಜಮೌಳಿ ಅವರ ಸಿನಿಮಾಗಳು ತುಂಬಾನೇ ರಿಚ್ ಆಗಿ, ಕಲರ್‌ಫುಲ್ ಆಗಿ ಮೂಡಿ ಬರುತ್ತವೆ. ಆದರೆ, ಪ್ರಶಾಂತ್ ನೀಲ್ ಅವರಿಗೆ ಈ ರೀತಿ ಸಿನಿಮಾ ಮಾಡಲು ಸಾಧ್ಯವೇ ಇಲ್ಲವಂತೆ. ಇದಕ್ಕೆ ಕಾರಣ ಏನು ಎಂಬುದನ್ನು ಅವರು ಈ ಮೊದಲು ಹೇಳಿಕೊಂಡಿದ್ದರು. ಕಪ್ಪು ಎಂದರೆ ಅವರಿಗೆ ಇಷ್ಟ. ಅವರಿಗೆ ಕಲರ್‌ಫುಲ್ ಅಂದರೆ ಇಷ್ಟ ಆಗೋದಿಲ್ಲ. ಒಬ್ಸೆಸಿವ್–ಕಂಪಲ್ಸಿವ್ ಡಿಸಾರ್ಡರ್‌ನ ಶಾರ್ಟ್ ಆಗಿ ಒಸಿಡಿ ಎಂದು ಕರೆಯಲಾಗುತ್ತದೆ. ಬಣ್ಣಗಳ ವಿಚಾರದಲ್ಲಿ ಪ್ರಶಾಂತ್ ನೀಲ್ ಅವರಿಗೆ ಈ ಒಸಿಡಿ ಇದೆ. ಅಂದರೆ ಅವರಿಗೆ ಹೆಚ್ಚಿನ ಬಣ್ಣ ಇಷ್ಟ ಆಗುವುದಿಲ್ಲ. ಅದರಲ್ಲೂ ಡಾರ್ಕ್ ಬಣ್ಣ ಎಂದರೆ ದೂರವೇ ಇರುತ್ತಾರೆ. ಅದುವೇ ಸಿನಿಮಾದಲ್ಲೂ ರಿಫ್ಲೆಕ್ಟ್ ಆಗಿದೆ.

ಸಲಾರ್ ಸಿನಿಮಾದಲ್ಲಿ ಪೃಥ್ವಿರಾಜ್ ಸುಕುಮಾರನ್ ಅವರಿಗೆ ಒಂದು ಕುರ್ತಾ ತಂದುಕೊಟ್ಟರು. ಅದು ಕಪ್ಪು ಬಣ್ಣದಲ್ಲಿ ಇತ್ತು. ಆ ಬಳಿಕ ಇಷ್ಟ ಆಗಿಲ್ಲ ಎಂದಾಗ ಮತ್ತೊಂದು ತಂದರು. ಅದು ಕಪ್ಪು ಬಣ್ಣ ಹೊಂದಿತ್ತು. ನಂತರ ತಂದಿದ್ದೂ ಕಪ್ಪು ಬಣ್ಣದಲ್ಲೇ ಇತ್ತು. ಈ ಚಿತ್ರದ ಬಹುತೇಕ ದೃಶ್ಯಗಳಲ್ಲಿ ಪೃಥ್ವಿರಾಜ್ ಅವರು ಕಪ್ಪು ಬಣ್ಣದ ಡ್ರೆಸ್‌ನಲ್ಲೇ ಕಾಣಿಸಿಕೊಂಡಿದ್ದರು.

ಬಟ್ಟೆಗಳ ವಿಚಾರದಲ್ಲೂ ಪ್ರಶಾಂತ್ ನೀಲ್ ಅವರಿಗೆ ಹೆಚ್ಚು ಕಲರ್ಸ್ ಇಷ್ಟ ಆಗೋದಿಲ್ಲ. ಇದನ್ನು ಅವರು ಅನೇಕ ಬಾರಿ ಹೇಳಿದ್ದರು. ಹೀಗಾಗಿ, ಅವರು ಕಲರ್‌ಫುಲ್ ಡ್ರೆಸ್‌ಗಳನ್ನು ಧರಿಸಿಯೇ ಇರಲಿಲ್ಲ. ಸದ್ಯ ಅವರು 'ಸಲಾರ್ 2' ಸಿನಿಮಾ ಕೆಲಸಗಳಲ್ಲಿ ತೊಡಗಿಕೊಂಡಿದ್ದಾರೆ. ಜೂನಿಯರ್ ಎನ್‌ಟಿಆರ್ ಚಿತ್ರದಲ್ಲೂ ಅವರು ತೊಡಗಿಕೊಳ್ಳಬೇಕಿದೆ. 'ಕೆಜಿಎಫ್ 3' ಬಗ್ಗೆ ಘೋಷಣೆ ಆಗಲಿ ಎಂದು ಫ್ಯಾನ್ಸ್ ಕಾಯುತ್ತಿದ್ದಾರೆ.

# ತಂಡೇಲ್: ಮೀನುಗಾರನ ಎಮೋಷನಲ್ ಪ್ರೇಮಕಥೆ, ಮಿಂಚಿದ್ದು ಸಂಗೀತ



ಲವ್ ಸ್ಟೋರಿ ಚಿತ್ರದ ಮೂಲಕ ಮ್ಯಾಜಿಕ್ ಮಾಡಿದ್ದ ನಾಗ ಚೈತನ್ಯ ಮತ್ತು ಸಾಯಿ ಪಲ್ಲವಿ ಈಗ ತಂಡೇಲ್ ಚಿತ್ರದಲ್ಲಿ ಮತ್ತೆ ಒಂದಾಗಿದ್ದಾರೆ. ಚಂದು ಮೊಂಡೇಟಿ ನಿರ್ದೇಶನದ ಈ ಚಿತ್ರವನ್ನು ಗೀತಾ ಆರ್ಟ್ಸ್ ಬ್ಯಾನರ್ ನಲ್ಲಿ ಅಲ್ಲು ಅರವಿಂದ್ ನಿರ್ಮಿಸಿದ್ದಾರೆ. ಮೀನುಗಾರರ ಜೀವನವನ್ನಾಧರಿಸಿದ ಈ ಚಿತ್ರ ಹೇಗಿದೆ? ನಾಗ ಚೈತನ್ಯ ಮತ್ತು ಸಾಯಿ ಪಲ್ಲವಿ ಮತ್ತೆ ಮ್ಯಾಜಿಕ್ ಮಾಡಿದ್ದಾರಾ ಅನ್ನೋದನ್ನ ರಿವ್ಯೂನಲ್ಲಿ ನೋಡೋಣ.

ಶ್ರೀಕಾಕುಳಂನ ಮೀನುಗಾರರು ಗುಜರಾತ್ ಗೆ ಮೀನು ಹಿಡಿಯಲು ಹೋಗುವ ಕಥೆ. 9 ತಿಂಗಳು ಮೀನು ಹಿಡಿದು 3 ತಿಂಗಳು ಮನೆಯಲ್ಲಿರುತ್ತಾರೆ. ರಾಜು (ನಾಗ ಚೈತನ್ಯ) ಕೂಡ ತನ್ನ ತಂಡದ ಜೊತೆ ಹೋಗ್ತಾನೆ. ಸತ್ಯ (ಸಾಯಿ ಪಲ್ಲವಿ) ರಾಜುಗಾಗಿ ಕಾಯುತ್ತಿರುತ್ತಾಳೆ. ಒಬ್ಬ ಮೀನುಗಾರ ಸಾಯ್ತಾನೆ ಅಂತ ಗೊತ್ತಾದಾಗ ಸತ್ಯ ಭಯ ಪಡ್ತಾಳೆ. ರಾಜುಗೆ ಏನಾದ್ರೂ ಆದ್ರೆ ಅಂತ ಚಿಂತಿಸ್ತಾಳೆ. ರಾಜು ವಾಪಸ್ ಬಂದಾಗ ಈ ಸಲ ಹೋಗ್ಬೇಡ ಅಂತ ಕೇಳ್ತಾಳೆ. ಆದ್ರೆ ರಾಜು ತಂಡದ ನಾಯಕ, ಹೋಗಲೇಬೇಕು. ಸತ್ಯಗೆ ಗೊತ್ತಿಲ್ಲದೆ ಹೋಗ್ತಾನೆ. ಸತ್ಯಗೆ ಬೇಸರವಾಗಿ ರೈಲ್ವೆ ಸ್ಟೇಷನ್ ಗೆ ಹೋಗ್ತಾಳೆ. ಅಲ್ಲಿ ರಾಜು ನಾನು ಮುಖ್ಯನಾ ತಂಡ ಮುಖ್ಯನಾ ಅಂತ ಕೇಳಿದಾಗ ತಂಡ ಮುಖ್ಯ ಅಂತ ಹೇಳಿ ಹೋಗ್ತಾನೆ. ಸತ್ಯ ಏನ್ ಮಾಡ್ತಾಳೆ? ರಾಜು ತಂಡ ಪಾಕಿಸ್ತಾನದವರಿಗೆ ಸಿಕ್ಕಿಬೀಳುತ್ತೆ. ಅಲ್ಲಿ ಏನಾಗುತ್ತೆ? ಅಲ್ಲಿಂದ ಹೇಗೆ ತಪ್ಪಿಸಿಕೊಳ್ಳುತ್ತಾರೆ? ಸತ್ಯ ಬೇರೆ ಯಾರನ್ನಾದ್ರೂ ಮದುವೆಯಾಗ್ತಾಳಾ? ಇದೆಲ್ಲ ಉಳಿದ ಕಥೆ.

ತಂಡೇಲ್ ನಿಜ ಘಟನೆ ಆಧಾರಿತ ಚಿತ್ರ. ಶ್ರೀಕಾಕುಳಂನ ಮೀನುಗಾರರು ಗುಜರಾತ್ ಗೆ ಹೋಗಿ ಪಾಕಿಸ್ತಾನದವರಿಗೆ ಸಿಕ್ಕಿಬಿದ್ದ ಘಟನೆಯನ್ನಾಧರಿಸಿದೆ. ಚಿತ್ರ ರಾಜು ಮತ್ತು ಸತ್ಯ ಪ್ರೇಮಕಥೆಯನ್ನೇ ಹೈಲೈಟ್ ಮಾಡುತ್ತೆ. ಮೊದಲರ್ಧ ಪೂರ್ತಿ ಪ್ರೇಮಕಥೆಯೇ. ಚೆನ್ನಾಗಿದ್ರೂ ಸ್ವಲ್ಪ ಬೋರ್ ಅನ್ನಿಸುತ್ತೆ. ಮನರಂಜನೆ ಕಮ್ಮಿ. ಎರಡನೇ ಅರ್ಧದಲ್ಲೂ ಅದೇ. ಚಿತ್ರ ಪೂರ್ತಿ ಭಾವನಾತ್ಮಕ. ಪಾಕಿಸ್ತಾನದಲ್ಲಿ ದೇಶಭಕ್ತಿಯನ್ನೂ ತೋರಿಸಿದ್ದಾರೆ. ಆದ್ರೆ ಅದು ಸ್ವಲ್ಪ ಜಾಸ್ತಿ ಅನ್ನಿಸುತ್ತೆ. ಕ್ಲೈಮ್ಯಾಕ್ಸ್ ಚಿತ್ರದ ಪ್ಲಸ್ ಪಾಯಿಂಟ್. ನಾಗ ಚೈತನ್ಯ ಮತ್ತು ಸಾಯಿ ಪಲ್ಲವಿ ಇಬ್ಬರೂ ಅಲ್ಲಿ ಅದ್ಭುತವಾಗಿ ನಟಿಸಿದ್ದಾರೆ. ಭಾವನಾತ್ಮಕ ದೃಶ್ಯಗಳು ಹೃದಯಸ್ಪರ್ಶಿ. ಚಿತ್ರ ಒಂದು ಎಮೋಷನಲ್ ರೋಲರ್ ಕೋಸ್ಟರ್. ಸ್ವಲ್ಪ ಮನರಂಜನೆ ಇದ್ರೆ ಚೆನ್ನಾಗಿರುತ್ತಿತ್ತು. ಕೆಲವು ಲಾಜಿಕ್ ಮಿಸ್ ಆಗಿದೆ. ಕಥೆ ಮೇಲೆ ಇನ್ನೂ ಕೆಲಸ ಮಾಡಬಹುದಿತ್ತು.

ಪಾಕಿಸ್ತಾನದ ಜೈಲಿನ ದೃಶ್ಯಗಳು ಅಷ್ಟೇನೂ ಕನೆಕ್ಟ್ ಆಗೋಲ್ಲ. ಆ ಭಾಗ ಸ್ವಲ್ಪ ಉದ್ದ ಅನ್ನಿಸುತ್ತೆ. ಪಾಕಿಸ್ತಾನ ಮತ್ತು ದೇಶಭಕ್ತಿಯ ಭಾಗ ಸ್ವಲ್ಪ ಓವರ್ ಆಗಿದೆ. ಕ್ಲೈಮ್ಯಾಕ್ಸ್ ಚಿತ್ರದ ಹೈಲೈಟ್. ಸಾಯಿ ಪಲ್ಲವಿ ಮತ್ತು ನಾಗ ಚೈತನ್ಯ ಇಬ್ಬರೂ ಅಲ್ಲಿ ಅದ್ಭುತವಾಗಿ ನಟಿಸಿದ್ದಾರೆ. ಭಾವನಾತ್ಮಕ ದೃಶ್ಯಗಳು ಹೃದಯಸ್ಪರ್ಶಿ. ರಾಜುವಿಗಾಗಿ ಸತ್ಯ ಕಾಯುವುದು, ಅವನನ್ನ ಬಿಟ್ಟು ಇರಲಾರದೆ ಒದ್ದಾಡುವುದು ಮನಸ್ಸಿಗೆ ನೋವುಂಟು ಮಾಡುತ್ತೆ. ಚಿತ್ರ ಒಂದು ಎಮೋಷನಲ್ ರೋಲರ್ ಕೋಸ್ಟರ್. ಸ್ವಲ್ಪ ಮನರಂಜನೆ ಇದ್ರೆ ಚೆನ್ನಾಗಿರುತ್ತಿತ್ತು.

ರಾಜು ಪಾತ್ರದಲ್ಲಿ ನಾಗ ಚೈತನ್ಯ ಅದ್ಭುತವಾಗಿ ನಟಿಸಿದ್ದಾರೆ. ತಂಡೇಲ್ ಅವರ ನಟನೆಯನ್ನ ಮತ್ತೊಂದು ಹಂತಕ್ಕೆ ಕೊಂಡೊಯ್ದಿದೆ. ಸಾಯಿ ಪಲ್ಲವಿಗೆ ಪೈಪೋಟಿ ನೀಡಿದ್ದಾರೆ. ರಾಜು ಪಾತ್ರಕ್ಕಾಗಿ ತುಂಬ ಶ್ರಮವಹಿಸಿದ್ದಾರೆ. ಅದು ಪ್ರತಿ ದೃಶ್ಯದಲ್ಲೂ ಕಾಣುತ್ತದೆ. ನರ್ತನ ಕೂಡ ಚೆನ್ನಾಗಿದೆ. ಸತ್ಯ ಪಾತ್ರದಲ್ಲಿ ಸಾಯಿ ಪಲ್ಲವಿ ಎಂದಿನಂತೆ ಅದ್ಭುತ. ಡಿಗ್ಲಾಮರ್ ಲುಕ್ ನಲ್ಲಿ ಮಿಂಚಿದ್ದಾರೆ. ಎರಡನೇ ಅರ್ಧದಲ್ಲಿ ಅವರ ನಟನೆ ಪೀಕ್. ಚಿತ್ರವನ್ನ ಅವರೇ ಮುನ್ನಡೆಸುತ್ತಾರೆ. ನರ್ತನದ ಬಗ್ಗೆ ಹೇಳಬೇಕಾಗಿಲ್ಲ. ರಾಜು ಮತ್ತು ಸತ್ಯ ಪಾತ್ರದಲ್ಲಿ ನಾಗ ಚೈತನ್ಯ ಮತ್ತು ಸಾಯಿ ಪಲ್ಲವಿ ಧೂಳೆಬ್ಬಿಸಿದ್ದಾರೆ. ಉಳಿದ ನಟರು ಕೂಡ ಚೆನ್ನಾಗಿ ನಟಿಸಿದ್ದಾರೆ.

ಚಿತ್ರ ತಾಂತ್ರಿಕವಾಗಿ ಚೆನ್ನಾಗಿದೆ. ದೃಶ್ಯಗಳು ರಿಚ್ ಆಗಿವೆ. ಕ್ಯಾಮೆರಾ ಕೆಲಸ ಚೆನ್ನಾಗಿದೆ. ಸಮುದ್ರ ಮತ್ತು ಬೀಚ್ ದೃಶ್ಯಗಳು ಸುಂದರವಾಗಿವೆ. ಸಂಕಲನ ಇನ್ನೂ ಚೆನ್ನಾಗಿರಬಹುದಿತ್ತು. ಸಂಗೀತ ಚಿತ್ರದ ಪ್ಲಸ್ ಪಾಯಿಂಟ್. ಹಾಡುಗಳು ಮತ್ತು ಹಿನ್ನೆಲೆ ಸಂಗೀತ ಚೆನ್ನಾಗಿದೆ. ನಿರ್ದೇಶಕ ಚಂದು ಮೊಂಡೇಟಿ ನಟರಿಂದ ಉತ್ತಮ ನಟನೆ ತೆಗೆಸುವಲ್ಲಿ ಯಶಸ್ವಿಯಾಗಿದ್ದಾರೆ. ಕಥೆ ಇನ್ನೂ ಗ್ರಿಪ್ಪಿಂಗ್ ಆಗಿರಬಹುದಿತ್ತು. ಸಂಭಾಷಣೆಗಳು ಸಾಮಾನ್ಯ. ಪಾಕಿಸ್ತಾನದ ಭಾಗವನ್ನ ಇನ್ನೂ ಚೆನ್ನಾಗಿ ನಿರ್ವಹಿಸಬಹುದಿತ್ತು. ಪ್ರೇಮಕಥೆಯಲ್ಲೂ ಇನ್ನೂ ಕೆಲಸ ಮಾಡಬಹುದಿತ್ತು. ಭಾವನೆ ಮತ್ತು ಡ್ರಾಮಾಗೆ ಪ್ರಾಧಾನ್ಯತೆ ನೀಡಿದ್ದಾರೆ.

ಮೊದಲಾರ್ಧದಲ್ಲಿ ಕೆಲವು ಫೀಲ್ ಗುಡ್ ಮೂಮೆಂಟ್ಸ್, ಹಾಡುಗಳು, ಹಿನ್ನೆಲೆ ಸಂಗೀತ, ಇಂಟರ್ವೆಲ್ ದೃಶ್ಯಗಳು ಚೆನ್ನಾಗಿವೆ. ಆದರೆ ಮೊದಲ ಒಂದು ಗಂಟೆ ಸ್ವಲ್ಪ ನಿಧಾನವಾಗಿದೆ. ದೇವಿಶ್ರೀ ಪ್ರಸಾದ್ ಅವರ ಸಂಗೀತ ಅದ್ಭುತವಾಗಿದೆ.

ಚಂದು ಮೊಂಡೇಟಿ ಅವರ ನಿರ್ದೇಶನ ನಿರೀಕ್ಷಿತ ಮಟ್ಟದಲ್ಲಿಲ್ಲ. ಆರ್ಟಿಕಲ್ 370, ಭಾರತ–ಪಾಕಿಸ್ತಾನ ದೃಶ್ಯಗಳನ್ನು ಚೆನ್ನಾಗಿ ಚಿತ್ರಿಸಲಾಗಿದೆ. ಆದರೆ ಕೆಲವು ದೃಶ್ಯಗಳು ಕೃತಕವಾಗಿವೆ. ಎರಡನೇ ಅರ್ಧದ ಕೊನೆಯ 20 ನಿಮಿಷಗಳ ದೃಶ್ಯಗಳು ಚೆನ್ನಾಗಿವೆ. ನಾಗ ಚೈತನ್ಯ, ಸಾಯಿ ಪಲ್ಲವಿ ಚಿತ್ರದುದ್ದಕ್ಕೂ ಚೆನ್ನಾಗಿ ನಟಿಸಿದ್ದಾರೆ. ಆದರೆ ನಿರೂಪಣೆ ಸ್ವಲ್ಪ ನಿಧಾನವಾಗಿದೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**

Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123

Email-mussanje2010@gmail.com, Phone: **9448074878**